ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 131 RNI Number : KNKAN/25/A2770 20-05-2026 Wednesday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :131 ರಾಯಚೂರು 20-05-2026 ಬುಧವಾರ ಪುಟ 04 ಬೆಲೆ ರೂ.2/- ಮೊ:8660146563

ತುಮಕೂರಿನ ಸಾಧನಾ ಸಮಾವೇಶದಲ್ಲಿ ಸೌಲಭ್ಯಗಳ ವಿತರಣೆ ದಾಖಲೆ

ತುಮಕೂರು, ಮೇ 19–

ರಾಜ್ಯ ಸರ್ಕಾರದ ಮೂರು ವರ್ಷಗಳ ಸಾಧನೆ-ಸಾರ್ಥಕ ಸೇವೆಗಳ ಸಮರ್ಪಣಾ ಸಮಾವೇಶದಲ್ಲಿ ಏಕಕಾಲಕ್ಕೆ ಕಂದಾಯ ಇಲಾಖೆಯಿಂದ ಅತ್ಯಧಿಕ ಹಕ್ಕು ಪತ್ರ ಹಾಗೂ ಇತರ ದಸ್ತಾವೇಜುಗಳನ್ನು ವಿತರಿಸುವ ಮೂಲಕ ದಾಖಲೆ ನಿರ್ಮಾಣ ಮಾಡಲಾಗಿದೆ.ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಸಂಪುಟದ ಎಲ್ಲಾ ಸಚಿವರು ಸಮಾವೇಶದಲ್ಲಿ ಭಾಗವಹಿಸಿದ್ದರು.

ರಾಜ್ಯದ ವಿವಿಧ ಜಿಲ್ಲೆಗಳಿಂದ ಸುಮಾರು 2 ಲಕ್ಷ ಜನ ಸಮಾವೇಶದಲ್ಲಿ ಭಾಗವಹಿಸಿದ್ದು, ಇದಕ್ಕಾಗಿ ಕೆಎಸ್‌ಆರ್‌ಟಿಸಿ, ಬಿಎಂಟಿಸಿ ಸೇರಿದಂತೆ ವಿವಿಧ ಸಾರಿಗೆ ನಿಗಮಗಳಿಂದ 3 ಸಾವಿರ ಬಸ್‌ಗಳನ್ನು ಬಾಡಿಗೆಗೆ ಪಡೆಯಲಾಗಿತ್ತು. ತುಮಕೂರು ನಗರದ ಸರ್ಕಾರಿ ಕಿರಿಯ ಕಾಲೇಜು ಮೈದಾನದಲ್ಲಿ ಬೃಹತ್ ವೇದಿಕೆ ನಿರ್ಮಿಸಿ 60 ಸಾವಿರಕ್ಕೂ ಹೆಚ್ಚು ಆಸನಗಳ ವ್ಯವಸ್ಥೆ ಮಾಡಲಾಗಿತ್ತು. ಭದ್ರತೆಗಾಗಿ ಸುಮಾರು 4,500ಕ್ಕೂ ಹೆಚ್ಚು ಪೊಲೀಸ್ ಅಧಿಕಾರಿಗಳು ಹಾಗೂ



ಸಿಬ್ಬಂದಿಗಳನ್ನು ನಿಯೋಜನೆಗೊಳಿಸಲಾಗಿತ್ತು. ಸಮಾವೇಶದ ಬಳಿಕ ಮಧ್ಯಾಹ್ನ ಕಾರ್ಯಕ್ರಮಕ್ಕೆ ಆಗಮಿಸಿದ ಎಲ್ಲರಿಗೂ ಭೋಜನದ ವ್ಯವಸ್ಥೆ ಕಲ್ಪಿಸಲಾಗಿತ್ತು.

ಗೃಹ ಸಚಿವ ಡಾ.ಜಿ.ಪರಮೇಶ್ವರ್, ಕಂದಾಯ ಸಚಿವ ಕೃಷ್ಣಭೈರೇಗೌಡ, ಮಾಜಿ ಸಚಿವ ಕೆ.ಎನ್.ರಾಜಣ್ಣ ಸೇರಿದಂತೆ ವಿವಿಧ ನಾಯಕರು ಪ್ರತಿ ಹಂತದಲ್ಲೂ ಕಾರ್ಯಕ್ರಮದ ಪೂರ್ವ ತಯಾರಿಗಳನ್ನು ನಿಗಾವಹಿಸಿದ್ದರು.2023ರ ಮೇ 20ಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಮೂರು ವರ್ಷಗಳಾಗಿವೆ.

ವೇತನ ಹೆಚ್ಚಳ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಸಾರಿಗೆ ನಿಗಮಗಳ ನೌಕರರು ನಾಳೆಯಿಂದ ಅನಿರ್ಧಿಷ್ಟಾವಧಿ ಮುಷ್ಕರ ಆರಂಭಿಸಲಿದ್ದಾರೆ. ಸಮಾವೇಶಕ್ಕೆ ಜನರನ್ನು ಕರೆ ತರಲು ಸಾರಿಗೆ ಬಸ್‌ಗಳನ್ನು ನಿಯೋಜಿಸಲಾಗಿತ್ತು, ಮುಷ್ಕರದ ಕಾರಣಕ್ಕಾಗಿ ಚಾಲಕರು ಮತ್ತು ನಿರ್ವಾಹಕರು ಕರ್ತವ್ಯಕ್ಕೆ ಹಾಜರಾಗದಿದ್ದರೆ ಸಾರಿಗೆ ವ್ಯವಸ್ಥೆ ಏರುಪೇರಾಗಲಿದೆ ಎಂಬ ಹಿನ್ನೆಲೆಯಲ್ಲಿ ಸಮಾವೇಶವನ್ನು ಒಂದು ದಿನ ಮೊದಲೇ ಪೂರ್ವ ನಿಗದಿ ಮಾಡಲಾಗಿದೆ.

ಅದರಂತೆ ಇಂದು ಬೃಹತ್ ಪ್ರಮಾಣದ ಸಮಾವೇಶ ನಡೆದಿದೆ. ಇದೇ ವೇಳೆ 662 ಕೋಟಿ ರೂ.ಗಳಷ್ಟು ಮೌಲ್ಯದ ವಿವಿಧ ಯೋಜನೆಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೆರವೇರಿಸಿದ್ದಾರೆ.

ಬಹುಮುಖ್ಯವಾಗಿ ಕಂದಾಯ ಇಲಾಖೆಯಿಂದ ಆಸ್ತಿಗಳ ದಾಖಲಾತಿಗಳು ಮತ್ತು ವಿವಿಧ ಯೋಜನೆಯ ಫಲಾನುಭವಿಗಳಿಗೆ ಪ್ರಮಾಣಪತ್ರ ವಿತರಿಸಲಾಗಿದೆ.

ಕಳೆದ ಮೂರು ವರ್ಷಗಳಿಂದಲೂ ಕಂದಾಯ ಇಲಾಖೆ ಹಲವಾರು ಸುಧಾರಣಾ ಕ್ರಮಗಳನ್ನು ಕೈಗೊಂಡು ಸುಲಭ ವ್ಯವಸ್ಥೆಗಳನ್ನು ರೂಢಿಸಿಕೊಂಡಿದೆ. ತುಮಕೂರು ಸಮಾವೇಶದಲ್ಲಿಂದು 1,52,492 ಕುಟುಂಬಗಳಿಗೆ ಹಕ್ಕು ಪತ್ರ ವಿತರಿಸಲಾಗಿದೆ. ಅದೇ ರೀತಿ 14.39 ಲಕ್ಷ ಪೌತಿ ಖಾತೆಗಳನ್ನು ನೀಡಲಾಗಿದೆ. ಎರಡೂವರೆ ಲಕ್ಷ ಪೋಡಿ ಕೇಸ್‌ಗಳನ್ನು ಪೂರ್ಣಗೊಳಿಸಲಾಗಿದೆ.

ಕಂದಾಯ ಇಲಾಖೆಯಲ್ಲಿ ಉಪ ವಿಭಾಗಾಧಿಕಾರಿ ಬಳಿ 73 ಸಾವಿರಕ್ಕೂ ಅಧಿಕ ಪ್ರಕರಣಗಳು ಅವಧಿ ಮೀರಿ ಬಾಕಿ ಉಳಿದಿದ್ದವು. ಅವುಗಳಲ್ಲಿ 60 ಸಾವಿರ ಪ್ರಕರಣಗಳನ್ನು ಸಮರೋಪಾದಿಯಲ್ಲಿ

3 ನೇ ಪುಟಕ್ಕೆ



ಏಮ್ಸ್ ಹೋರಾಟ 1468ನೇ ದಿನಕ್ಕೆ

ರಾಯಚೂರು,ಮೇ.19

ಜಿಲ್ಲಾ ಏಮ್ಸ್ ಹೋರಾಟ ಸಮಿತಿ ನಡೆಸುತ್ತಿರುವ ಅನಿರ್ದಿಷ್ಟ ಧರಣಿ ಸತ್ಯಾಗ್ರಹ ಇಂದಿಗೆ 1468 ನೇ ದಿನಕ್ಕೆ ಕಾಲಿಟ್ಟಿದೆ.

ಕರ್ನಾಟಕ ರಾಜ್ಯ ಸರ್ಕಾರದ ಶಿಫಾರಸ್ಸು ಗಳನ್ನು ಕೇಂದ್ರ ಸರ್ಕಾರ ಗೌರವಿಸಬೇಕು ಮತ್ತು ಸುಧೀರ್ಘವಾಗಿ ನಡೆಯುತ್ತಿರುವ ಹೋರಾಟಕ್ಕೆ ಕೂಡಲೇ ಸ್ಪಂದಿಸಿ ರಾಯಚೂರಿಗೆ ಏಮ್ಸ್ ಆರೋಗ್ಯ ಸಂಸ್ಥೆಯನ್ನು ಮಂಜೂರು ಮಾಡಲೇಬೇಕೆಂದು ಕೇಂದ್ರ ಸರ್ಕಾರವನ್ನು ಒತ್ತಾಯಿಸಿ ಇಂದು ನಡೆದ ಧರಣಿ ಸತ್ಯಾಗ್ರಹದಲ್ಲಿ

ಅಶೋಕ್ ಕುಮಾರ್ ಸಿ ಕೆ.ಎಸ್. ಮಾರಪ್ಪ ವಕೀಲರು,ತಾಯಿರಾಜ,ಆಂಜನೇಯ ಕುರುಬದೊಡ್ಡಿ,ಆಂಜನೇಯ ಮರ್ಚಡ,ರವಿಕುಮಾರ್ ರಾಂಪುರ,ವೀರಪ್ಪ ನಾಯಕ,ವೀರಭದ್ರಯ್ಯ ಸ್ವಾಮಿ,ಮಹೀಂದರ್ ಸಿಂಗ್, ಹನುಮಂತಪ್ಪ ಶಿಕ್ಷಕರು,ವಿನಯ್ ಕುಮಾರ್ ಚಿತ್ರಗಾರ,ರವಿಕುಮಾರ, ರಮೇಶ್ ಕಲ್ಲೂಕರ,ರಾಮಣ್ಣ ಮೆದಾರ, ಹೇಮರಾಜ್ ಆಸ್ಕಿಹಾಳ, ಶ್ರೀನಿವಾಸ ಮರ್ಚಟ್ಹಾಳ,ಮಹಮ್ಮದ್ ಇಸಾಕ್,ವೆಂಕಟರೆಡ್ಡಿ ದಿನ್ನಿ,ಎಸ.ತಿಮ್ಮರೆಡ್ಡಿ, ಶ್ರೀನಿವಾಸ್ ಕಲವಲ ದೊಡ್ಡಿ,ಜೈ ಭೀಮ ವಲ್ಲಭಮುಂತಾದವರು ಭಾಗವಹಿಸಿದ್ದರು.

ಅಪ್ರಾಪ್ತ ಬಾಲಕಿಯ ಅತ್ಯಾಚಾರ, ಕೊಲೆ ಪ್ರಕರಣಕ್ಕೆ ಎಸ್‌ಐಟಿ ತನಿಖೆಗೆ ಆಗ್ರಹ

ಮಾನ್ವಿ,ಮೇ.19–

ಬೀದರ್ ಜಿಲ್ಲೆಯ ಔರಾದ ತಾಲೂಕಿನ ಅಪ್ರಾಪ್ತ ಬಾಲಕಿಯ ಅತ್ಯಾಚಾರ ಹಾಗೂ ಕೊಲೆ ಪ್ರಕರಣವನ್ನು ರಾಜ್ಯ ಸರ್ಕಾರ ಗಂಭೀರವಾಗಿ ಪರಿಗಣಿಸಿ ಎಸ್‌ಐಟಿ ತಂಡ ರಚಿಸಿ ಸಮಗ್ರ ತನಿಖೆ ನಡೆಸಬೇಕು ಎಂದು ಕರ್ನಾಟಕ ಭೀಮ್ ಸೇನೆಯ ತಾಲೂಕು ಅಧ್ಯಕ್ಷ ಕಿರಣ್ ಕುಮಾರ್ ಛಲವಾದಿ ಆಗ್ರಹಿಸಿದರು.

ಪಟ್ಟಣದ ತಹಶೀಲ್ದಾರ್ ಕಚೇರಿ ಮೂಲಕ ರಾಜ್ಯ ಗೃಹ ಸಚಿವರಿಗೆ ಸಲ್ಲಿಸಿದ ಮನವಿ ಪತ್ರದ



ಸಂದರ್ಭದಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ದಲಿತರ ಮೇಲೆ ನಿರಂತರವಾಗಿ ದೌರ್ಜನ್ಯ, ಅತ್ಯಾಚಾರ, ಕೊಲೆ ಪ್ರಕರಣಗಳು ಹೆಚ್ಚಾಗುತ್ತಿದ್ದರೂ ಸರ್ಕಾರ ಹಾಗೂ ಪೊಲೀಸ್ ಇಲಾಖೆ ಕಠಿಣ ಕ್ರಮ ಕೈಗೊಳ್ಳುವಲ್ಲಿ ವಿಫಲವಾಗಿದೆ ಎಂದು ಆರೋಪಿಸಿದರು. ಔರಾದ ತಾಲೂಕಿನ ಅಪ್ರಾಪ್ತ ಬಾಲಕಿಯ ಮೇಲಿನ ಅತ್ಯಾಚಾರ ಹಾಗೂ ಕೊಲೆ

ಪ್ರಕರಣವನ್ನು ರಾಜ್ಯ ಸರ್ಕಾರ ಗಂಭೀರವಾಗಿ ಪರಿಗಣಿಸಿ ಎಸ್‌ಐಟಿ ತನಿಖೆಗೆ ಆದೇಶಿಸಬೇಕು ಎಂದು ಒತ್ತಾಯಿಸಿದರು.

ಮುಂದುವರಿದು ಪ್ರಕರಣದ ಪ್ರಮುಖ ಆರೋಪಿಗಳ ವಿರುದ್ಧ ಅಪಹರಣ, ಪೋಕ್ಸೋ ಸೇರಿದಂತೆ ವಿವಿಧ ಕಾನೂನುಗಳ ಅಡಿಯಲ್ಲಿ

ಕಠಿಣ ಕ್ರಮ ಜರುಗಿಸಬೇಕು. ಬಾಲಕಿಯ ಶವವನ್ನು ಮರುಪರೀಕ್ಷೆಗೆ ಒಳಪಡಿಸಬೇಕು ಹಾಗೂ ಪ್ರಕರಣ-ಕ್ಕೆ ಸಂಬಂಧಿಸಿದವರನ್ನು ವೈಜ್ಞಾನಿಕ ಪರೀಕ್ಷೆಗೆ ಒಳಪಡಿಸಿ ಸತ್ಯಾಂಶ ಹೊರತೆಗೆದುಕೊಳ್ಳಬೇಕು ಎಂದು ಆಗ್ರಹಿಸಿದರು. ಹೋರಾಟಗಾರರ ಮೇಲೆ ಸುಳ್ಳು ಪ್ರಕರಣ ದಾಖಲಿಸುವ ಪ್ರವೃತ್ತಿಯನ್ನು ಸರ್ಕಾರ ತಡೆಯಬೇಕು.

ಬೀದರ್ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳನ್ನು ವರ್ಗಾವಣೆ ಮಾಡಿ ಜಿಲ್ಲೆಯ ಕಾನೂನು ಸುವ್ಯವಸ್ಥೆಯನ್ನು ಬಲಪಡಿಸಬೇಕು ಎಂದು ಒತ್ತಾಯಿಸಿದರು.

ಅಲ್ಲದೆ ಹತ್ಯೆಯಾದ ಬಾಲಕಿಯ ಕುಟುಂಬಕ್ಕೆ ಸರ್ಕಾರ ಸೂಕ್ತ ಪರಿಹಾರ ಧನ ನೀಡಬೇಕು ಹಾಗೂ ಕುಟುಂಬ ಸದಸ್ಯರಿಗೆ ಪೊಲೀಸ್ ರಕ್ಷಣೆ ಒದಗಿಸಬೇಕು. ಸರ್ಕಾರ ವಿಳಂಬ ಧೋರಣೆ ಅನುಸರಿಸಿದಲ್ಲಿ ಕರ್ನಾಟಕ ಭೀಮ್ ಸೇನೆ ವತಿಯಿಂದ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಹನುಮಂತಪ್ಪ ಸೀಕಲ್, ಮಲ್ಲೇಶಪ್ಪ, ಹನುಮಂತರಾಯ ವಕೀಲರು ಕಪಗಲ್, ಕಾಶಿನಾಥ್ ಕುರ್ಡಿ, ತಾಯಣ್ಣ ಕಪಗಲ್, ಹುಸೇನಪ್ಪ, ಮೌನೇಶ ನಕ್ಕುಂದಿ, ಮರಿಬಸವ ಉಟಕನೂರು, ಹನುಮಂತ, ಲಕ್ಷಣ ನಾಯಕ ಸೇರಿದಂತೆ ಇನ್ನಿತರರು ಇದ್ದರು.

ಜೂನ್ 20 ರಿಂದ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ಆರಂಭ: ಜಿಲ್ಲಾ ಚುನಾವಣಾಧಿಕಾರಿ ಎಸ್.ಪೂವಿತಾ

ರಾಯಚೂರು ಮೇ.19

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ (ಎಸ್.ಐ.ಆರ್) ಮೂರನೇ ಹಂತದಲ್ಲಿ ಕರ್ನಾಟಕ ರಾಜ್ಯದಲ್ಲಿ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ಪಟ್ಟಿ ತಯಾರಿಸುವ ಕುರಿತು ವೇಳಾಪಟ್ಟಿ ಪ್ರಕಟಿಸಿದ್ದು, ರಾಯಚೂರು ಜಿಲ್ಲೆಯಲ್ಲಿ ಜೂನ್ 20 ರಿಂದ ಪ್ರಕ್ರಿಯೆಯು ಆರಂಭವಾಗಲಿದ್ದು ಅಕ್ಟೋಬರ್ 7ಕ್ಕೆ ಮುಕ್ತಾಯವಾಗಲಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲೆಯ ಜಿಲ್ಲಾಧಿಕಾರಿಗಳಾದ ಎಸ್.ಪೂವಿತಾ ಅವರು ತಿಳಿಸಿದ್ದಾರೆ.

ದಿನಾಂಕ:01.10.2026 ಅನ್ನು ಅರ್ಹತಾ ದಿನಾಂಕವನ್ನಾಗಿ ಪರಿಗಣಿಸಿ ಈ ವಿಶೇಷ ಸಮಗ್ರ ಮತದಾರರ ಪರಿಷ್ಕರಣೆ ಕಾರ್ಯ ನಡೆಯಲಿದೆ. ಜೂನ್ 20 ರಿಂದ 29ರವರೆಗೆ ಈ ಪ್ರಕ್ರಿಯೆಯ ಸಿದ್ಧತೆ, ಪ್ರಕ್ರಿಯೆಯ ಭಾಗವಾಗಿರುವ ಎಲ್ಲಾ ಹಂತದ ಅಧಿಕಾರಿ/ಸಿಬ್ಬಂದಿಗಳಿಗೆ ತರಬೇತಿ, ಅವಶ್ಯವಿರುವ ದಾಖಲೆಗಳ ಮುದ್ರಣ ಕಾರ್ಯ ಜರುಗಲಿದೆ. ತದನಂತರ ಜೂನ್ 30 ರಿಂದ ಜುಲೈ 29ರವರೆಗೆ ಈ ಜಿಲ್ಲೆಯ 07 ವಿಧಾನ ಸಭಾ ಕ್ಷೇತ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಒಟ್ಟು 1853 ಮತಗಟ್ಟೆ ಮಟ್ಟದ ಅಧಿಕಾರಿಗಳು(ಬಿ.ಎಲ್.ಓ.ಗಳು) ಮನೆ-ಮನೆಗೆ ಭೇಟಿ ನೀಡಿ ಮತದಾರರಿಗೆ ಎಣಿಕೆ ನಮೂನೆಗಳನ್ನು ನೀಡಿ ಮಾಹಿತಿಯನ್ನು ಸಂಗ್ರಹಿಸುವರು, ದಿನಾಂಕ:05.08.2026 ರಂದು ಈ ಪ್ರಕ್ರಿಯೆಯ ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುತ್ತದೆ.


ಕರಡು ಮತದಾರರ ಪಟ್ಟಿಗೆ ಆಗಸ್ಟ್ 5 ರಿಂದ ಸೆಪ್ಟೆಂಬರ್ 4ರವರೆಗೆ ಆಕ್ಷೇಪಣೆಗಳನ್ನು ಆಹ್ವಾನಿಸಿ ಅಕ್ಟೋಬರ್ 3ರೊಳಗೆ ಆಕ್ಷೇಪಣೆಗಳನ್ನು ವಿಲೇವಾರಿ ಮಾಡಿ ಕೊನೆಗೆ ಅಕ್ಟೋಬರ್ 7ಕ್ಕೆ ಅಂತಿಮ ಮತದಾರರ ಪಟ್ಟಿ ಪ್ರಕಟಿಸಲಾಗುತ್ತದೆ.

ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ವೇಳಾ ಪಟ್ಟಿಯನ್ವಯ ಸದರಿ ಪ್ರಕ್ರಿಯೆಯ ಎಲ್ಲಾ ಕಾರ್ಯವನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವಂತೆ ಜಿಲ್ಲೆಯ ಎಲ್ಲಾ 7 ವಿಧಾನ ಸಭಾ ಮತಕ್ಷೇತ್ರಗಳ ಮತದಾರರ ನೋಂದಣಾಧಿ ಕಾರಿ

3 ನೇ ಪುಟಕ್ಕೆ

ಬಕ್ರೀದ್ ಹಬ್ಬದ ಶಾಂತಿ ಸಭೆ

ಶಾಂತಿ ಸುವ್ಯವಸ್ಥೆ ಭಂಗ ತರಬಾರದು - ಶಶಿಕಾಂತ ಎಂ.



ಸಿರವಾರ.ಮೇ. 19–

ಕಾನೂನು ಸುವ್ಯವಸ್ಥೆ ಕಾಪಾಡಲು ಪೊಲೀಸ್ ಇಲಾಖೆ ಸದಾ ಸಿದ್ಧವಾಗಿದ್ದು, ಯಾವುದೇ ಅಹಿತಕರ ಘಟನೆ ಆಗದಂತೆ ಶಾಂತತೆಯಿಂದ ಹಬ್ಬ ಆಚರಿಸಬೇಕು ಎಂದು ಸಿಪಿಐ ಶಶಿಕಾಂತ ಎಂ ಹೇಳಿದರು. ಪಟ್ಟಣದ ಪೊಲೀಸ್ ಠಾಣೆಯಲ್ಲಿ ಬಕ್ರೀದ್ ಹಬ್ಬದ ಅಂಗವಾಗಿ ಕರೆದಿದ್ದ ಶಾಂತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಪಟ್ಟಣದಲ್ಲಿ ಹಿಂದೂ ಮುಸ್ಲಿಂ ಬಾಂಧವರು ಒಗ್ಗಟ್ಟಾಗಿ ಶಾಂತಿಯಿಂದ ಹಬ್ಬ ಆಚರಿಸಬೇಕು. ಶಾಂತಿಗೆ ಭಂಗ ತರುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು, 'ತ್ಯಾಗ ಮತ್ತು ಬಲಿದಾನದ ಸಂಕೇತವಾಗಿರುವ ಬಕ್ರೀದ್ ಹಬ್ಬವನ್ನು ಶಾಂತಿ, ಸೌಹಾರ್ದತೆ ಹಾಗೂ ಸಹೋದರತ್ವದ ಭಾವನೆಯೊಂದಿಗೆ ಆಚರಿಸುವುದರ

3 ನೇ ಪುಟಕ್ಕೆ

ಶಿವಮೊಗ್ಗ : ಲಿಫ್ಟ್‌ನಲ್ಲಿ ಸಿಲುಕಿದ್ದ 9 ಮಂದಿ ರಕ್ಷಣೆ

ಶಿವಮೊಗ್ಗ,ಮೇ 19-ನಗರದ ಮಾಲ್‌ವೊಂದರ ಕಟ್ಟಡದ ಲಿಫ್ಟ್‌ನಲ್ಲಿ ಸಿಲುಕಿಕೊಂಡಿದ್ದ 9 ಜನರನ್ನು ಅಗ್ನಿಶಾಮಕ ದಳದ ತಂಡ ಹರಸಾಹಸ ಪಟ್ಟು ಸುರಕ್ಷಿತವಾಗಿ ರಕ್ಷಣೆ ಮಾಡುವಲ್ಲಿ ಯಶಸ್ವಿಯಾಗಿದೆ.ಇಲ್ಲಿನ ವಿಶಾಲ್ ಮಾರ್ಟ್ ಈ ಘಟನೆ ನಡೆದಿದೆ.

ತಾಂತ್ರಿಕ ಸಮಸ್ಯೆಯಿಂದ ಲಿಫ್ಟ್ ಹಠಾತ್ ಆಗಿ ಮೊದಲ ಮಹಡಿಯಲ್ಲಿ ನಿಂತಿತ್ತು. ಅದರಲ್ಲಿ ಭರತ್, ಅನುಷಾ, ಅನೀಸ್ ಫಾತಿಮಾ, ಮುಸರತ್, ಸೂಬಿಯಾ , ಮಿಜ್ಞಾ , ಪ್ರಶಾಂತ್, ಪ್ರವೀಣ್ ಕುಮಾರ್ ಹಾಗು 5 ವರ್ಷದ ಬಾಲಕ ಬಿಲಾಲ್ ಎಂಬವರು ಸಿಲುಕಿದ್ದರು. ಸುಮಾರು 1 ಗಂಟೆಗೂ ಹೆಚ್ಚು ಕಾಲ ಹೊಗೆ ಬರಲು ಸಾಧ್ಯವಾಗದೆ ಮೊಬೈಲ್ ಮೂಲಕ ಮಾಹಿತಿ ನೀಡಿದ್ದಾರೆ.

ಕೆಲವರು ಭಯಭೀತರಾಗಿ ಕಿರುಚಾಡಿ ದ್ದರು. ಅಲ್ಲದೇ ಮಹಿಳೆ ಯೊಬ್ಬರ ಆರೋಗ್ಯದಲ್ಲಿ ಏರುಪೇರಾಗಿತ್ತು. ಅಗ್ನಿಶಾಮಕ ದಳ ತಕ್ಷಣ ಕಾರ್ಯಾಚರಣೆಯಿಂದ ಲಿಫ್ಟ್‌ನಲ್ಲಿ ಸಿಲುಕಿದ್ದವರೆಲ್ಲರೂ ಸುರಕ್ಷಿತವಾಗಿ ಹೊರಬಂದಿದ್ದಾರೆ. ಅಗ್ನಿಶಾಮಕ ದಳದ ಅಧಿಕಾರಿಗಳು ಹಾಗೂ ಸಿಬ್ಬಂದಿ ಹೈಡ್ರಾಲಿಕ್ ಟೂಲ್ಸ್ ಬಳಸಿ, ಲಿಫ್ಟ್ ಮುರಿದು ಒಳಗಿದ್ದ ಜನರನ್ನು ರಕ್ಷಿಸಿದ್ದಾರೆ.

ಘಟನೆ ಕುರಿತು ಕಟ್ಟಡ ಮಾಲೀಕರು ಸುರಕ್ಷತಾ ಕ್ರಮ ಕೈಗೊಳ್ಳದ ಬಗ್ಗೆ ಗ್ರಾಹಕರು ಕಿಡಿ ಕಾರಿದ್ದಾರೆ.ಎಲ್ಲರೂ ಸುಕಕ್ಷತವಾಗಿ ಹೊರಬಂದ ನಂತರ ಅವರಿಗೆ ನೀರು ,ಜೂಸ್ ನೀಡಿ ಸಮಾಧನ ಮಾಡಿದ್ದಾರೆ. ಕೆಲವರು ಹೆಚ್ಚಿನ ಅನಾಹುತ ತಪ್ಪಿದ್ದರಿಂದ ನಿಟ್ಟುಸಿರುಬಿಟ್ಟಿದ್ದಾರೆ.

ಬಕ್ರೀದ್ ಹಬ್ಬದ ಜಿಲ್ಲಾ ಸಮಿತಿ ಸಭೆ

ಪ್ರಾಣಿಗಳ ಹತ್ಯೆ ತಡೆಗಟ್ಟಲು ಸೂಕ್ತ ಕ್ರಮ ವಹಿಸಿ



ರಾಯಚೂರು ಮೇ.19

ಜಿಲ್ಲೆಯಲ್ಲಿ ಬಕ್ರೀದ್ ಹಬ್ಬದ ದಿನಗಳಲ್ಲಿ ಅಕ್ರಮ ಒಂಟೆ ಹಾಗೂ ಗೋವುಗಳ ಹತ್ಯೆ ತಡೆಗಟ್ಟಲು ಸೂಕ್ತ ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿಗಳಾದ ಎಸ್.ಪೂವಿತಾ ಅವರು ಸಂಬಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಮೇ.19ರ ಮಂಗಳವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಬಕ್ರೀದ್ ಹಬ್ಬದ ಹಿನ್ನಲೆಯಲ್ಲಿ ಅಕ್ರಮ ಒಂಟೆ ಹಾಗೂ ಗೋವುಗಳ ಹತ್ಯೆ ತಡೆಗಟ್ಟಲು ಅಧಿಕಾರಿಗಳಿಗೆ ಕರೆದ ಜಿಲ್ಲಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರಕಾರದ ಆದೇಶ ಪಾಲನೆ ಮಾಡುವ ಮೂಲಕ ಬಕ್ರೀದ್ ಹಬ್ಬವನ್ನು ಶಾಂತಿಯುತವಾಗಿ ಆಚರಿಸಲು ಸಾರ್ವಜನಿರಿಗೆ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಿದ ಜಾಗೃತಿ ಮೂಡಿಸಬೇಕು. ದನಕರುಗಳು ಮತ್ತು ಗೋವುಗಳ ಹತ್ಯೆ ನಿಷೇಧವಿದ್ದು, ಸರಕಾರದ ಆದೇಶವನ್ನು ಎಲ್ಲರೂ ಪಾಲನೆ ಮಾಡಬೇಕು ಎಂದರು.

ಜಿಲ್ಲೆಯಲ್ಲಿ ಮೇ. 28ರಿಂದ 3 ದಿನಗಳ ಕಾಲ ನಡೆಯುವ ಬಕ್ರೀದ್ ಹಬ್ಬದ ಪ್ರಯುಕ್ತ ಜಾನುವಾರು ಸಾಗಾಣಿಕೆ ಕಾಯಿದೆ 2006, ಕರ್ನಾಟಕ ಪ್ರಾಣಿ ಬಲಿ ನಿಷೇಧ ಕಾಯಿದೆ 1959, ಪ್ರಾಣಿ ಹಿಂಸೆ ಪ್ರತಿಬಂಧಕ ಕಾಯಿದೆ 1960, ಕರ್ನಾಟಕ ಗೋವಧೆ ಪ್ರತಿಬಂಧಕ ಮತ್ತು ಜಾನುವಾರು ಪರಿರಕ್ಷಣೆ ಅಧಿನಿಯಮ 1964, ವಧಾಗಾರ ನಿಯಮ 2001, ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಮತ್ತು

3 ನೇ ಪುಟಕ್ಕೆ

ರಾಷ್ಟ್ರೀಯ ಡೆಂಗ್ಯೂ ದಿನಾಚರಣೆ





ಸಿಂಧನೂರು.ಮೇ.19–

ಮೇ 19 ಮಂಗಳವಾರ ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ರಾಜ್ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು ಹಾಗೂ ತಾಲೂಕು ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಸಿಂಧನೂರ್ ಶ್ರೀ ಬಸವ ಪ್ಯಾರಾ ಮೆಡಿಕಲ್ ಮತ್ತು ನರ್ಸಿಂಗ್ ಕಾಲೇಜ್ ಸಿಂದನೂರ್ ಇವರ ಸಂಯುಕ್ತ ಆಶ್ರಯದಲ್ಲಿ ಡೆಂಗ್ಯೂ ಜ್ವರದ ಬಗ್ಗೆ ಜಾಗೃತಿ ಮೂಡಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು

ಈ ಕಾರ್ಯಕ್ರಮವನ್ನು ಸಸಿಗೆ ನೀರು ಉಣಿಸುವ ಮೂಲಕ ಉದ್ಘಾಟಿಸಿ ಕಾರ್ಯಕ್ರಮವನ್ನು ಆಚರಿಸಲಾಯಿತು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಗೀತಾ ಹಿರೇಮಠ್ ತಾಲೂಕು ಅರೋಗ್ಯಾಧಿಕಾರಿಗಳ ಕಾರ್ಯಾಲಯ ಸಿಂಧನೂರು ಇವರು ಮಾತನಾಡಿ ಸೊಳ್ಳೆಗಳಿಂದ ಹರಡುವ ಕಾಯಿಲೆಗಳು ಸೊಳ್ಳೆ ಉತ್ಪತ್ತಿ ತಾಣಗಳು, ಸೊಳ್ಳೆ ಉತ್ಪತ್ತಿ ತಾಣಗಳ ನಿರ್ಮೂಲನೆ ಸೊಳ್ಳೆ ಪರದೆ ಮತ್ತು ಸೊಳ್ಳೆ ನಿರೋಧಕ ದ್ರಾವಣ ಬತ್ತಿ ಓಡೋ ಮಾಸ್ ಬೇವಿನ ಸೊಪ್ಪಿನ ಹೊಗೆ ಗ್ಯಾಂಬೂಸಿಯ ಗಪ್ಪಿ ಮೀನುಗಳು ಟೆಮಿಫಾಸ್ ದ್ರಾವಣ ಇವುಗಳ ಬಗ್ಗೆ ಮತ್ತು ಡೆಂಗಿ ನಿಯಂತ್ರಣಕ್ಕಾಗಿ ಸಮುದಾಯದ ಸಹಭಾಗಿತ್ವ, ಪರಿಶೀಲಿಸಿ, ಸ್ವಚ್ಛಗೊಳಿಸಿ ಹಾಗೂ ಮುಚ್ಚಿಡಿ ''ಎಂಬ ಘೋಷವಾಕ್ಯದ ಬಗ್ಗೆ ಸಂಪೂರ್ಣ ಮಾಹಿತಿ ನೀಡಲಾಯಿತು .

ಡೆಂಗ್ಯೂ ಜ್ವರದ ಲಕ್ಷಣಗಳು ಚಿಕಿತ್ಸೆ ಯ ಬಗ್ಗೆ ತಿಳಿಸಿಕೊಡಲಾಯಿತು, ನಂತರ ವಿಶ್ವ ರಕ್ತದೊತ್ತಡ ದಿನಾಚರಣೆಯನ್ನುಆಚರಿಸಲಾಯಿತು, ಸದರಿ ಕಾರ್ಯಕ್ರಮದಲ್ಲಿ ಮೇಘಾ, ಮಂಜುಳಾ, ಕವಿತಾ,ಶಂಶಾದ ಭಿ, ವಿದ್ಯಾರ್ಥಿ/ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

ಕಲಬುರಗಿ ನಗರದ ಸಮಗ್ರ ಅಭಿವೃದ್ದಿಗೆ ಬದ್ಧ- ಸಚಿವ ಪ್ರಿಯಾಂಕ್ ಖರ್ಗೆ



ಕಲಬುರಗಿ ಮೇ. 19

ನಗರದ ಸಮಗ್ರ ಅಭಿವೃದ್ದಿಗಾಗಿ ನೀಲಿನಕ್ಷೆ ತಯಾರಿಸಲಾಗಿದ್ದು, ವರ್ತಮಾನ ಹಾಗೂ ಭವಿಷ್ಯದ ಜನರನ್ನು ಗುರಿಯಾಗಿಸಿಕೊಂಡು ಅವರಿಗೆ ಅನುಕೂಲವಾಗುವಂತೆ ಕಾರ್ಯಕ್ರಮಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ಸೋಮವಾರ ನಗರದ ಹುಮನಾಬಾದ ರಿಂಗ್ ರಸ್ತೆ ಸರ್ಕಲ್‌ನಲ್ಲಿ ಕಲಬುರಗಿ ನಗರಾಭಿವೃದ್ದಿ ಪ್ರಾಧಿಕಾರ ಅನುದಾನದಲ್ಲಿ ನಗರಾಭಿವೃದ್ದಿ ಪ್ರಾಧಿಕಾರ ಕಚೇರಿಯ ಮುಂಭಾಗ ನವೀಕರಣ, ವಿವಿಧ ವಾರ್ಡಗಳಲ್ಲಿ ಉದ್ಯಾನವನ, ವೃತ್ತಗಳ ಅಭಿವೃಧ್ದಿ ಹಾಗೂ ಸ್ಮಶಾನ ಅಭಿವೃದ್ದಿ ಕಾಮಗಾರಿ ಒಟ್ಟು ರೂ. 11.99 ಕೋಟಿ ವೆಚ್ಚದ 40 ವಿವಿಧ ಅಭಿವೃದ್ದಿ ಕಾಮಗಾರಿಗಳಿಗೆ ಅಡಿಗಲ್ಲು ನೆರವೇರಿಸಿ ಅವರು ಮಾತನಾಡಿದರು.

ನಗರದ ಸೌಂದರ್ಯೀಕರಣಕ್ಕೆ ಹೆಚ್ಚಿನ ಆದ್ಯತೆ ನೀಡಲಾಗಿದ್ದು, 17 ವಾರ್ಡ್‌ಗಳ ಉದ್ಯಾನವನಗಳು 3.16 ಕೋಟಿ ರೂ. ಮತ್ತು 4 ಪ್ರಮುಖ ವೃತ್ತಗಳು 5 ಕೋಟಿ, ರೂ,ಗಳಲ್ಲಿ ಹೊಸ ರೂಪ ಪಡೆಯಲಿವೆ. ಇದರೊಂದಿಗೆ ಸಾರ್ವಜನಿಕರ ದೀರ್ಘಕಾಲದ ಬೇಡಿಕೆಯಾಗಿದ್ದ 18 ರುದ್ರಭೂಮಿಗಳ ಸುಧಾರಣೆಗೆ ರೂ. 3.58 ಕೋಟಿ, 25 ಲಕ್ಷ ರೂ. ಗಳಲ್ಲಿ ಕುಡಾ ಕಚೇರಿ ನವೀಕರಣ ವಿನಿಯೋಗಿಸಲಾಗುತ್ತಿದೆ. ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡಲು ಅಪ್ಪಾ ಕೆರೆ ಹಾಗೂ ಕಲಬುರಗಿ ಕೋಟೆಯನ್ನೂ ಅಭಿವೃದ್ದಿಪಡಿಸಲಾಗುವುದು ಎಂದು ತಿಳಿಸಿದರು.

ಅಭಿವೃದ್ದಿ ಕಾರ್ಯಗಳ ನಡುವೆಯೂ ಕೇಂದ್ರ ಸರ್ಕಾರದಕೆ ರಾಜ್ಯದಿಂದ ವಾರ್ಷಿಕ ರೂ. 6.50 ಲಕ್ಷ ಕೋಟಿ ತೆರಿಗೆ ಹಣ ಕೇಂದ್ರಕ್ಕೆ ಹೋಗುತ್ತಿದ್ದರೂ, ಪ್ರತಿಯಾಗಿ ರಾಜ್ಯಕ್ಕೆ ಸಿಗುತ್ತಿರುವುದು ಶೂನ್ಯ ಎಂದರು. ಜಲ್ ಜೀವನ್ ಮಿಷನ್ ಯೋಜನೆಗೆ ಬರಬೇಕಿದ್ದ ರೂ. 15,000 ಕೋಟಿ ಅನುದಾನವನ್ನು ಕೇಂದ್ರ ಬಿಡುಗಡೆ ಮಾಡದಿದ್ದರೂ, ಸಾರ್ವಜನಿಕ ಹಿತದೃಷ್ಟಿಯಿಂದ ರಾಜ್ಯ ಸರ್ಕಾರವೇ ತನ್ನ ಸ್ವಂತ ಹಣದಿಂದ ಕಾಮಗಾರಿ ಮುಂದುವರೆಸಿದೆ ಎಂದರು.

ದೇಶದಲ್ಲಿ ದಿನಬಳಕೆ ವಸ್ತುಗಳು ಹಾಗೂ ಅಡುಗೆ ಅನಿಲದ ಬೆಲೆ ಏರಿಕೆಯಿಂದಾಗಿ ಜನಸಾಮಾನ್ಯರು ಕಷ್ಟಪಡುತ್ತಿದ್ದಾರೆ. ಪ್ರಧಾನಿ ಮೋದಿಯವರ ಆರ್ಥಿಕ ನೀತಿಗಳು ಬಡವರಿಗಲ್ಲ, ಕೇವಲ ಕಾರ್ಪೊರೇಟ್ ಉದ್ಯಮಿಗಳಿಗಷ್ಟೇ ಅನುಕೂಲ ಮಾಡಿಕೊಡುತ್ತಿವೆ. ಈ ಭಾಗದ ಜನರಿಗೆ ಸಂಜೀವಿನಿಯಾಗಿರುವ ಆರ್ಟಿಕಲ್ 371(ಜೆ) ವಿಶೇಷ ಸ್ಥಾನಮಾನ ಹಾಗೂ ಇಎಸ್‌ಐ ಆಸ್ಪತ್ರೆಯನ್ನು ತಂದಿದ್ದು ಕಾಂಗ್ರೆಸ್ ಮತ್ತು ಮಲ್ಲಿಕಾರ್ಜುನ ಖರ್ಗೆ ಅವರ ಶ್ರಮ. ಇದರ ಸೌಲಭ್ಯವನ್ನು ವಿಪಕ್ಷಗಳ ನಾಯಕರ ಮಕ್ಕಳೂ ಪಡೆಯುತ್ತಿದ್ದಾರೆ ಎಂಬುದನ್ನು ಮರೆಯಬಾರದು ಎಂದರು. ಅಪ್ಪಾ ಕೆರೆ ಹಾಗೂ ಕಲಬುರಗಿ ಕೋಟೆ ಅಭಿವೃದ್ದಿ ಸೇರಿದಂತೆ ಹಲವಾರು ಜನಪರ ಹಾಗೂ ಪ್ರವಾಸೋದ್ಯಮ ಪೂರಕ ಯೋಜನೆಗಳು ಕಲಬುರಗೆ ಮುಂಬರುವ ದಿನಗಳಲ್ಲಿ ಬರಲಿವೆ ಎಂದ ಖರ್ಗೆ ಕಾಂಗ್ರೆಸ್ ಸರ್ಕಾರ ಕಲಬುರಗಿ ಜಿಲ್ಲೆಯನ್ನು ಅದನ್ನೂ ಪ್ರಮುಖವಾಗಿ ಕಲಬುರಗಿ ನಗರದ ಸಮಗ್ರ ಅಭಿವೃದ್ದಿ ಮಾಡಿ ನವ ನಗರ ನಿರ್ಮಾಣ ಮಾಡಲಿದೆ ಎಂದು ಭರವಸೆ ನೀಡಿದರು.

ಕೇಂದ್ರ ಸರ್ಕಾರ ರಾಜ್ಯಕ್ಕೆ ಅನುದಾನ ಬಿಡುಗಡೆಗೆ ತಾರತಮ್ಯ ಎಸಗುತ್ತಿದೆ ಎಂದು ಹೇಳಿದ ಸಚಿವರು, ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆಯ ಅಡಿಯಲ್ಲಿ ಜಾರಿಗೆ ತರಲಾದ ಜಲ್ ಜೀವನ್ ಮಿಷನ್ ಕಾರ್ಯಕ್ರಮಕ್ಕೆ ಬೇಕಾಗುವ 15,000 ಕೋಟಿ ಅನುದಾನ ನೀಡಬೇಕಿತ್ತು. ಆದರೆ, ಅನುದಾನ ಬಿಡುಗಡೆ ಮಾಡದೇ ಇರುವುದರಿಂದಾಗಿ ರಾಜ್ಯ ಸರ್ಕಾರ ತನ್ನ ಅನುದಾನ ಬಳಸಿ ಕಾಮಗಾರಿ ಮುಂದುವರೆಸಿದೆ ಎಂದರು.

ಅಡುಗೆ ಅನಿಲ ಸೇರಿದಂತೆ ದಿನಬಳಕೆಯ ವಸ್ತುಗಳ ಬೆಲೆ ಗಗನಕ್ಕೇರಿದ್ದು ಸಾರ್ವಜನಿಕರು ಜೀವನ. ನಿರ್ವಹಣೆಗೆ ಪರದಾಡುತ್ತಿದ್ದಾರೆ. ಇದನ್ನು ವಿಕಸಿತ್ ಭಾರತ ಎನ್ನುಬಹುದಾ? ಜನರು ಸಂಕಟಪಡುತ್ತಿರುವಾಗ ಮೋದಿ ಖರ್ಚು ಕಡಿಮೆ ಮಾಡಿ ಎನ್ನುತ್ತಿದ್ದಾರೆ. ಮನೆ ನಡೆಸಲು ಜನಸಾಮಾನ್ಯರಿಗೆ ಸಾಧ್ಯವಾಗುತ್ತಿಲ್ಲ. ಮೋದಿ ಅವರ ಆರ್ಥಿಕ ನೀತಿ ಕೇವಲ ಅದಾನಿ ಹಾಗೂ ಅಂಬಾನಿಯಂತ ಶ್ರೀಮಂತರಿಗೆ ಮಾತ್ರ ಅನುಕೂಲವಾಗಿದೆ ಹೊರತು ಬಡವರಿಗೆ ಅನುಕೂಲವಾಗಿಲ್ಲ ಎಂದರು.

ಭಾರತ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಕನಿಷ್ಠ 200 ದೇಶಗಳಿಗೆ ಭೇಟಿ ನೀಡಿರಬಹುದು. ಅವರ ಪ್ರವಾಸಕ್ಕೆ ರೂ 850 ಕೋಟಿ ಖರ್ಚಾಗಿದೆ. ಅವರ ಖರ್ಚಿಗೆ ಹೋಲಿಸಿದರೆ, ದೇಶಕ್ಕೆ ನಯಾಪೈಸೆ ಅನುಕೂಲವಾಗಿಲ್ಲ ಎಂದು ಟೀಕಿಸಿದ ಖರ್ಗೆ, ರಾಜ್ಯ ಸರ್ಕಾರ ವಾರ್ಷಿಕ ರೂ 6.50 ಲಕ್ಷ ಕೋಟಿ ತೆರಿಗೆಯನ್ನು ಕೇಂದ್ರಕ್ಕೆ ಕೊಡುತ್ತಿದೆ. ಅದಕ್ಕೆ ಬದಲಾಗಿ ಕೇಂದ್ರ ನಮಗೆ ವಾಪಸ್ ಕೊಡುತ್ತಿರುವುದು ಶೂನ್ಯ ಎಂದರು.

ಕಾಂಗ್ರೆಸ್ ಸರ್ಕಾರ ಹಾಗೂ ಮಲ್ಲಿಕಾರ್ಜುನ ಖರ್ಗೆ ಅವರ ಕೊಡುಗೆಯನ್ನು ಸ್ಮರಿಸಿದ ಪ್ರಿಯಾಂಕ್, ಆರ್ಟಿಕಲ್ 371(ಜೆ) ಜಾರಿಗೆ ಬಂದುದ್ದು ಕಾಂಗ್ರೆಸ್ ಅವಧಿಯಲ್ಲಿ. ಈ ಮಹತ್ತರ ಕಾರ್ಯಕ್ಕೆ ಖರ್ಗೆ ಅವರ ಕೊಡುಗೆ ಪ್ರಮುಖವಾಗಿದೆ. ಕಲಬುರಗಿ ಯಲ್ಲಿ ಹಲವಾರು ಪ್ರಮುಖ ಯೋಜನೆಗಳು ಕೂಡಾ ಖರ್ಗೆ ಅವರ ಅವಧಿಯಲ್ಲಿ ಬಂದಿವೆ. ಇಎಸ್‌ಐ ನಂತ ಬಡವರ ಪರ ಆಸ್ಪತ್ರೆ ಸ್ಥಾಪನೆಯಾಗಿರುವುದು ಪ್ರಮುಖವಾಗಿದೆ. ಆದರೂ, ಬಿಜೆಪಿಗರ ನಮ್ಮನ್ನು ಟೀಕಿಸುತ್ತಾರೆ. ಅವರ ಮಕ್ಕಳು ಆರ್ಟಿಕಲ್ 371ಜೆ ಸೌಲಭ್ಯ ಪಡೆದುಕೊಳ್ಳುವುದಿಲ್ಲವೇ? ಅವರ ಮಕ್ಕಳು ಇಎಸ್ ಐ ನಲ್ಲಿ ಚಿಕಿತ್ಸೆ ಪಡೆದುಕೊಳ್ಳುವುದಿಲ್ಲವೇ? ಎಂದು ಖಾರವಾಗಿ ಪ್ರಶ್ನಿಸಿದರು.

ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ್ ಅವರು ಮಾತನಾಡಿ ಜಿಲ್ಲೆಯ ಮುಂಬರುವ 30 ವರ್ಷಗಳ ಅಗತ್ಯತೆಗಳನ್ನು ಗಮನದಲ್ಲಿಟ್ಟುಕೊಂಡು ಸಚಿವ ಪ್ರಿಯಾಂಕ್ ಖರ್ಗೆ ಅವರು ದೂರದೃಷ್ಟಿಯ ಅಭಿವೃದ್ದಿ ಕಾಮಗಾರಿಗಳನ್ನು ಕೈಗೊಳ್ಳುತ್ತಿದ್ದಾರೆ. ಸಚಿವರ ನೇತೃತ್ವದಲ್ಲಿ ರಾಮಮಂದಿರ ಸೇರಿದಂತೆ 4 ಪ್ರಮುಖ ಸರ್ಕಲ್‌ಗಳ ಸೌಂದರ್ಯೀಕರಣ, 18 ಸ್ಮಶಾನಗಳ ನವೀಕರಣ ಹಾಗೂ 17 ಪಾರ್ಕ್‌ಗಳ ಅಭಿವೃದ್ದಿ. ರಾಜ್ಯದಲ್ಲೇ ಮೊದಲ ಬಾರಿಗೆ 35 ಕೋಟಿ ರೂ. ವೆಚ್ಚದ ಮಹಿಳಾ ಕ್ರೀಡಾಂಗಣ, ನೂತನ ವೃಗಾಲಯ ಹಾಗೂ 80 ಕಿ.ಮೀ ರಸ್ತೆ ಅಭಿವೃದ್ದಿ ಕಾಮಗಾರಿಗಳು ಪ್ರಗತಿಯಲ್ಲಿವೆ. ಬಿಸಿಲ ನಾಡನ್ನು ಹಸಿರು ನಾಡಾಗಿಸಲು ಕೋಟ್ಯಂತರ ರೂ. ಅನುದಾನ ಬಿಡುಗಡೆ ಮಾಡಲಾಗಿದೆ ಎಂದು ಹೇಳಿದರು.

ನಗರಾಭಿವೃದ್ದಿ ಪ್ರಾಧಿಕಾರದ ಅಧ್ಯಕ್ಷ ಮಜರ್ ಆಲಂ ಖಾನ್ ಅವರು ಮಾತನಾಡಿ ನಗರದ ಸಮಗ್ರ ಅಭಿವೃದ್ದಿ, ಹಸಿರೀಕರಣ ಮತ್ತು ಮೂಲಸೌಕರ್ಯ ಮೇಲ್ದರ್ಜೆಗೇರಿಸಲು 11.99 ಕೋಟಿ ರೂ. ವೆಚ್ಚದಲ್ಲಿ ವಿವಿಧ ಯೋಜನೆಗಳಿಗೆ ಚಾಲನೆ ನೀಡಲಾಗಿದೆ. ಉಳಿದ 11 ಉದ್ಯಾನವನಗಳ ಟೆಂಡರ್ ಪ್ರಕ್ರಿಯೆ ಶೀಘ್ರದಲ್ಲೇ ಮುಗಿಯಲಿದೆ. ಇದರೊಂದಿಗೆ ನಗರದ ಪ್ರಮುಖ ರಸ್ತೆಗಳ ವೃತ್ತಗಳ ಸೌಂದರ್ಯೀಕರಣ ಮತ್ತು ನಗರಾಭಿವೃದ್ದಿ ಪ್ರಾಧಿಕಾರದ ಹಳೆಯ ಕಚೇರಿ ಕಟ್ಟಡವನ್ನು ಆಧುನಿಕ ಶೈಲಿಯಲ್ಲಿ ನವೀಕರಿಸುವ ಕೆಲಸಗಳು ಪ್ರಗತಿಯಲ್ಲಿವೆ ಎಂದು ತಿಳಿಸಿದರು.

ಕಲಬುರಗಿ ನಗರಾಭಿವೃದ್ದಿ ಪ್ರಾಧಿಕಾರದ ಆಯುಕ್ತರ ಶ್ರೀಶೈಲ್ ಸಿಂಗ್ ಸ್ವಾಗತಿಸಿದರು.

ವೇದಿಕೆಯಲ್ಲಿ ವಿಧಾನ ಪರಿಷತ್ ಸದಸ್ಯ ಜಗದೇವ ಗುತ್ತೇದಾರ್, ಜೆಸ್ಕಾಂ ಅಧ್ಯಕ್ಷ ಪ್ರವೀಣ ಪಾಟೀಲ ಹರವಾಳ, ಕರ್ನಾಟಕ ದಿದ್ವಳ ಧಾನ್ಯ ಅಭಿವೃದ್ದಿ ಮಂಡಳಿ, ಅಧ್ಯಕ್ಷ ಸೈಯ್ಯದ್ ಮಹೆಬೂದ್ ಚಿಸ್ತಿ ಸಾಹೇಬ್, ಗ್ಯಾರೆಂಟಿ ಯೋಜನೆಗಳು ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರ, ಮಹಾನಗರ ಪಾಲಿಕೆಯ ಮಹಾಪೌರರಾದ ವರ್ಷಾ ಜಾನೆ, ಜಿಲ್ಲಾಧಿಕಾರಿ ಮಹ್ಮದ್ ಇಕ್ರಮುಲ್ಲಾ ಶರೀಫ, ಜಿಲ್ಲಾ ಪಂಚಾಯತ್ ಸಿ.ಇ.ಓ. ಭಂವರ್ ಸಿಂಗ್ ಮೀನಾ, ಮಹಾನಗರ ಪಾಲಿಕೆಯ ಅವಿನಾಶ ಸೇರಿದಂತೆ ಮಹಾನಗರ ಪಾಲಿಕೆ ಸದಸ್ಯರು ಪದಾಧಿಕಾರಿಗಳು ಇದ್ದರು.



ನರೇಗಾ ಕಾಮಗಾರಿಯಲ್ಲಿ ಎಲ್ಲಾ ಕೂಲಿಕಾರರು ಕೆಲಸಕ್ಕೆ ಹಾಜರಾಗಿರಿ: ಅಗಳಕೇರಾ ಪಿಡಿಒ ಬಸವರಾಜ ಬಳಿಗಾರ

ಕೊಪ್ಪಳ ಮೇ 19

ಮಹಾತ್ಮಾ ಗಾಂಧಿ ನರೇಗಾ ಯೋಜನೆಯಡಿ ಎಲ್ಲಾ ಕೂಲಿಕಾರರು ಫಾರಂ ನಂ.6 ಸಲ್ಲಿಸುವ ಮೂಲಕ ಕೂಲಿ ಕೆಲಸಕ್ಕೆ ಹಾಜರಾಗುವಂತೆ ★ಅಗಳಕೇರಾ ಗ್ರಾಮ ಪಂಚಾಯತ ಅಭಿವೃದ್ದಿ ಅಧಿಕಾರಿ ಬಸವರಾಜ ಬಳಿಗಾರ ಅವರು ಕರೆ ನೀಡಿದರು.

ಅಗಳಕೇರಾ ಗ್ರಾಮ ಪಂಚಾಯತಿಯ ಸಭಾಂಗಣದಲ್ಲಿ ಸೋಮವಾರ ಆಯೋಜಿಸಿದ್ದ ಮಹಾತ್ಮ ಗಾಂಧಿ ನರೇಗಾ ಯೋಜನೆಯ ಐಇಸಿ ಕಾರ್ಯಕ್ರಮದಡಿ ರೋಜಗಾರ್ ದಿವಸ್ ಕಾರ್ಯಕ್ರಮದಲ್ಲಿ ಕೂಲಿಕಾರರನ್ನು ಉದ್ದೇಶಿಸಿ ಅವರು ಮಾತನಾಡಿದರು.

ಪ್ರತಿ ಮಾನವ ದಿನಕ್ಕೆ 370/- ಕೂಲಿ ನಿಗದಿಪಡಿಸಿದ್ದು ಸಂಪೂರ್ಣವಾಗಿ ಕೂಲಿ ಕೆಲಸ ನಿರ್ವಹಿಸಿ ಪೂರ್ತಿ ಹಣ ಪಡೆದುಕೊಳ್ಳಬೇಕು. 18 ವರ್ಷ ಮೇಲ್ಪಟ್ಟ ಕುಟುಂಬದ ಸದಸ್ಯರು ಜಾಬಕಾರ್ಡ ಬಳಕೆ ಮಾಡಿಕೊಂಡು ಕೂಲಿ ಕೆಲಸ ಪಡೆಯಲು ಕಡ್ಡಾಯವಾಗಿ ನಮೂನೆ-6 ಸಲ್ಲಿಸಬೇಕೆಂದರು. ಮೇ ಮತ್ತು ಜೂನ್ ವರೆಗೆ 60 ದಿನಗಳ ಕೂಲಿ ಕೆಲಸ ಪಡೆಯಬೇಕು. ಕೂಲಿ ಹಣದಿಂದ ಮಕ್ಕಳ ಶಾಲಾ, ಕಾಲೇಜು ಶುಲ್ಕ ಭರಿಸಲು, ಮಕ್ಕಳ ಸ್ಪರ್ಧಾತ್ಮಕ ಪರೀಕ್ಷೆಗೆ ಶುಲ್ಕ ಹಾಗೂ ಕುಟುಂಬ ನಿರ್ವಹಣೆಗೆ ಅನುಕೂಲವಾಗುತ್ತದೆ. ಜಾಬಕಾರ್ಡನಲ್ಲಿರುವ ಕುಟುಂಬದ ಎಲ್ಲ ಸದಸ್ಯರು ಇ-ಕೆವೈಸಿ ಹೊಂದಿದ ನಂತರವೇ ಎನ್‌ಎಂಆರ್ ಪ್ರಕಾರ ಕೂಲಿಕಾರರು ಕೂಲಿ ಕೆಲಸಕ್ಕೆ ಹಾಜರಾಗಬೇಕು. 1 2ನೇ ಹಾಜರಾತಿ ಕಡ್ಡಾಯವಾಗಿರುತ್ತದೆ ಎಂದರು. ತಾಲೂಕ ಐಇಸಿ ಸಂಯೋಜಕ ದೇವರಾಜ ಪತ್ತಾರ ಅವರು ಮಾತನಾಡಿ, ಪ್ರತಿ ಜಾಬಕಾರ್ಡಗೆ 100 ಮಾನವ ದಿನಗಳ ಕೂಲಿ ಕೆಲಸ ನೀಡಲಾಗುತ್ತಿದ್ದು ಸದುಪಯೋಗ ಪಡೆಯಬೇಕು. ಗ್ರಾಮೀಣ ಭಾಗದ ಕೂಲಿಕಾರರು ಕೂಲಿ ಅರಸಿ ಗುಳೆ ಹೋಗುವದನ್ನು ನಿಯಂತ್ರಿಸಿ ಸ್ಥಳೀಯವಾಗಿ ಉದ್ಯೋಗ ಒದಗಿಸಿ ಅವರಿಗೆ ಕೂಲಿ ಹಣ ಪಾವತಿಸಿ ಸ್ವಾವಂಬಿ ಜೀವನ ನಡೆಸಲು ಯೋಜನೆಯ ಸದುದ್ದೇಶವಾಗಿದೆ. ಎಲ್ಲಾ ಕೂಲಿಕಾರರು ಸಾಮಾಜಿಕ ಭದ್ರತೆ ವಿಮೆಗಳಾದ ಪಿಎಂಜೆಜೆಬಿವೈ, ಪಿ.ಎಂ.ಎಸ್.ಬಿ.ವೈ.ಗಳಲ್ಲಿ ನೊಂದಣಿ ಮಾಡಿಕೊಳ್ಳುವಂತೆ ಕರೆ ನೀಡಿದರು.

ಇದೇ ಸಂದರ್ಭದಲ್ಲಿ ಕಾಯಕ ಬಂಧುಗಳ ಮೂಲಕ ಒಟ್ಟು 121 ಕೂಲಿಕಾರರ ಫಾರಂ ನಂ.6 ಸ್ವೀಕರಿಸಲಾಯಿತು.

ಗ್ರಾಮ ಪಂಚಾಯತಿ ಕಾರ್ಯದರ್ಶಿ ಅಕ್ಷಯಕುಮಾರ, ಡಿಇಒ ಸುಮನ್, ಬೇರ್‌ಫೂಟ್ ಟೆಕ್ನಿಷಿಯನ್ ಮೈಲಾರಪ್ಪ, ಕಾಯಕ ಬಂಧುಗಳಾದ ಇಸ್ಮಾಯಿಲ್, ಮಹಾಂತೇ ಕಟ್ಟಿಮನಿ, ಲತಾ ರಾಜಶೇಖರ, ಹನಮಂತಪ್ಪ, ಗವಿಸಿದ್ದಪ್ಪ, ಬಸವರಾಜ, ಬೀರಪ್ಪ, ಮಂಜುನಾಥ, ಕೂಲಿಕಾರರು ಉಪಸ್ಥಿತರಿದ್ದರು.

ಗ್ಯಾರಂಟಿ ಯೋಜನೆಗಳಿಂದ ಯಾವೊಬ್ಬ ಫಲಾನುಭವಿಯೂ ಹೊರಗುಳಿಯಬಾರದು-ಅಮೃತರಾವ ಚಿಮಕೋಡೆ

ಬೀದರ, ಮೇ.19-

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಕಾರ್ಯಕ್ರಮಗಳಾದ ಪಂಚ ಗ್ಯಾರಂಟಿ ಯೋಜನೆಗಳಿಂದ ಜಿಲ್ಲೆಯ ಯಾವೊಬ್ಬ ಫಲಾನುಭವಿಯೂ ಹೊರಗುಳಿಯದಂತೆ ಎಚ್ಚರ ವಹಿಸಬೇಕು, ಅರ್ಹರಿರುವ ಪ್ರತಿಯೊಬ್ಬ ಫಲಾನುಭವಿಗೂ ಸಕಾರದ ಸೌಲಭ್ಯಗಳು ತಲುಪಿಸುವ ಅಗತ್ಯ ಕ್ರಮವಹಿಸುವಂತೆ ಅಧಿಕಾರಿಗಳಿಗೆ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಅಮೃತರಾವ ಚಿಮಕೋಡೆ ಅವರು ಸೂಚಿಸಿದರು.

ಅವರು ಸೋಮವಾರ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಗ್ಯಾರಂಟಿ ಯೋಜನೆಗಳ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲೆಯ ಎಲ್ಲ ಬಸ್ ನಿಲ್ದಾಣಗಳಲ್ಲಿ ಕುಡಿಯುವ ನೀರು ಮತ್ತು ಸ್ವಚ್ಛತೆ ಬಗ್ಗೆ ಅನೇಕ ದೂರುಗಳು ಬರುತ್ತಿದ್ದು, ವಿಭಾಗೀಯ ನಿಯಂತ್ರಣಾಧಿಕಾರಿ ಕ್ರಮವಹಿಸಬೇಕು. ಆಹಾರ ಇಲಾಖೆಯಲ್ಲಿ ಪಡಿತರ ವಿತರಿಸುವ ಅಂಗಡಿಗಳಲ್ಲಿ ಬೇಸಿಗೆ ಕಾಲ ಇರುವುದರಿಂದ ಕುಡಿಯುವ ನೀರು ಹಾಗೂ ನೆರಳಿನ ವ್ಯವಸ್ಥೆ ಮಾಡಿ ಸಾಧ್ಯವಾದರೆ ಪಡಿತರ ವಿತರಿಸುವ ವೇಳೆ ಬದಲಾಯಿಸಿಕೊಳ್ಳುವಂತೆ ನೊಡಿಕೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು. ಇದೇ ಸಂದರ್ಭದಲ್ಲಿ ಸದಸ್ಯರು ಇನ್ನಿತರ ವಿಷಯಗಳ ಬಗ್ಗೆ ಚರ್ಚಿಸಿದರು.

ಗೃಹಲಕ್ಷ್ಮೀ ಯೋಜನೆಡಿ ಜಿಲ್ಲೆಯಲ್ಲಿ 345132 ಫಲಾನುಭವಿಗಳು ಸದರಿ ಯೋಜನೆಯ ಲಾಭ ಪಡೆಯುತ್ತಿದ್ದು, ಜನವರಿಗೆ 18925778000 ಕೋಟಿ ಡಿಬಿಟಿ ಮುಖಾಂತರ ಅವರ ಖಾತೆಗೆ ಜಮೆ ಮಾಡಲಾಗಿದೆ. ಮಾರ್ಚ.2026 ರ ಹಣ ಒಂದು ವಾರದೊಳಗೆ ಫಲಾನುಭವಿಗಳ ಖಾತೆಗೆ ಜಮಾ ಆಗಲಿದೆ. ಜಿಲ್ಲೆಯಲ್ಲಿ ಮರಣ ಹೊಂದಿರುವ ಫಲಾನುಭವಿಗಳ ಸಂಖ್ಯೆ; 5339 ಇದ್ದು, 4917 ಮರಣ ಹೊಂದಿರುವ ಫಲಾನುಭವಿಗಳ ಸೇವಾ ಸಿಂಧೂ ಲಾಗಿನಲ್ಲಿ ಅಪಡೆಟ್ ಮಾಡಲಾಗಿದೆ. ಬಾಕಿ 422 ಫಲಾನುಭವಿಗಳು ಸೇವ ಲಾಗಿನಲ್ಲಿ ಅಪಡೆಟ್ ಮಾಡಬೇಕಾಗಿದೆ.

ಗೃಹಜ್ಯೋತಿ ಯೋಜನೆಯಡಿ ಜಿಲ್ಲೆಯಲ್ಲಿ 375344 ಗ್ರಾಹಕರಿದ್ದು, 3.59301 ಫಲಾನುಭವಿಗಳು ಗೃಹಜ್ಯೋತಿ ಯೋಜನೆ ಲಾಭ ಪಡೆಯುತ್ತಿದ್ದು 513 ಕೋಟಿ ಸಂದಾಯವಾಗಿದೆ.

ಶಕ್ತಿಯೋಜನೆಯಡಿಯಲ್ಲಿ ಜಿಲ್ಲೆಯಲ್ಲಿ ದಿನಾಂಕ: 11-06-2023 ರಿಂದ 08-05-2025 ರವರೆಗೆ ಮಹಿಳೆಯರು ಮತ್ತು ಬಾಲಕಿಯರು ಒಟ್ಟು ಸೇರಿ 12.36 ಕೋಟಿ ಜನರು ಸೌಲಭ್ಯವನ್ನು ಪಡೆದಿರುತ್ತಾರೆ. ಪ್ರತಿದಿನ ಸರಾಸರಿ 1.16 ಲಕ್ಷ ಮಹಿಳೆಯರು ಪ್ರಯಾಣಿಸುತ್ತಿದ್ದು ಇಲ್ಲಿಯವರೆಗೂ 367.99 ಕೋಟಿ ರೂ. ಸಂದಾಯ ವಾಗಿರುತ್ತದೆ. ಅನ್ನಭಾಗ್ಯ ಯೋಜನೆ ಯಡಿ 3.57.286 ಪಡಿತರ ಚೀಟಿಗಳಿದ್ದು ಇಲ್ಲಿಯವರೆಗೆ 333.28 ಕೋಟಿ ಅನುದಾನ ಮಾರ್ಚ ವರೆಗೆ ಸಂದಾಯವಾಗಿರುತ್ತದೆ.

ಯುವನಿಧಿ ಯೋಜನೆಯಡಿ ದಿನಾಂಕ: 11-05-2026 ರವರೆಗೆ ಡಿಗ್ರಿ, ಡಿಪ್ಲೋಮಾ ಸೇರಿ 17202 ಅಭ್ಯರ್ಥಿಗಳು ನೋಂದಣೆ ಮಾಡಿಕೊಂಡಿದ್ದು, 37 ಕೋಟಿ 81 ಲಕ್ಷ ರೂ. ಸಂದಾಯವಾಗಿರುತ್ತದೆ.

ಈ ಸಭೆಯಲ್ಲಿ ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿಗಳಾದ ಶರಣಬಸಪ್ಪಾ ಕೋಟೆಪ್ಪಗೊಳ, ಮುಖ್ಯ ಯೋಜನಾಧಿಕಾರಿ ಕಿಶೋರ ದುಭೆ, ಆಹಾರ ಇಲಾಖೆಯ ಉಪನಿರ್ದೇಶಕ ಪ್ರವೀನ ಬರಗಲ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಶ್ರೀಧರ, ಜೇಸ್ಕಾಂ ಕಾರ್ಯಪಾಲಕ ಅಭಿಯಂತರರಾದ ರಮೇಶ ಪಾಟೀಲ, ಗ್ಯಾರಂಟಿ ಯೋಜನೆಯ ತಾಲ್ಲೂಕಾ ಅಧ್ಯಕ್ಷರು ಹಾಗೂ ಸದಸ್ಯರು ಸೇರಿದಂತೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಪರಿಶಿಷ್ಟ ಜಾತಿ-ಪಂಗಡಗಳ ಕಲ್ಯಾಣಕ್ಕೆ ಆದ್ಯತೆ ನೀಡಿ-ಡಾ.ಮೂರ್ತಿ. ಎಲ್

ಬಳ್ಳಾರಿ,ಮೇ 19

ಜಿಲ್ಲೆಯಲ್ಲಿನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನರ ಕಲ್ಯಾಣಕ್ಕೆ ಅಧಿಕಾರಿಗಳು ಆದ್ಯತೆ ನೀಡಬೇಕು ಎಂದು ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದ ಅಧ್ಯಕ್ಷ ಡಾ.ಮೂರ್ತಿ ಎಲ್. ಅವರು ಹೇಳಿದರು.

ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭಿವೃದ್ದಿಗಾಗಿ ಕೈಗೊಂಡಿರುವ ಕಾರ್ಯಕ್ರಮಗಳ ಕುರಿತು ನಗರದ ಜಿಲ್ಲಾ ಪಂಚಾಯತ್‌ನ ನಜೀರ್ ಸಭಾಂಗಣದಲ್ಲಿ ಸೋಮವಾರ ಆಯೋಜಿಸಿದ್ದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಎಸ್‌ಸಿಪಿ/ಟಿಎಸ್‌ಪಿ ಯೋಜನೆಗಳಿಗೆ ಹೆಚ್ಚಿನ ಅನುದಾನ, ಸೌಲಭ್ಯಗಳು ಮತ್ತು ಕಾರ್ಯಕ್ರಮಗಳ ಅವಶ್ಯಕತೆಯಿದೆ. ಯೋಜನೆಗಳ ಅನುಷ್ಠಾನಕ್ಕೆ ಸರಿಯಾದ ಕ್ರಿಯಾ ಯೋಜನೆ ಹಾಗೂ ಹೆಚ್ಚುವರಿ ಅನುದಾನಕ್ಕಾಗಿ ಪ್ರಸ್ತಾವನೆ ಸಲ್ಲಿಸಬೇಕು. ಸರ್ಕಾರ ಹಣ ಕೊಟ್ಟಿಲ್ಲ ಎಂದು ಸುಮ್ಮನೆ ಕೂರಬಾರದು, ಜನಸಂಖ್ಯೆಗೆ ಅನುಗುಣವಾಗಿ ಬೇಡಿಕೆ ಪಟ್ಟಿ ಸಲ್ಲಿಸುವುದು ಅಧಿಕಾರಿಗಳ ಕರ್ತವ್ಯ ಎಂದು ತಿಳಿಸಿದರು.

ಯೋಜನೆಗಳ ಪ್ರಗತಿ ವರದಿಯನ್ನು ಕೇವಲ ಕಾಗದದ ಮೇಲೆ ಸೀಮಿತಗೊಳಿಸದೆ, ಕ್ಷೇತ್ರ ಮಟ್ಟದಲ್ಲಿ ಪರಿಶೀಲನೆ ನಡೆಸಬೇಕು. ಎಸ್‌ಸಿ/ಎಸ್ಟಿ ಸಮುದಾಯದ ಕಲ್ಯಾಣಕ್ಕಾಗಿ ಎಷ್ಟು ಸಭೆಗಳನ್ನು ನಡೆಸಲಾಗಿದೆ ಮತ್ತು ಕೈಗೊಂಡಿರುವ ಯೋಜನೆಗಳ ಫಲಿತಾಂಶ ವೇನು ಎಂಬುದರ ಬಗ್ಗೆ ಆಯೋಗದ ಕಚೇರಿಗೆ ನಿಯಮಿತವಾಗಿ ವರದಿ ಸಲ್ಲಿಸಬೇಕು ಎಂದು ತಿಳಿಸಿದರು.



ಎಸ್‌ಸಿಪಿ-ಟಿಎಸ್‌ಪಿ ಹಣ ದುರುಪಯೋಗಕ್ಕೆ ತಡೆ ಮತ್ತು ಪಾರದರ್ಶಕತೆ:

ಎಸ್‌ಸಿಪಿ ಮತ್ತು ಟಿಎಸ್‌ಪಿ ಯೋಜನೆಯಡಿ ಬಿಡುಗಡೆಯಾಗುವ ಹಣವನ್ನು ಬೇರೆ ಉದ್ದೇಶಗಳಿಗೆ ಬಳಸಿರುವ ಅಥವಾ ದುರುಪಯೋಗಪಡಿಸಿಕೊಂಡಿರುವ ಅಧಿಕಾರಿಗಳ ವಿರುದ್ಧ ಕಟ್ಟುನಿಟ್ಟಿನ ಕಾನೂನು ಕ್ರಮ ಕೈಗೊಳ್ಳಲಾಗುವುದು. ಯಾವ ಯಾವ ಕಾಮಗಾರಿಗಳು ಎಷ್ಟೆಷ್ಟು ವೆಚ್ಚದಲ್ಲಿ ನಡೆದಿವೆ ಎಂಬ ಬಗ್ಗೆ ಸಂಪೂರ್ಣ ಪಾರದರ್ಶಕತೆ ಇರಬೇಕು. ಎಲ್ಲಾ ಪ್ರಗತಿಯಲ್ಲಿರುವ ಮತ್ತು ಪೂರ್ಣಗೊಂಡಿರುವ ಕಾಮಗಾರಿಗಳ ಬಳಿ ಕಡ್ಡಾಯವಾಗಿ ನಾಮಫಲಕಗಳನ್ನು ಅಳವಡಿಸಬೇಕು ಎಂದು ಈಗಾಗಲೇ ಸರ್ಕಾರದಿಂದ ಆದೇಶ ಹೊರಡಿಸಲಾಗಿದೆ ಎಂದು ಸ್ಪಷ್ಟಪಡಿಸಿದರು.

ದೀರ್ಘಕಾಲದಿಂದ ಅರಣ್ಯ ಭೂಮಿ ಅಥವಾ ಸರ್ಕಾರಿ ಜಾಗದಲ್ಲಿ ವಾಸಿಸುತ್ತಿರುವ ಭೂ ರಹಿತ ಜನರನ್ನು ಯಾವುದೇ ಕಾರಣಕ್ಕೂ ಒಕ್ಕಲೆಬ್ಬಿಸಬಾರದು. ಈ ಕುರಿತು ಪ್ರಧಾನ ಕಾರ್ಯದರ್ಶಿಗಳು ಈಗಾಗಲೇ ಕಟ್ಟುನಿಟ್ಟಿನ ಆದೇಶ ಹೊರಡಿಸಿದ್ದಾರೆ. ಪರ್ಯಾಯವಾಗಿ ಅವರಿಗೆ ಬೇಕಾದ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಿಕೊಡಬೇಕು ಎಂದು ತಿಳಿಸಿದರು.

ಆನ್ ಲೈನ್ ನಲ್ಲಿ ಕುಂದುಕೊರತೆ ಸಲ್ಲಿಸಲು ಶೀಘ್ರ ವ್ಯವಸ್ಥೆ:

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಮುದಾಯಗಳಿಂದ ಬರುವ ದೂರುಗಳು ಹಾಗೂ ಕುಂದುಕೊರತೆಗಳನ್ನು ಮುಂಬರುವ ದಿನಗಳಲ್ಲಿ ಆನ್‌ಲೈನ್ ಮೂಲಕ ಸಲ್ಲಿಸಲು ಅವಕಾಶ ಕಲ್ಪಿಸಲಾಗುವುದು. ಇವುಗಳನ್ನು ಕಂದಾಯ ಇಲಾಖೆ ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮಟ್ಟದಲ್ಲಿ ಶೀಘ್ರವಾಗಿ ವಿಲೇವಾರಿ ಮಾಡಬೇಕು. ಕೃಷಿ ಮತ್ತು ತೋಟಗಾರಿಕೆ ಸೇರಿದಂತೆ ಎಲ್ಲಾ ಇಲಾಖೆಗಳಿಗೂ ಈ ನಿಯಮ ಅನ್ವಯಿಸಲಿದ್ದು, ತಾಲೂಕು ಮಟ್ಟದ ಅಧಿಕಾರಿಗಳು ಈ ದೂರುಗಳ ಬಗ್ಗೆ ಸಮಗ್ರವಾಗಿ ಚಿಂತನೆ ನಡೆಸಿ, ಯಾವುದೇ ವಿಳಂಬವಿಲ್ಲದೆ ಗಂಭೀರ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ಎಸ್‌ಸಿಪಿ/ಟಿಎಸ್‌ಪಿ ಯೋಜನೆಯಡಿ ಅಭಿವೃದ್ದಿ:

ಕೆಲವು ಕಂದಾಯ ಗ್ರಾಮಗಳಲ್ಲಿ ಸಣ್ಣ ಸಮುದಾಯಗಳು ಹಾಗೂ ಪರಿಶಿಷ್ಟ ಜಾತಿ/ಪಂಗಡಗಳ ಜನರ ಸಂಖ್ಯೆ ಕಡಿಮೆ ಇರುತ್ತದೆ. ಇಂತಹ ಸಂದರ್ಭದಲ್ಲಿ ಸಾರ್ವಜನಿಕರ ಬೇಡಿಕೆಗೆ ಅನುಗುಣವಾಗಿ ಲಭ್ಯವಿರುವ ಭೂಮಿಯನ್ನು ಗುರುತಿಸಿ, ಕನಿಷ್ಠ 1-2 ಎಕರೆ ಜಾಗವನ್ನು ನೀಡಿ, ಅದನ್ನು ಎಸ್‌ಸಿಪಿ ಮತ್ತು ಟಿಎಸ್‌ಪಿ ಯೋಜನೆಯಡಿ ಅಭಿವೃದ್ದಿಪಡಿಸಲು ತಾಲೂಕು ಮತ್ತು ಸಿಇಒ ಮಟ್ಟದಲ್ಲಿ ಕ್ರಮ ಕೈಗೊಳ್ಳಬೇಕು ಎಂದರು.

ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಒಟ್ಟು 42 ಪರಿಶಿಷ್ಟ ಜಾತಿಯ ವಿದ್ಯಾರ್ಥಿ ನಿಲಯ/ವಸತಿ ಶಾಲೆಗಳು ಮತ್ತು 29 ಪರಿಶಿಷ್ಟ ಪಂಗಡದ ನಿಲಯಗಳು ಕಾರ್ಯನಿರ್ವಹಿಸುತ್ತಿವೆ. ಮೆಟ್ರಿಕ್ ಪೂರ್ವದ 22 ನಿಲಯಗಳ ಪೈಕಿ 21 ಸ್ವಂತ ಕಟ್ಟಡ ಹೊಂದಿದ್ದು, ಕೇವಲ 1 ಬಾಡಿಗೆ ಕಟ್ಟಡದಲ್ಲಿದೆ. ಮೆಟ್ರಿಕ್ ನಂತರದ 18 ನಿಲಯಗಳಲ್ಲಿ 13 ಸ್ವಂತ ಕಟ್ಟಡ ಹಾಗೂ 5 ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿವೆ. ಬಾಡಿಗೆ ಕಟ್ಟಡಗಳಿಗೆ ಸ್ವಂತ ನಿವೇಶನ ಒದಗಿಸಲು ಈಗಾಗಲೇ ಕೆಎಂಇಆರ್‌ಸಿ ಯೋಜನೆಯಡಿ ಪ್ರಸ್ತಾವನೆಗಳನ್ನು ಸಲ್ಲಿಸಲಾಗಿದೆ ಎಂದು ಅಧಿಕಾರಿಗಳು ಸಭೆಗೆ ತಿಳಿಸಿದರು.

ಪರಿಶಿಷ್ಟ ಜಾತಿ ಮತ್ತು ಪಂಗಡದ ಜನಾಂಗದವರು ವಾಸಿಸುವ ಕಾಲೋನಿಗಳಲ್ಲಿ ಸಿ.ಸಿ. ರಸ್ತೆ, ಚರಂಡಿ ಹಾಗೂ ಕುಡಿಯುವ ನೀರಿನ ಸೌಕರ್ಯ ಒದಗಿಸಲು ಹೆಚ್ಚಿನ ಆದ್ಯತೆ ನೀಡಬೇಕು. ನಗರ ಸ್ಥಳೀಯ ಸಂಸ್ಥೆಗಳಾದ ಬಳ್ಳಾರಿ ಮಹಾನಗರ ಪಾಲಿಕೆ, ನಗರಸಭೆ ಹಾಗೂ ವಿವಿಧ ಪುರಸಭೆಗಳು ತಮ್ಮ ತೆರಿಗೆ ನಿಧಿಯ ನಿಗದಿತ ಪಾಲನ್ನು ಎಸ್‌ಸಿ-ಎಸ್‌ಟಿ ಜನಾಂಗದ ಕಲ್ಯಾಣ ಕಾರ್ಯಕ್ರಮಗಳಿಗೆ ವಿನಿಯೋಗಿಸಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಆಯೋಗದ ಸದಸ್ಯರುಗಳಾದ ದಿವಾಕರ.ಎನ್., ಗೀತಾ ಥಾವಂಶಿ, ಕಾರ್ಯದರ್ಶಿ ಡಾ.ಶಿವರಾಮು ಹೆಚ್.ಎಸ್. ಸಂಶೋಧನಾ ಅಧಿಕಾರಿ ಸಿಂಘು ರಘು ಹೆಚ್.ಎಸ್., ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಸುಮನ್ ಡಿ.ಪೆನ್ನೇಕರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್, ಬಳ್ಳಾರಿ ವಲಯ ಉಪಅರಣ್ಯ ಸಂರಕ್ಷಣಾಧಿಕಾರಿ ಡಾ.ಕೆ.ಎನ್ ಬಸವರಾಜ, ಮಹಾನಗರ ಪಾಲಿಕೆಯ ಆಯುಕ್ತ ಪಿ.ಎಸ್.ಮಂಜುನಾಥ್ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಇದ್ದರು.


ಡ್ರೈವರ್ ಕಾಲೋನಿಯಲ್ಲಿನ ಕುಟುಂಬಗಳಿಗೆ ಹಕ್ಕುಪತ್ರ ನೀಡುವಂತೆ ಮನವಿ

ಸಿರುಗುಪ್ಪ ,ಮೇ.19-

ನಗರದ ತಾಲೂಕು ಕಛೇರಿಯಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿ(ಅಂಬೇಡ್ಕರ್‌ವಾದ) ವತಿಯಿಂದ ಡ್ರೈವರ್ ಕಾಲೋನಿ ನಿವಾಸಿಗಳಿಗೆ ನಿವೇಶನ ಹಕ್ಕುಪತ್ರ ನೀಡುವಂತೆ ಆಗ್ರಹಿಸಿ ಶಿರಸ್ಥೆದಾರ ಸಿದ್ದಾರ್ಥ ಕಾರಂಜಿ ಅವರ ಮೂಲಕ ಜಿಲ್ಲಾಧಿಕಾರಿಗಳಿಗೆ ಹಾಗೂ ನಗರಸಭೆ ಪೌರಾಯುಕ್ತರಿಗೆ ಮನವಿ ಸಲ್ಲಿಸಲಾಯಿತು.

ದಲಿತ ಸಂಘರ್ಷ ಸಮಿತಿಯ ತಾಲೂಕು ಸಂಚಾಲಕ ನಾಗೇಶ್ವರ್‌ರಾವ್ ಮಾತನಾಡಿ ಡ್ರೈವರ್/ ಆಶ್ರಯ ಕಾಲೋನಿಯ ಉದ್ಯಾನವನದ ಖಾಲಿಜಾಗದಲ್ಲಿ ಸುಮಾರು 15 ರಿಂದ 20 ವರ್ಷಗಳಿಂದ ವಾಸವಿರುವ 40ಕ್ಕೂ ಅಧಿಕ ಕುಟುಂಬಗಳಿಗೆ ಆಶ್ರಯ ನಿವೇಶನಗಳನ್ನು ಹಂಚಿಕೆ ಮಾಡಿ ಶೀಘ್ರವೇ ಹಕ್ಕುಪತ್ರ ನೀಡಬೇಕೆಂದು ಒತ್ತಾಯಿಸಿದರು.

ಜಿಲ್ಲಾ ಸಂಚಾಲಕ ಡಿ.ಇ.ವೀರೇಶ, ತಾಲೂಕು ಸಂಚಾಲಕ ರಾಮಾಂಜಿನಿ ಮಾತನಾಡಿ ನಗರದ 18ನೇ ವಾರ್ಡ್,ಡ್ರೈವರ್ ಕಾಲೋನಿ



ಮತ್ತು ಆಶ್ರಯ ಕಾಲೋನಿಯ ಸರ್ವೆ. ನಂ.193, 359ಬಿ, 361, 362ಬಿ ಮತ್ತು 365 ರಲ್ಲಿ ಸರಿ ಸುಮಾರು 813 ಆಶ್ರಯ ನಿವೇಶನಗಳಲ್ಲಿ 2003ರಲ್ಲಿ ಅಂದಿನ ಶಾಸಕರಾದ ಎಮ್.ಶಂಕರರೆಡ್ಡಿ ಅವರು ಒಟ್ಟು 303 ಮನೆಗಳನ್ನು ಹಂಚಿಕೆ ಮಾಡಿರುತ್ತಾರೆ.

ಸಂಬಂಧಿಸಿದ ಅಧಿಕಾರಿಗಳಿಗೆ ಒಂದು ತಿಂಗಳ ಕಾಲಾವಕಾಶವನ್ನು ನೀಡಲಾಗಿದ್ದು, ಒಂದು ವೇಳೆ ಹಕ್ಕುಪತ್ರ ನೀಡಬೇಕು. ವಾಸಿಸಲು ಯೋಗ್ಯವಾದ ಮೂಲಭೂತ ಸೌಲಭ್ಯಗಳಾದ ರಸ್ತೆ, ಚರಂಡಿ, ವಿದ್ಯುತ್ ಸಂಪರ್ಕ, ನೀರು ಸಂಪರ್ಕ ಒದಗಿಸಬೇಕು.

ಇಲ್ಲದೇ ಹೋದರೆ ಮುಂದಿನ ದಿನಗಳಲ್ಲಿ ಜಿಲ್ಲಾ ಕಛೇರಿ ಮತ್ತು ತಾಲೂಕು ಕಛೇರಿಯ ಮುಂಭಾಗದಲ್ಲಿ ಉಗ್ರ ಹೋರಾಟ ಮಾಡಲಾಗುವುದೆಂದು ತಿಳಿಸಿದರು.


ಇದೇ ವೇಳೆ ಡಿ.ಎಸ್.ಎಸ್ (ಅಂಬೇಡ್ಕರ್ ವಾದ) ತಾಲೂಕು ಸಂಚಾಲಕರಾದ ಹುಸೇನಪ್ಪ, ಶರಣಪ್ಪ, ತಾಯಪ್ಪ, ಮಾರೆಪ್ಪ ಹಾಗೂ ಸ್ಥಳೀಯ ನಿವಾಸಿಗಳು ಇದ್ದರು.

ಜನ್ ಭಾಗೀದಾರಿ-ಸಬ್ಸೆ ದೋರ, ಸಬ್ಸೆ ಪೆಹ್ಲೆ ಎಂಬ ವಿಶೇಷ ಐಇಸಿ ಅಭಿಯಾನ

ಕಲಬುರಗಿ,ಮೇ.19-

ಕೇಂದ್ರ ಬುಡಕಟ್ಟು ವ್ಯವಹಾರಗಳ ಮಂತ್ರಾಲಯದ ವತಿಯಿಂದ ಜಿಲ್ಲೆಯಲ್ಲಿ ಮೇ 18 ರಿಂದ 25ರವರೆಗೆ 'ಜನ್ ಭಾಗೀದಾರಿ-ಸಬ್ಸೆ ದೋರ, ಸಬ್ಸೆ ಪೆಹ್ಲೆ' ಎಂಬ DA-JGUA (ಧರ್ತಿ ಅಭಾ ಜನ ಜಾಗೃತಿ ಗ್ರಾಮ ಉತ್ಕರ್ಷ ಅಭಿಯಾನ) ಯೋಜನೆಯಡಿ ವಿಶೇಷ ಐಇಸಿ ಅಭಿಯಾನ ಹಮ್ಮಿಕೊಳ್ಳಲಾಗಿದೆ.

ಈ ಅಭಿಯಾನದ ಉದ್ಘಾಟನಾ ಸಮಾರಂಭದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಾದ ಪ್ರಿತಿ ಚಂದ್ರಶೇಖರ ಅವರು ಮಾತನಾಡಿ, ಬುಡಕಟ್ಟು ಪರಿಶಿಷ್ಟ ಪಂಗಡದ ಜನರಿಗೆ ಕೇಂದ್ರ ಹಾಗೂ



ರಾಜ್ಯ ಸರ್ಕಾರಗಳ ಯೋಜನೆಗಳ ಪ್ರಯೋಜನ ತಲುಪಿಸುವುದು ಮತ್ತು ಅದಕ್ಕೆ ಬೇಕಾಗುವ ಅಗತ್ಯ ದಾಖಲೆಗಳನ್ನು ಒದಗಿಸುವುದು ಅಭಿಯಾನದ ಉದ್ದೇಶವಾಗಿದೆ.

ಗ್ರಾಮ ಮಟ್ಟದಲ್ಲಿ ಜಾಗೃತಿ, ಜನರ ಕುಂದು ಕೊರತೆ ಆಲಿಕೆ ಮತ್ತು ಆರೋಗ್ಯ ತಪಾಸಣಾ ಶಿಬಿರವನ್ನು ಸಂಬಂಧಿಸಿದ ಇಲಾಖೆಗಳ ಸಮನ್ವಯದೊಂದಿಗೆ ಆಯೋಜಿಸಲಾಗಿದ್ದು, ಜಿಲ್ಲೆಯ ಪರಿಶಿಷ್ಟ ಪಂಗ'ಡದ ಸಮುದಾಯದ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಇದರ ಸದುಪಯೊಗ ಪಡೆದು ಕೊಳ್ಳ ಬೇಕೆಂದು ಅವರು ತಿಳಿಸಿದರು.

ಒಂದನೇಯ ಪುಟದಿಂದ

ತುಮಕೂರಿನ ಸಾಧನಾ ಸಮಾವೇಶದಲ್ಲಿ ಸೌಲಭ್ಯಗಳ ವಿತರಣೆ ದಾಖಲೆ

ಇತ್ಯರ್ಥ ಪಡಿಸಲಾಗಿದೆ.

ಮೂರು ವರ್ಷದ ಸಾಧನಾ ಸಮರ್ಪಣಾ ಸಮಾವೇಶದ ವೇಳೆಗೆ ಬಾಕಿ ಪ್ರಕರಣದ ಸಂಖ್ಯೆಯನ್ನು ಶೂನ್ಯಕ್ಕೆ ತರಬೇಕೆಂಬ ಗುರಿಯೊಂದಿಗೆ ಕಂದಾಯ ಸಚಿವ ಕೃಷ್ಣಬೈರೇಗೌಡ ಹರಸಾಹಸ ನಡೆಸಿದರು. ಆದರೆ ಕೆಲ ಅಧಿಕಾರಿಗಳ ಅಸಹಕಾರದಿಂದ ಅದು ಸಾಧ್ಯವಾಗಿಲ್ಲ. ಆದರೂ ಗರಿಷ್ಠ ಪ್ರಮಾಣದ ಪ್ರಕರಣಗಳನ್ನು ಇತ್ಯರ್ಥ ಪಡಿಸಿರುವುದಾಗಿ ಸಚಿವ ಕೃಷ್ಣ ಭೈರೇಗೌಡ ಸಂತೃಪ್ತಿ ವ್ಯಕ್ತಪಡಿಸಿದ್ದಾರೆ.

ಇಂದು ಸಮಾವೇಶಕ್ಕೂ ಮುನ್ನ ಸಚಿವ ಕೃಷ್ಣಭೈರೇಗೌಡ ಫಲಾನುಭವಿಗಳ ಜೊತೆ ಸಮಾಲೋಚನೆ ನಡೆಸಿದರು. ಕಂದಾಯ ಇಲಾಖೆಯ ಅಧಿಕಾರಿಗಳು ಯಾವ ರೀತಿ ಸ್ಪಂದಿಸಿದರು? ಸರ್ಕಾರದ ಆಶಯದಂತೆ ಸುಲಭ ಹಾಗೂ ಸರಳವಾಗಿ ದಾಖಲಾತಿಗಳನ್ನು ಮಾಡಲಾಯಿತೇ? ಯಾರಾದರೂ ಹಣ ಕೇಳಿದರೇ? ಅಥವಾ ಅನಗತ್ಯವಾಗಿ ಅಲೆದಾಡಿಸಲಾಯಿತೇ? ಎಂಬೆಲ್ಲಾ ವಿವರಗಳನ್ನುಪಡೆದುಕೊಂಡರು. ಫಲಾನುಭವಿಗಳು ಸಚಿವರ ಜೊತೆ ಸಕಾರಾತಕ ಮಾಹಿತಿಗಳನ್ನು ಹಂಚಿಕೊಂಡರು.

ಜೂನ್ 20 ರಿಂದ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ಆರಂಭ: ಜಿಲ್ಲಾ ಚುನಾವಣಾಧಿಕಾರಿ ಎಸ್.ಪೂವಿತಾ

ಗಳಿಗೆ ಈಗಾಗಲೇ ನಿರ್ದೇಶನ ನೀಡಲಾಗಿದೆ. ಇದಲ್ಲದೆ ಭಾರತ ಚುನಾವಣಾ ಆಯೋಗದ ನಿರ್ದೇಶನ ಹಾಗೂ ಸುತ್ತೋಲೆಗಳನ್ವಯ ವಿಧಾನಸಭಾ ಮತಕ್ಷೇತ್ರವಾರು ಮತಗಟ್ಟೆ ಮಟ್ಟದ ಏಜೆಂಟರನ್ನು (ಬಿಎಲ್ಎ) ನೇಮಕ ಮಾಡುವ ಕುರಿತು ನೋಂದಾಯಿತ ರಾಜಕೀಯ ಪಕ್ಷದವರಿಗೂ ತಿಳಿಸಲಾಗಿದೆ. ಎಸ್.ಐ.ಆರ್ ಕುರಿತು ಸಾರ್ವಜನಿಕರಲ್ಲಿ ಯಾವುದೇ ರೀತಿ ಗೊಂದಲಗಳಿದ್ದಲ್ಲಿ ಆಯಾ ವಿಧಾನಸಭಾ ಕ್ಷೇತ್ರದ ಮತದಾರರ ನೋಂದಣಾಧಿಕಾರಿಗಳನ್ನು ಸಂಪರ್ಕಿಸುವತೆ ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲೆಯ ಜಿಲ್ಲಾಧಿಕಾರಿಗಳಾದ ಎಸ್.ಪೂವಿತ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಕ್ರೀದ್ ಹಬ್ಬದ ಶಾಂತಿ ಸಭೆ. ಶಾಂತಿ ಸುವ್ಯವಸ್ಥೆ ಭಂಗ ತರಬಾರದು - ಶಶಿಕಾಂತ ಎಂ.

ಜೊತೆಗೆ ಸರ್ಕಾರದ ಮಾರ್ಗಸೂಚಿ ಕಟ್ಟುನಿಟ್ಟಾಗಿ ಪಾಲಿಸಬೇಕು' ಎಂದ ರು. ಪಿಎಸ್ ಐ ಚಂದ್ರಶೇಖರ ಹಿರೇಮಠ ಮಾತನಾಡಿ ಹಬ್ಬ ಹರಿ ದಿನಗಳಲ್ಲಿ ಹಿಂದೂ-ಮುಸ್ಲಿಂ ಎನ್ನದೆ ಎಲ್ಲರೂ ಸಹೋದರತ್ವದ ಭಾವ ದಿಂದ ಹಬ್ಬಗಳನ್ನು ಆಚರಿಸಬೇಕು. ಪರಸ್ಪರ ಕಷ್ಟ-ಸುಖಗಳಲ್ಲಿ ಭಾಗಿ ಯಾಗುವುದರ ಮೂಲಕ ಸಮಾಜ ದಲ್ಲಿ ಶಾಂತಿ ಮತ್ತು ಸೌಹಾರ್ದತೆ ಕಾಪಾಡಬೇಕು. ಬೈಕ್ ವಾಹನ ಚಾಲನೆ ಮಾಡುವಾಗ ಕಾನೂನು ಸುವ್ಯವಸ್ಥೆ ಕಾಪಾಡಬೇಕು ಇಲ್ಲ ವಾದರೆ ಕ್ರಮಕೈಗೊಳಲಾಗುವುದು ಎಂದರು.

ಈ ಸಂದರ್ಭದಲ್ಲಿ ಖಾಜಿ ಮಂಜೂರ ಸಾಬ್, ಖಾಜಿ ನವಾಜ್ ಸಾಬ್, ಪ.ಪಂಚಾಯತಿ ಸದಸ್ಯ ರಾದ ಹಸೇನ ಅಲಿಸಾಬ್, ಮೌಲಾ ಸಾಬ ವರ್ಚಸ್, ಮುಖಂಡರಾದ ಕಲ್ಲೂರು ಬಸವರಾಜ ನಾಯಕ, ರಾಜಪ್ಪಹೊನ್ನಟಗಿ ಮಹ್ಮದ ಹುಸೇನ್, ಅರಳಪ್ಪ ಯದಲದಿನ್ನಿ, ಹೆಚ್ ಕೆ. ಶಿವಗ್ಯಾನಿ,ಜಯಪ್ಪ ಸತ್ತರಸಾಬ್, ಇಸ್ಮಾಯಿಲ್, ಇಬ್ರಾ ಹಿಂ, ಶಾಂತಪ್ಪ ಪಿತಗಲ್, ಇನ್ನಿತರರು ಇದ್ದರು.

ಬಕ್ರೀದ್ ಹಬ್ಬದ ಜಿಲ್ಲಾ ಸಮಿತಿ ಸಭೆ ಪ್ರಾಣಿಗಳ ಹತ್ಯೆ ತಡೆಗಟ್ಟಲು ಸೂಕ್ತ ಕ್ರಮ ವಹಿಸಿ

ಸಂರಕ್ಷಣಾ ಆದ್ಯಾದೇಶ-2020, ಕಾಲುನಡಿಗೆ ಮೂಲಕ ಪ್ರಾಣಿಗಳ ಸಾಗಾಣಿಕೆ ನಿಯಮ, ಮನೋ ರಂಜನೆಗಾಗಿ ಪ್ರದರ್ಶನ ಮಾಡುವ ಪ್ರಾಣಿಗಳ ನಿಯಮಗಳು 1973, ಪ್ರಾಣಿ ಹಿಂಸಾ ಪ್ರತಿಬಂಧಕ ನಿಯಮಗಳು 1978ರಡಿ ಎಲ್ಲಾ ವಯಸ್ಸಿ ನ ಆಕಳು, ಆಕಳ ಕರು, ಹೋರಿ ಮತ್ತು ಎತ್ತು ಹಾಗೂ 13 ವರ್ಷದೊಳಗಿನ ಕೋಣ ಮತ್ತು ಎಮ್ಮೆಗಳನ್ನು ಹತ್ಯೆ ನಡೆಸತಕ್ಕದ್ದಲ್ಲ. ಗರ್ಭವಿರುವ ಪ್ರಾಣಿಗಳನ್ನು ವಧೆ ಮಾಡುವಂತಿಲ್ಲ. 03 ತಿಂಗಳ ಕೆಳಗಿನ ವಯಸ್ಸಿ ನ ಪ್ರಾಣಿಗಳನ್ನು ವಧೆ ಮಾಡುವಂತಿಲ್ಲ. ಈ ಬಗ್ಗೆ ಸಂಬಧಿಸಿದ ಇಲಾಖೆಯ ಅಧಿಕಾರಿ ಗಳು ಎಚ್ಚರ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಕಡ್ಡಾಯವಾಗಿ ಜಾನುವಾರ ಸಾಗಾಣಿಕೆ ಕಾಯಿದೆ 2006ರಲ್ಲಿ ತಿಳಿಸಿರುವ ಎಲ್ಲಾ ಅಂಶಗಳನ್ನು ಪಾಲಿಸುವಂತೆ ಸಾರ್ವಜನಿಕರಿಗೆ ತಿಳುವಳಿಕೆ ನೀಡಬೇಕು. ಒಂದು ವೇಳೆ ಕಾಯಿದೆಯಲ್ಲಿನ ಯಾವುದಾದರೂ ಅಂಶಗಳನ್ನು ಉಲ್ಲಂಘಿಸಿದ್ದಲ್ಲಿ ಸಂಬಧಪಟ್ಟ ಇಲಾಖೆಗಳಾದ ನಗರ ಸ್ಥಳೀಯ ಸಂಸ್ಥೆಗಳು, ಪಶು ಸಂಗೋಪಣೆ ಇಲಾಖೆ ಮತ್ತು ಸಾರಿಗೆ ಇಲಾಖೆ ಅವರು ಪೊಲೀಸ್ ಇಲಾಖೆಯ ಗಮನಕ್ಕೆ ತರಬೇಕು ಎಂದು ಜಿಲ್ಲಾಧಿಕಾರಿಗಳು ಸಂಬಧಿಸಿದ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಪ್ರತಿಯೊಂದು ಹೆದ್ದಾರಿಯಲ್ಲಿ ಇತರೆ ರಾಜ್ಯಗಳಿಂದ ಜಿಲ್ಲೆಗೆ ಪ್ರವೇಶಿಸುವ ಮತ್ತು ರಾಯಚೂರು ಜಿಲ್ಲೆಯಿಂದ ಹೊರ ರಾಜ್ಯಗಳಿಗೆ ಸಾಗಿಸಲ್ಪಡುವ ಜಾನುವಾರುಗಳ ಕುರಿತು ನಿಗಾವಹಿಸಲು ಈಗಾಗಲೇ ಸ್ಥಾಪಿಸಲಾಗಿರುವ ಆರಕ್ಷಕ ಇಲಾಖೆಯ ಚೆಕ್ ಪೋಸ್ಟಗಳಲ್ಲಿ ಪಶು ಸಂಗೋಪಣೆ ಇಲಾಖೆ ಮತ್ತು ಸಾರಿಗೆ ಇಲಾಖೆಯ ಸಿಬ್ಬಂದಿಗಳನ್ನು ದಿನದ 24ಗಂಟೆಗಳ ಕಾಲ ಕಡ್ಡಾಯವಾಗಿ ನಿಯೋಜಿಸುವಂತೆ ಜಿಲ್ಲಾಧಿಕಾರಿಗಳು ಸಂಬಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಈ ವೇಳೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ ಅವರು ಮಾತನಾಡಿ, ನಗರ ಸ್ಥಳೀಯ ಸಂಸ್ಥೆಗಳ ಪೌರಾಯುಕ್ತರು ಹಾಗೂ ಮುಖ್ಯಾಧಿಕಾರಿಗಳು ಬಕ್ರೀದ್ ಹಬ್ಬದ ಪ್ರಯುಕ್ತ ಉತ್ಪತ್ತಿಯಾಗುವ ತ್ಯಾಜ್ಯವನ್ನು ವಿಲೇ ಮಾಡಲು ಸಾರ್ವಜನಿಕರ ಮನೆಯ ಬಾಗಿಲುಗಳಿಗೆ ಬರುವ ನಗರ ಸ್ಥಳೀಯ ಸಂಸ್ಥೆಗಳ ವಾಹನಗಳಿಗೆ ವ್ಯವಸ್ಥಿತವಾಗಿ ಸೋರಿಕೆಯಾಗದಂತೆ ಚೀಲಗಳಲ್ಲಿ ಕಟ್ಟಿ ನೀಡುವಂತೆ ಸಾರ್ವಜನಿಕರಿಗೆ ತಿಳುವಳಿಕೆ ನೀಡಬೇಕು. ಘನತ್ಯಾಜ್ಯ ವಸ್ತು ವಿಲೇವಾರಿ ವಾಹನಗಳ ಮೂಲಕ ಈ ಕುರಿತು ಜಿಂಗಲ್ ಪ್ರಸಾರ ಮಾಡುವಂತೆ ಸೂಚಿಸಿದರು.

ಘನತ್ಯಾಜ್ಯ ವಿಲೇವಾರಿ ಘಟಕದಲ್ಲಿ ಸುಮಾರು 10★10 ಅಡಿಯಷ್ಟು ಗುಂಡಿಯನ್ನು ತೋಡಿ, ಈ ತ್ಯಾಜ್ಯವನ್ನು ನಿಯಮಾನುಸಾರ ಮುಚ್ಚಲು ಕ್ರಮವಹಿಸಬೇಕು. ಈ ಕಾರ್ಯಕ್ಕಾಗಿ ನಗರ ಸ್ಥಳೀಯ ಸಂಸ್ಥೆಗಳು ಬೇಕಾದ ಎಲ್ಲಾ ವ್ಯವಸ್ಥೆಯನ್ನು ಮಾಡಿಕೊಳ್ಳುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಸಂಬಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಇದೇ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಶಿವಾನಂದ, ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರದ ಯೋಜನಾ ನಿರ್ದೇಶಕ ತಿಮ್ಮಪ್ಪ ಬಿರಾದಾರ್, ರಾಯಚೂರು ಮಹಾನಗರ ಪಾಲಿಕೆಯ ಜೋನಲ್-01ರ ಉಪ ಆಯುಕ್ತ ಮಲ್ಲಿಕಾರ್ಜುನ, ಸಹಾಯಕ ಆಯುಕ್ತರ ಕಚೇರಿಯ ತಹಶೀಲ್ದಾರ್ ರಾಜಶೇಖರ, ಪಶು ಸಂಗೋಪಣೆ ಇಲಾಖೆ ಉಪ ನಿರ್ದೇಶಕ ಪೋಮ್ ಸಿಂಗ್, ರಾಯಚೂರು ಸಿಪಿಐ ಉಮೇಶ ಕಾಂಬಳೆ ಸೇರಿದಂತೆ ವಿವಿಧ ಇಲಾಖೆಗಳಾದ ಸಾರಿಗೆ, ಪುರಸಭೆ, ಪಟ್ಟಣ ಪಂಚಾಯತ್, ಆರೋಗ್ಯ ನಿರೀಕ್ಷಕರು ಸಭೆಯಲ್ಲಿ ಇದ್ದರು.

ವರದಿಗಾರನ ಮೊಮ್ಮಗಳು ★ತೊಟ್ಟಿಲು ಕಾರ್ಯಕ್ರಮ ಕ್ಕೆ ಮುನ್ನಾ ಪಠಾಣ ಶುಭ ಕೋರಿದರು



ಶಿಗ್ಗಾವ ತಾಲೂಕಿನ ಹೊಸೂರು ಗ್ರಾಮದಲ್ಲಿ ವರದಿಗಾರರಾದ ದಾವಲ್ ಸಾಬ್.ಎಂ.ಹುಬ್ಬಳ್ಳಿ ಇವರ ಮೊಮ್ಮಗಳಾದ ಹೀಬಾ ಫಾತಿಮಾನ ತೊಟ್ಟಿಲ ಕಾರ್ಯಕ್ರಮ ಅದ್ದೂರಿಯಾಗಿ ಜರುಗಿತು ಈ ಕಾರ್ಯಕ್ರಮದಲ್ಲಿ ಶಾಸಕರ ಸಹೋದರ ಮುನ್ನಾ ಪಠಾಣ ಭಾಗವಹಿಸಿ ಮಗುವಿಗೇ ಆರೋಗ್ಯ ಆಯುಷ್ಯ ಮಗುವಿನ ಭವಿಷ್ಯ ಉಜ್ವಲ ವಾಗಲಿ ಎಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಶಿಗ್ಗಾವ್ ತಾಲೂಕ್ ಅಲ್ಪಸಂಖ್ಯಾತರ ಘಟಕದ ಅಧ್ಯಕ್ಷರಾದ ಬಾಬರ ಬವಾಜಿ ಕೆ ಡಿ ಪಿ.ಸದಸ್ಯರಾದ ಅಜೀಜ್ ಯಡ್ಡಳ್ಳಿ ನ್ಯಾಯವಾದಿಗಳು ಮಂಜುನಾಥ ಧಾರವಾಡ ಕಾಂಗ್ರೆಸ್ ಯುವ ಮುಖಂಡ ಡಿಸಿ. ಬಡಿಗೇರ್ ಗ್ರಾಮ ಪಂಚಾಯತಿ ಉಪಾಧ್ಯಕ್ಷರಾದ ಫಕ್ಕೀರೆ ಹರಿಜನ್ ವಿವೇಕಾನಂದ ಪ್ರೌಢಶಾಲೆಯ ಸದಸ್ಯರಾದ ಎಲ್ಲಪ್ಪ ಹೊಸಮನಿ ಅಂಜುಮನ್ ಇಸ್ಲಾಂ ಕಮಿಟಿ ಮುಖಂಡರಾದ ಮಕ್ತುಮ್ ಸಾಬ್ ಮುಲ್ಲಾ ಇನ್ನೂ ಅನೇಕರು ಉಪಸ್ಥಿತರಿದ್ದರು.

ಪರಿಸರ ಸಮತೋಲನಕ್ಕೆ ವನ್ಯಜೀವಿ ಸಂರಕ್ಷಣೆ ಅತ್ಯಗತ್ಯ

56 ಪ್ರಬೇಧಗಳಿಗೆ ತಾಣವಾಗಲಿದೆ ಬಿಸಿಲೂರಿನ ಮೃಗಾಲಯ -ಈಶ್ವರ ಖಂಡ್ರೆ



ಕಲಬುರಗಿ,ಮೇ.19-

ಪರಿಸರ ಸಮತೋಲನ ಕಾಪಾಡುವ ನಿಟ್ಟಿನಲ್ಲಿ ಪ್ರಾಣಿ, ಪಕ್ಷಿ, ಸಸ್ಯ, ಕೀಟ ಪ್ರಬೇಧಗಳ ಸಂರಕ್ಷಣೆ ಅತ್ಯಗತ್ಯವಾಗಿದ್ದು, ಈ ನಿಟ್ಟಿನಲ್ಲಿ ಕಲಬುರಗಿ ಅತ್ಯಾಕರ್ಷಕ ಮೃಗಾಲಯವು ವನ್ಯಜೀವಿಗಳ ಮೇಲಿನ ಕಾಳಜಿ ಹೆಚ್ಚಿಸುವುದರ ಜೊತೆಗೆ ಪ್ರದೇಶದ ಪರಿಸರ ಪ್ರೇಮಿ, ವಿದ್ಯಾರ್ಥಿಗಳ ಜ್ಞಾನಾರ್ಜನೆಗೆ ಹಾಗೂ ಪ್ರವಾಸಿ ತಾಣವಾಗಿ ಇದು ರೂಪಗೊಳ್ಳಲಿದೆ ಎಂದು ಅರಣ್ಯ, ಪರಿಸರ ಹಾಗೂ ಜೀವಿಶಾಸ್ತ್ರ ಸಚಿವ ಈಶ್ವರ ಬಿ. ಖಂಡ್ರೆ ಹೇಳಿದರು.

ಜಿಲ್ಲಾಡಳಿತ, ಅರಣ್ಯ ಇಲಾಖೆ, ಕೆ.ಕೆ.ಆರ್.ಡಿ.ಬಿ. ಮಂಡಳಿ ಹಾಗೂ ಮೂರ್ತಿ ಟ್ರಸ್ಟ್ ಸಂಯುಕ್ತಾಶ್ರಯದಲ್ಲಿ ಸೋಮವಾರ ಚಿತ್ತಾಪುರ ತಾಲೂಕಿನ ಮಾಡಬೂಳ ಗ್ರಾಮದಲ್ಲಿ ಸುಮಾರು 43 ಎಕರೆ ಪ್ರದೇಶದ ವಿಸ್ತೀರ್ಣದಲ್ಲಿ 35 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣ ಮಾಡಲಾಗಿರುವ ಕಲಬುರಗಿ ಮೃಗಾಲಯವನ್ನು ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಐ.ಟಿ-ಬಿ.ಟಿ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರೊಂದಿಗೆ ಉದ್ಘಾಟಿಸಿದ ನಂತರ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು.

ನಮ್ಮ ಸರ್ಕಾರ ಬಂದ ಮೇಲೆ ನೆನೆಗುದ್ದಿಗೆ ಬಿದಿದ್ದ ಈ ಕಾರ್ಯಕ್ಕೆ ಸಚಿವ ಪ್ರಿಯಾಂಕ್ ಖರ್ಗೆ ಅವರ ವಿಶೇಷ ಆಸಕ್ತಿ ವಹಿಸಿ ಚುರುಕುಗೊಳಿಸಿದ ಪರಿಣಾಮ ಇಂದಿಲ್ಲಿ ಕಲ್ಯಾಣ ಕರ್ನಾಟಕ ಭಾಗದ ಹಂಪಿ ಹೊರತುಪಡಿಸಿದರೆ ಎರಡನೇ ಮೃಗಾಲಯ ಪ್ರದೇಶಕ್ಕೆ ಲೋಕಾರ್ಪಣೆ ಮಾಡಲಾಗಿದದ್ದು, ಎಲ್ಲಾ ವಯೋಮಾನದವರಿಗೆ ಜನಾಕರ್ಣನೆಯಾಗಲಿದೆ ಎಂದರು.

ಕೆ.ಕೆ.ಆರ್.ಡಿ.ಬಿ. ಮಂಡಳಿಯಿಂದ 29 ಕೋಟಿ ರೂ., ಮೃಗಾಲಯ ಪ್ರಾಧಿಕಾರದಿಂದ 6 ಕೋಟಿ ರೂ. ಹಾಗೂ ಇನ್ಫೋಸಿಸ್ ಸಂಸ್ಥೆಯ 3.20 ಕೋಟಿ ರೂ. ನೆರವಿನಿಂದ ಇಂದಿಲ್ಲಿ ಸುಂದರ ಮೃಗಾಲಯ ಸ್ಥಾಪನೆಯಾಗಿದೆ. ಕಲಬುರಗಿ ಮೃಗಾಲಯ ರಾಜ್ಯದ 9ನೇ ಮೃಗಾಲಯವಾಗಿದ್ದು, ದೇಶದಲ್ಲಿ ಮೃಗಾಲಯ ಸಂಖ್ಯೆಯಲ್ಲಿ ರಾಜ್ಯ ಮುಂಚೂಣಿಯಲ್ಲಿದೆ ಎಂದ ಅವರು, 2022ರ ಪ್ರಾಣಿ ಜನಗಣತಿ ಪ್ರಕಾರ ರಾಜ್ಯದಲ್ಲಿ 6,395 ಆನೆ, 563 ಹುಲಿಗಳಿವೆ ಎಂದರು.

ನೂತನ ಮೃಗಾಲಯದಲ್ಲಿ 56 ವಿವಿಧ ಪ್ರಭೇದದ ಪ್ರಾಣಿ-ಪಕ್ಷಿಗಳು ವೀಕ್ಷಣೆಗೆ ಲಭ್ಯ ಇರಲಿವೆ. ಎರಡು ಸಿಂಹಗಳನ್ನು ಬನ್ನೇರುಘಟ್ಟದಿಂದ ಈಗಾಗಲೇ ತರಲಾಗಿದೆ. ಮೊಸಳೆ, ನರಿ, ಇತ್ಯಾದಿ ಪ್ರಾಣಿಗಳು ನೋಡಲು ಸಿಗುತ್ತಿವೆ. ಮುಂಬರುವ ದಿನಗಳಲ್ಲಿ ಬೇರೆ ಬೇರೆ ಪ್ರಭೇದ ಪ್ರಾಣಿ, ಪಕ್ಷಿಗಳನ್ನು ತರಿಸಲಾಗುವುದು ಎಂದು ಸಚಿವ ಈಶ್ವರ ಖಂಡ್ರೆ, ಸಮೀಪದ ಚಿಂಚೋಳಿ ವನ್ಯಜೀವಿ ಧಾಮ ಅಭಿವೃದ್ಧಿಗೆ ವಿಶೇಷ ಒತ್ತು ನೀಡಲಾಗುವುದು. ಈಗಾಗಲೆ ಅಲ್ಲಿ ಬೋಟಿಂಗ್, ಸಫಾರಿಗೆ ಚಾಲನೆ ನೀಡಿ ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡಲಾಗಿದೆ ಎಂದರು.

ಕಕ ಭಾಗದಲ್ಲಿ ಹಸಿರು ಹೊದಿಕೆ ಹೆಚ್ಚಿಸಲು ಅಗತ್ಯ ಕ್ರಮ: ಕಲ್ಯಾಣ ಕರ್ನಾಟಕ ಭಾಗದಲಭ್ಯ ಹಸಿರು ಹೊದಿಕೆ ಕೊರತೆ ಇದೆ. ಕಲಬುರಗಿ, ಬೀದರ ಯಾದಗಿರಿ, ರಾಯಚೂರು ಹೀಗೆ ಜಿಲ್ಲೆಗಳಲ್ಲಿ ಶೇ.5ಕ್ಕಿಂತ ಕಡಿಮೆ ಅರಣ್ಯ ಪ್ರದೇಶ ಹೊಂದಿದೆ. ಹೀಗಾಗಿ, ಹವಾಮಾನದಲ್ಲಿ ವೈಪರಿತ್ಯಗಳಾಗುತ್ತಿದೆ. ಪರಿಸರ ಸಂರಕ್ಷಣೆಯ ಕುರಿತು ಜಾಗೃತಿ ಮೂಡಿಸುವ ಅವಶ್ಯಕತೆ ಇದೆ. ಈ ಬಗ್ಗೆ ಕೆ.ಕೆ.ಆರ್.ಡಿ.ಬಿ ಸಭೆಯಲ್ಲಿ ಚರ್ಚಿಸಿ ಅಗತ್ಯ ಅನುದಾನ ಬಿಡುಗಡೆಗೆ ಕ್ರಮವಹಿಸಲಾಗುವುದು ಎಂದು ಅರಣ್ಯ ಸಚಿವ ಈಶ್ವರ ಖಂಡ್ರೆ ಅಭಿಪ್ರಾಯಪಟ್ಟರು.

ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಕಳೆದ ಮೂರು ವರ್ಷದಲ್ಲಿ ಕಲ್ಯಾಣ ಕರ್ನಾಟಕ ಭಾಗದಲ್ಲಿ 11 ಲಕ್ಷ ಸಸಿ ನೆಡಲಾಗಿದೆ. ಅವುಗಳನ್ನು ಸುಮಾರು ಶೇ.80 ನೆಟ್ಟ ಸಸಿಗಳು ಬದುಕುಳಿದಿವೆ. ಈ ತರಹದ ಸಸಿಗಳಿಗೆ ಅಗತ್ಯ ಪ್ರಮಾಣ ನೀರು ಒದಗಿಸಿ ಐದು ವರ್ಷಗಳ ಕಾಲ ಸಂರಕ್ಷಣೆ ಮಾಡಬೇಕು ಎಂದು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಸಚಿವರು ಹೇಳಿದರು.

ಅರಣ್ಯ ಇಲಾಖೆಯಲ್ಲಿ ಪಶುವೈದ್ಯಕೀಯ ಸಿಬ್ಬಂದಿ ಹೆಚ್ಚಿಸಲು ಸಿಎಂ ಅವರು ಅರಣ್ಯ ಇಲಾಖೆಗೆ ಅನುಮತಿ ನೀಡಿದ್ದಾರೆ. ಮುಂದಿನ ದಿನಗಳಲ್ಲಿ ಅರಣ್ಯ ಇಲಾಖೆಗೆ ಅಗತ್ಯವಿರುವ ಸಿಬ್ಬಂದಿ ನೇಮಕಾತಿಗೆ ಅಗತ್ಯ ಕ್ರಮವಹಿಸಲಾಗುವುದು ಎಂದು ಸಚಿವರು ಪ್ರಶ್ನೆ ಯೊಂದಕ್ಕೆ ಉತ್ತರಿಸುತ್ತಾ ಹೇಳಿದರು.

ಅರಣ್ಯ ಭೂಮಿ ಒತ್ತುವರಿ ತೆರವಿಗೆ ಕ್ರಮ: ರಾಜ್ಯದ ಅರಣ್ಯ ಭೂಮಿ ತೆರವಿಗೆ ಕ್ರಮವಹಿಸಲಾಗಿದ್ದು ರಾಜ್ಯದಲ್ಲಿ ಈಗಾಗಲೇ 10,000 ಕೋಟಿ ರೂ. ಮೌಲ್ಯದ ಬೆಂಗಳೂರು ಒಂದರಲ್ಲೇ 250 ಎಕರೆ ಅರಣ್ಯ ಭೂಮಿ ತೆರವು ಮಾಡಲಾಗಿದೆ. ಸುಮಾರು 1 ಕೋಟಿ ಎಕರೆ ಅರಣ್ಯ, ಕಂದಾಯ ಒತ್ತುವರಿ ಜಮೀನು ತೆರವು ಹಂತ ಹಂತವಾಗಿ ನಡೆಯಲಿದೆ. ಈ ವಿಚಾರದಲ್ಲಿ ಎಸ್.ಐ.ಟಿ. ರಚಿಸುವಂತೆ ಸುಪ್ರೀಂ ಕೋರ್ಟ್ ಸೂಚನೆ ನೀಡಿದ್ದು, ಅದರಂತೆ ಕ್ರಮ ವಹಿಸಲಾಗುತ್ತದೆ ಎಂದು ಖಂಡ್ರೆ ಹೇಳಿದರು.

ಬೆಳಿಗ್ಗೆ 9.30 ರಿಂದ ಸಂಜೆ 5.30 ವೀಕ್ಷಣೆಗೆ ಲಭ್ಯ: ಮೃಗಾಲಯವು ಬೆಳಿಗ್ಗೆ 9.30 ರಿಂದ ಸಂಜೆ 5.30 ವರೆಗೆ ತೆರೆಯಲಿದ್ದು, ಪ್ರಾಣಿ-ಪಕ್ಷಿಗಳ ವೀಕ್ಷಣೆಗೆ ಲಭ್ಯವಾಗಿರಲಿದೆ. ಪ್ರತಿ ಮಂಗಳವಾರ ರಜೆ ಇರಲಿದೆ. 12 ವರ್ಷ ಮೇಲ್ಪಟ್ಟವರಿಗೆ 75 ರೂ., 12 ವರ್ಷಕ್ಕಿಂತ ಕಡಿಮೆ ವಯಸ್ಸಿ ನವರಿಗೆ 40 ರೂ. ಹಾಗೂ ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ 25 ರೂ. ಟಿಕೆಟ್ ದರ ನಿಗದಿ ಮಾಡಲಾಗಿದೆ. ಮೃಗಾಲಯದ ಟಿಕೆಟ್ ಕೌಂಟರ್‌ನಲ್ಲಿಯೆ ಟಿಕೆಟ್ ಪಡೆದು ವೀಕ್ಷಣೆ ಮಾಡಬಹುದಾಗಿದೆ.

ಕಾರ್ಯಕ್ರಮದಲ್ಲಿ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವ ಡಾ. ಶರಣಪ್ರಕಾಶ ಪಾಟೀಲ, ಕರ್ನಾಟಕ ಮೃಗಾಲಯ ಪ್ರಾಧಿಕಾರದ ಅಧ್ಯಕ್ಷ ಕೆ.ರಂಗಸ್ವಾಮಿ, ಶಾಸಕರಾದ ಅಲ್ಲಮಪ್ರಭು ಪಾಟೀಲ, ಎಂ.ವೈ.ಪಾಟೀಲ, ವಿಧಾನ ಪರಿಷತ್ ಶಾಸಕ ಜಗದೇವ ಗುತ್ತೇದಾರ, ಬಿ.ಜಿ.ಪಾಟೀಲ, ಜೆಸ್ಕಾಂ ಅಧ್ಯಕ್ಷ ಪ್ರವೀಣ ಪಾಟೀಲ, ಕೆ.ಕೆ.ಆರ್.ಟಿ.ಸಿ. ಅಧ್ಯಕ್ಷ ಅರುಣಕುಮಾರ ಪಾಟೀಲ, ಕಲಬುರಗಿ ಕಾಡಾ ಅಧ್ಯಕ್ಷ ಡಾ.ಎಂ.ಎ.ರಶೀದ್, ಕರ್ನಾಟಕ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಸದಸ್ಯ ಶರಣಕುಮಾರ ಮೋದಿ, ಅರಣ್ಯ ಪಡೆ ಮುಖ್ಯಸ್ಥರು ಮತ್ತು ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಡಾ.ಮೀನಾಕ್ಷಿ ನೇಗಿ, ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ) ಕುಮಾರ ಪುಷ್ಕರ್, ಕರ್ನಾಟಕ ಮೃಗಾಲಯ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ರವಿಶಂಕರ ಎಸ್. ಎಸ್., ಕಲಬುರಗಿ ವೃತ್ತದ ಅರಣ್ಯ ಸಂರಕ್ಷಣಾಧಿಕಾರಿ ವಸಂತ ರೆಡ್ಡಿ, ಜಿಲ್ಲಾಧಿಕಾರಿ ಇಕ್ರಮ್ ಶರೀಫ್, ಕಲಬುರಗಿ ನಗರ ಪೊಲೀಸ್ ಆಯುಕ್ತ ಡಾ.ಎಸ್.ಡಿ.ಶರಣಪ್ಪ, ಎಸ್.ಪಿ. ಅಡ್ಡೂರು ಶ್ರೀನುವಾಸುಲು, ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ, ಕಲಬುರಗಿ ಮಹಾನಗರ ಪಾಲಿಕೆ ಡಿ.ಸಿ.ಎಫ್ ಸುಮಿತ್ ಪಾಟೀಲ, ಇನ್ಫೋಸಿಸ್ ಸಂಸ್ಥೆಯ ಪ್ರತಿನಿಧಿ ಪ್ರಿಯಾ, ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳಾದ ಬಸವರಾಜ ಎಸ್. ಡಾಂಗೆ, ಸುನೀಲಕುಮಾರ್, ವಲಯ ಅರಣ್ಯಾಧಿಕಾರಿಗಳಾದ ನಾಗೇಶ, ವಿಜಯ ಕುಮಾರ ಸೇರಿದಂತೆ ಅರಣ್ಯ ಇಲಾಖೆಯ ಅನೇಕ ಅಧಿಕಾರಿ-ಸಿಬ್ಬಂದಿಗಳಿದ್ದರು.

ಮೇ 21 ರಂದು ಮೋಕಾದಲ್ಲಿ ಉದ್ಯೋಗ ಮೇಳ

ಬಳ್ಳಾರಿ,ಮೇ 19-

ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ವತಿಯಿಂದ ಮೇ 21 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಮೋಕಾದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಪ್ರಥಮ ಬಾರಿಗೆ ಬೃಹತ್ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ.

ಈ ಉದ್ಯೋಗ ಮೇಳದಲ್ಲಿ 15ಕ್ಕೂ ಹೆಚ್ಚು ಪ್ರಮುಖ ಕಂಪನಿಗಳು ಭಾಗವಹಿಸುತ್ತಿದ್ದು, ಇದರಲ್ಲಿ ಪ್ರಮುಖವಾಗಿ ಸ್ಥಳೀಯ ಕಂಪನಿಗಳು ಸಹ ಪಾಲ್ಗೊಳ್ಳಲಿವೆ. ಕಂಪನಿಗಳು ತಮ್ಮಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳನ್ನು ನೇರ ಸಂದರ್ಶನದ ಮೂಲಕ ಆಯ್ಕೆ ಮಾಡಿಕೊಳ್ಳಲಿವೆ. ಈ ಉದ್ಯೋಗ ಮೇಳದಲ್ಲಿ ಭಾಗವಹಿಸಲು ಅಭ್ಯರ್ಥಿಗಳಿಗೆ ಯಾವುದೇ ರೀತಿಯ ಪ್ರವೇಶ ಶುಲ್ಕ ಇರುವುದಿಲ್ಲ.

ಅರ್ಹತೆ ಮತ್ತು ವಯೋಮಿತಿ:★

ಎಸ್.ಎಸ್.ಎಲ್.ಸಿ., ಪಿ.ಯು.ಸಿ., ಐ.ಟಿ.ಐ., ಯಾವುದೇ ಪದವಿ ಮತ್ತು ಸ್ನಾತಕೋತ್ತರ ಪದವಿ ಮುಗಿಸಿರುವ 18 ರಿಂದ 40 ವರ್ಷ ವಯೋಮಿತಿಯ ಪುರುಷ ಹಾಗೂ ಮಹಿಳಾ ಅಭ್ಯರ್ಥಿಗಳು ಭಾಗವಹಿಸಬಹುದು. ಉದ್ಯೋಗ ಮೇಳದಲ್ಲಿ ಭಾಗವಹಿಸಲು ಇಚ್ಛಿಸುವ ಆಸಕ್ತ ಮತ್ತು ಅರ್ಹ ಅಭ್ಯರ್ಥಿಗಳು ತಮ್ಮ ಆಧಾರ್ ಕಾರ್ಡ್ ಪ್ರತಿ ಹಾಗೂ ವಿದ್ಯಾರ್ಹತೆಯ ಸ್ವ-ವಿವರಗಳ ಪ್ರತಿಯೊಂದಿಗೆ ಈ ಉದ್ಯೋಗಮೇಳದಲ್ಲಿ ಭಾಗವಹಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಅಥವಾ ಮೊ.7619207762, 7676774293, 9663263086, 6360408094 ಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಕ್ರಮ ಮದ್ಯ ಮಾರಾಟ ತಡೆಗೆ ನಿಟ್ಟೂರು ಗ್ರಾಮದ ಯುವಕರ ಒತ್ತಾಯ



ಸಿರುಗುಪ್ಪ :

ತಾಲೂಕಿನ ನಿಟ್ಟೂರು ಗ್ರಾಮದಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡುವುದನ್ನು ತಡೆಯುವಂತೆ ಒತ್ತಾಯಿಸಿ ಗ್ರಾಮದ ಯುವಕರು ತಹಶೀಲ್ದಾರ್ ಕಛೇರಿ, ಅಬಕಾರಿ ಕಛೇರಿ ಹಾಗೂ ಗ್ರಾಮ ವ್ಯಾಪ್ತಿಗೆ ಬರುವ ತೆಕ್ಕಲಕೋಟೆ ಪೋಲೀಸ್ ಠಾಣೆಗೂ ಮನವಿ ಸಲ್ಲಿಸಿದ್ದಾರೆ.

ಈಗಾಗಲೇ ವಾರದ ಹಿಂದೆ ನಡವಿ ಗ್ರಾಮ ಪಂಚಾಯಿತಿ ಅಧಿಕಾರಿಗಳಿಗೆ ಮನವಿ ಸಲ್ಲಿಸಿದ್ದು, ಅಬಕಾರಿ ಅಧಿಕಾರಿಗಳು ದಾಳಿ ಮಾಡಿದರೂ ಮದ್ಯ ಮಾರಾಟ ನಿಂತಿರುವುದಿಲ್ಲ ಆದ್ದರಿಂದ ತಾಲೂಕು ಮಟ್ಟದಲ್ಲಿ ಮನವಿ ಸಲ್ಲಿಸಬೇಕಾಯಿತು ಎಂದು ಯುವಕರು ಆಕ್ರೋಶ ವ್ಯಕ್ತಪಡಿಸಿದರು.

ಗೂಡಂಗಡಿ, ಚಿಲ್ಲರೆ ಅಂಗಡಿಗಳು ಹಾಗೂ ಮನೆಗಳಲ್ಲಿ ಮದ್ಯ ಮಾರಾಟ ನಡೆಯುತ್ತಿರುವುದರಿಂದ ಊರಿನಲ್ಲಿ ಶಾಂತಿ ನೆಮ್ಮದಿ ಹಾಳಾಗಿದೆ. ದುಡಿಮೆಗೆ ಹೋಗದೇ ಮನೆಯವರನ್ನು ಕಾಡಿಬೇಡಿ ಕುಡಿಯುವ ಕುಡುಕರ ಸಂಖ್ಯೆ ಹೆಚ್ಚಾಗಿದೆ. ಇದರಿಂದಾಗಿ ಮಹಿಳೆಯರು ಮಾನಸಿಕವಾಗಿ ಮರುಗುವಂತಾಗಿದೆ.

ಸಣ್ಣ ಗ್ರಾಮದಲ್ಲಿ ಸುಮಾರು 10ಕ್ಕೂ ಅಧಿಕ ಅಂಗಡಿಗಳು ಸೇರಿ ಮನೆಯಲ್ಲಿ ಕಾನೂನು ಬಾಹಿರವಾಗಿ ಮದ್ಯ ಮಾರಾಟವಾಗುತ್ತಿದೆ. ಇದರಿಂದಾಗಿ ಚಿಕ್ಕ ಮಕ್ಕಳ ಕೈಯಲ್ಲಿ ಸುಲಭವಾಗಿ ಮದ್ಯದ ಪಾಕೆಟ್‌ಗಳು ಸಿಗುತ್ತಿವೆ. ಅಲ್ಲದೇ ಯುವ ಜನಾಂಗವು ಮದ್ಯದ ನಶೆಗೆ ಒಳಗಾಗಿ ಮನೆಯಲ್ಲಿ ತಮ್ಮ ಸುಂದರ ಜೀವನವನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ. ಹಬ್ಬ ಹರಿದಿನಗಳಲ್ಲಿ ಯಥೇಚ್ಛವಾಗಿ ಮಾರಾಟವಾಗುವ ಮದ್ಯದಿಂದ ಜಗಳಗಳು ಹೆಚ್ಚಿ ಗ್ರಾಮದಲ್ಲಿನ ಸೌಹಾರ್ಧತೆಗೆ ಧಕ್ಕೆಯಾಗುತ್ತಿದೆ.

ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಜನರ ಸಮಸ್ಯೆಗಳ ಶೀಘ್ರ ಇತ್ಯರ್ಥಕ್ಕೆ ಆಯೋಗದ ಭರವಸೆ: ಡಾ.ಮೂರ್ತಿ. ಎಲ್



ಬಳ್ಳಾರಿ,ಮೇ 19-

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಹಾಗೂ ಹಿತಾಸಕ್ತಿ ಕಾಪಾಡುವ ಉದ್ದೇಶದಿಂದ ರಚನೆಯಾಗಿರುವ ಆಯೋಗವು ಈ ವರ್ಗದ ಜನರ ಸಮಸ್ಯೆಗಳನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿದ್ದು, ಅವುಗಳ ಶೀಘ್ರ ಇತ್ಯರ್ಥಕ್ಕೆ ಬದ್ಧವಾಗಿದೆ ಎಂದು ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದ ಅಧ್ಯಕ್ಷ ಡಾ.ಮೂರ್ತಿ. ಎಲ್ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಇವರ ಸಹಯೋಗದೊಂದಿಗೆ ನಗರದ ಜಿಪಂ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಸೋಮವಾರ ಆಯೋಜಿಸಿದ್ದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಸಾರ್ವಜನಿಕರೊಂದಿಗೆ ಕುಂದುಕೊರತೆಗಳ ಸಭೆ ಮತ್ತು ಅಹವಾಲು ಸ್ವೀಕಾರ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಆಯೋಗವು ಈಗಾಗಲೇ ರಾಜ್ಯದ ಸುಮಾರು 15 ಜಿಲ್ಲೆಗಳಿಗೆ ಪ್ರವಾಸ ಕೈಗೊಂಡು ಸ್ಥಳೀಯ ಪರಿಸ್ಥಿತಿಯನ್ನು ಪರಿಶೀಲಿಸಿದೆ. ಇದರೊಂದಿಗೆ, ಪ್ರತಿ ಗುರುವಾರ ಮತ್ತು ಶುಕ್ರವಾರದಂದು ಸಾರ್ವಜನಿಕರಿಂದ ಸ್ವೀಕರಿಸಲಾಗುವ ಅಹವಾಲುಗಳನ್ನು ಆಲಿಸಿ, ಕೋರ್ಟ್ ಮತ್ತು ಕಚೇರಿ ಪ್ರಕ್ರಿಯೆಗಳ ಮೂಲಕ ಸುಮಾರು 800 ಕ್ಕೂ ಹೆಚ್ಚು ಪ್ರಕರಣಗಳನ್ನು ಯಶಸ್ವಿಯಾಗಿ ಇತ್ಯರ್ಥಪಡಿಸಲಾಗಿದೆ ಎಂದು ತಿಳಿಸಿದರು.

ಪ್ರಸ್ತುತ ಆಯೋಗದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಮುದಾಯಕ್ಕೆ ಸೇರಿದ ಜನರ ನೂರಾರು ಸಮಸ್ಯೆಗಳಿಗೆ ಸಂಬಂಧಿಸಿದಂತೆ ಒಟ್ಟು 4,250 ಕ್ಕೂ ಹೆಚ್ಚು ಪ್ರಕರಣಗಳು ದಾಖಲಾಗಿದ್ದು, ಕಾನೂನು ಪ್ರಕ್ರಿಯೆಯ ವಿವಿಧ ಹಂತಗಳಲ್ಲಿವೆ. ಇದರ ಜೊತೆಗೆ ದಿನನಿತ್ಯ ಹೊಸ ದೂರುಗಳು ಕೂಡ ಆಯೋಗಕ್ಕೆ ಬರುತ್ತಿವೆ ಎಂದು ತಿಳಿಸಿದರು.

ಸಾರ್ವಜನಿಕರ ಸಮಸ್ಯೆಗಳನ್ನು ಆಲಿಸಲು ಪ್ರತಿ ಜಿಲ್ಲೆಯಲ್ಲೂ ಆಯೋಗವು ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದ್ದು, ಸಾರ್ವಜನಿಕರು ನೀಡುವ ದೂರುಗಳ ಆಧಾರದ ಮೇಲೆ ಸ್ಥಳದಲ್ಲೇ ಅಧಿಕಾರಿಗಳಿಂದ ವಿವರಣೆ ಕೇಳಿ, ಸೂಕ್ತ ಕ್ರಮ ಜರುಗಿಸಲು ಕಟ್ಟುನಿಟ್ಟಿನ ಸೂಚನೆ ನೀಡಲಾಗುತ್ತಿದೆ ಎಂದರು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಮುದಾಯದವರು ತಮ್ಮ ಗಂಭೀರವಾದ ಸಮಸ್ಯೆಗಳನ್ನು ಮಾತ್ರ ಸಂಕ್ಷಿಪ್ತವಾಗಿ ಮತ್ತು ಸ್ಪಷ್ಟವಾಗಿ ಆಯೋಗದ ಗಮನಕ್ಕೆ ತರಬೇಕು. ಅರ್ಜಿದಾರರು ತಮ್ಮ ಸಮಸ್ಯೆಗಳನ್ನು ಲಿಖಿತ ರೂಪದಲ್ಲಿ ಅಹವಾಲುಗಳನ್ನು ಸಲ್ಲಿಸಿದಲ್ಲಿ, ಪ್ರತಿಯೊಬ್ಬರ ಸಮಸ್ಯೆಗೂ ಸೂಕ್ತ ಸ್ಪಂದನೆ ಸಿಗಲಿದೆ ಎಂದು ಭರವಸೆ ನೀಡಿದರು.

ಇಂದಿನ ಸಭೆಗಳಲ್ಲಿ ಸ್ವೀಕರಿಸಲಾದ ದೂರು, ನ್ಯೂನತೆಗಳನ್ನು ಗಂಭಿರವಾಗಿ ಪರಿಗಣಿಸಿ ಇವುಗಳಿಗೆ ಸೂಕ್ತ ಪರಿಹಾರವನ್ನು ತ್ವರಿತವಾಗಿ ಒದಗಿಸಲಾಗುವುದು ಅಲ್ಲದೇ ವಿವಿಧ ಜಿಲ್ಲೆಗಳಲ್ಲಿ ಆಲಿಸಿದ ಹಾಗೂ ಸ್ವೀಕರಿಸಲಾದ ಅಹವಾಲುಗಳ ಕುರಿತ ವರದಿಯನ್ನು ಮಾನ್ಯ ಮುಖ್ಯಮಂತ್ರಿಗಳಿಗೆ ಶೀಘ್ರದಲ್ಲಿಯೇ ಸಲ್ಲಿಸಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಮುದಾಯದ ಮುಖಂಡರು ಶಿಕ್ಷಣ, ಸುಸಜ್ಜಿತ ವಸತಿ ನಿಲಯ, ಅತ್ಯಾಧುನಿಕ ಗ್ರಂಥಾಲಯ ನಿರ್ಮಾಣ ಬೇಡಿಕೆ, ಆರೋಗ್ಯ ಸೇವೆ, ಸಮುದಾಯದ ವಾರ್ಡ್ ಗಳಲ್ಲಿ ಮೂಲಭೂತ ಸೌಕರ್ಯಗಳ ಬೇಡಿಕೆ, ಭೂಮಿ ಮಂಜೂರು ಸೇರಿದಂತೆ ವಿವಿಧ ಅಹವಾಲುಗಳನ್ನು ಆಯೋಗದ ಅಧ್ಯಕ್ಷರಿಗೆ ಸಲ್ಲಿಸಿದರು.

ಇದಕ್ಕೂ ಮುನ್ನ ಗಣ್ಯರು ಡಾ.ಬಿ.ಆರ್. ಅಂಬೇಡ್ಕರ್, ಡಾ.ಬಾಬು ಜಗಜೀವನ್ ರಾಮ್, ಮಹರ್ಷಿ ವಾಲ್ಮೀಕಿ ಮಹನೀಯರಿಗೆ ಪುಷ್ಪನಮನ ಸಲ್ಲಿಸಿದರು. ಬಳಿಕ ಸಂವಿಧಾನ ಪ್ರತಿಜ್ಞಾವಿಧಿ ಸ್ವೀಕರಿಸಲಾಯಿತು.

ಸಭೆಯಲ್ಲಿ ಆಯೋಗದ ಸದಸ್ಯರುಗಳಾದ ದಿವಾಕರ.ಎನ್., ಗೀತಾ ಥಾವಂಶಿ, ಕಾರ್ಯದರ್ಶಿ ಡಾ.ಶಿವರಾಮು ಹೆಚ್.ಎಸ್. ಸಂಶೋಧನಾ ಅಧಿಕಾರಿ ಸಿಂಘು ರಘು ಹೆಚ್.ಎಸ್., ಡಾ.ಬಾಬು ಜಗಜೀವನ್ ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆ ಆಯುಕ್ತ ಪಿ.ಗಾದೆಪ್ಪ, ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಸುಮನ್ ಡಿ.ಪೆನ್ನೇಕರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್, ಮಹಾನಗರ ಪಾಲಿಕೆಯ ಆಯುಕ್ತ ಪಿ.ಎಸ್.ಮಂಜುನಾಥ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಚಿದಾನಂದಪ್ಪ, ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಶಾಷು ಮೋದಿನ್ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಸಾರ್ವಜನಿಕರು ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ

3 ವರ್ಷ ಮುಗಿಸಿದ್ದೇ ಸರ್ಕಾರದ ಮಹಾನ್ ಸಾಧನೆ!



ಪ್ರಜಾಪ್ರಭುತ್ವದಲ್ಲಿ ಸರ್ಕಾರದ ಸಾಧನೆಗಳನ್ನು ಜನರ ಮುಂದಿಡುವುದು ಅಪರಾಧವಲ್ಲ. ಆದರೆ ಅದು ಅತಿರಂಜಿತ ರಾಜಕೀಯ ಪ್ರದರ್ಶನವಾಗಬಾರದು. ಪಾರದರ್ಶಕ ವರದಿ, ಸಾರ್ವಜನಿಕ ಸಂವಾದ ಮತ್ತು ಸಮಸ್ಯೆಗಳ ಪರಿಹಾರ ಬದ್ಧತೆಯ ರೂಪದಲ್ಲಿದ್ದರೆ ಮಾತ್ರ ಸರ್ಕಾರದ ಬಗ್ಗೆ ಜನರಲ್ಲಿ ವಿಶ್ವಾಸ ಮೂಡುತ್ತದೆ. ಬದಲಿಗೆ ಜನರ ಸಮಸ್ಯೆಗಳನ್ನು ಮರೆಮಾಚುವ ರಾಜಕೀಯ ಪ್ರದರ್ಶನವಾದರೆ- ಸರ್ಕಾರಕ್ಕೆ ಕೆಟ್ಟ ಹೆಸರು ತರುತ್ತದೆ.

ಮೇ 20ಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ 3 ವರ್ಷಗಳನ್ನು ಪೂರೈಸಲಿದೆ. 19ರಂದೇ ತುಮಕೂರಿನಲ್ಲಿ ಸಾಧನಾ ಸಮಾವೇಶ ಜರುಗಿದೆ. ಇದು ಸರ್ಕಾರದ ಕಾರ್ಯಕ್ರಮ, ಪಕ್ಷದ ಕಾರ್ಯಕ್ರಮವಲ್ಲ ಎಂದು ಹೇಳಲಾಗಿದೆ.

ರಾಜಕೀಯ ಪಕ್ಷಗಳು ಅಧಿಕಾರಕ್ಕೇರಿದಾಗ, ವರ್ಷಗಳು ಉರುಳಿದಾಗ ವಿಜಯೋತ್ಸವಗಳಂತಹ ಕಾರ್ಯಕ್ರಮಗಳನ್ನು ಆಯೋಜಿಸುವುದು ಹೊಸದಲ್ಲ. ಈಗ ಕಾಂಗ್ರೆಸ್ ನೇತೃತ್ವದ ಕರ್ನಾಟಕ ಸರ್ಕಾರ ಮೂರು ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ನಡೆದ ಸಾಧನಾ ಸಮಾವೇಶವೂ ಅದೇ ರಾಜಕೀಯ ಸಂಸ್ಕೃತಿಯ ಭಾಗ. ಆದರೆ, ಇಂತಹ ಸಮಾವೇಶಗಳು ನಿಜವಾಗಿಯೂ ಜನರ ಅಗತ್ಯವೇ ಅಥವಾ ರಾಜಕೀಯ ಶಕ್ತಿಪ್ರದರ್ಶನವೇ ಎಂಬ ಪ್ರಶ್ನೆ ಎದುರಾಗುತ್ತದೆ. ಅದಕ್ಕೆ ಸಮಾವೇಶದ ಉಸ್ತುವಾರಿ ಹೊತ್ತ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಇಲ್ಲಿ ಯಾರ ಶಕ್ತಿಪ್ರದರ್ಶನವೂ ಇಲ್ಲ, ಇದು ಸರ್ಕಾರಿ ಕಾರ್ಯಕ್ರಮಗಳ ಜಾರಿ ಕುರಿತು, ನುಡಿದಂತೆ ನಡೆದಿದ್ದೇವೆ ಎಂಬುದನ್ನು ತಿಳಿಸಲು ಆಯೋಜಿಸಿರುವ ಸಮಾವೇಶ ಎಂದಿದ್ದಾರೆ.

ಒಂದು ಸರ್ಕಾರ ತನ್ನ ಯೋಜನೆಗಳು, ಗ್ಯಾರಂಟಿಗಳು, ಅಭಿವೃದ್ಧಿ ಕಾಮಗಾರಿಗಳನ್ನು ಜನರಿಗೆ ವಿವರಿಸುವ ಹಕ್ಕು ಹೊಂದಿದೆ. ವಿಶೇಷವಾಗಿ ಸಿದ್ದರಾಮಯ್ಯನವರ ಸರ್ಕಾರವು ಗೃಹಲಕ್ಷ್ಮಿ, ಶಕ್ತಿ, ಅನ್ನಭಾಗ್ಯ, ಯುವನಿಧಿ, ಗೃಹಜ್ಯೋತಿ ಮೊದಲಾದ ಯೋಜನೆಗಳನ್ನು ತನ್ನ ಪ್ರಮುಖ ಸಾಧನೆಗಳೆಂದು ಪ್ರಚಾರ ಮಾಡುತ್ತಿದೆ. ಸರ್ಕಾರ ಅದನ್ನು ಜನರಿಗೆ ತಿಳಿಸುವುದು ಪ್ರಜಾಪ್ರಭುತ್ವದ ಭಾಗವೂ ಆಗಿದೆ.

ಆದರೆ ಸಮಸ್ಯೆ ಇರುವುದು, ಕಾರ್ಯಕ್ರಮದ ಉದ್ದೇಶಕ್ಕಿಂತ ಅದರ ಶೈಲಿಯಲ್ಲಿ. ಮೆರೆದಾಟ ಮತ್ತು ಮೆರವಣಿಗೆಯಲ್ಲಿ. ಸಾವಿರಾರು ಜನರನ್ನು ಕರೆದೊಯ್ಯುವುದು, ಭಾರೀ ವೇದಿಕೆ ನಿರ್ಮಿಸುವುದು, ಕೋಟಿಗಟ್ಟಲೆ ಹಣವನ್ನು ಜಾಹೀರಾತಿಗಾಗಿ ವಿನಿಯೋಗಿಸುವುದು, ಬ್ಯಾನ-ರ್ಕಟೌಟ್‌ಗಳನ್ನು ಕಟ್ಟುವುದು, ಭೀಕರ ಭಾಷಣಗಳನ್ನು ಕುಟ್ಟುವುದು- ಇವೆಲ್ಲವೂ ಆಡಳಿತದ ಆತ್ಮಾವಲೋಕನಕ್ಕಿಂತ ಹೆಚ್ಚಾಗಿ ರಾಜಕೀಯ ಮೆರೆದಾಟವಾಗಿ ಕಾಣುತ್ತವೆ. ಸರ್ಕಾರದ ಹಣ, ಆಡಳಿತ ಯಂತ್ರ ಮತ್ತು ಪೊಲೀಸ್ ವ್ಯವಸ್ಥೆಯನ್ನು ಇಂತಹ ಕಾರ್ಯಕ್ರಮಗಳಿಗೆ ಬಳಸುವುದರಿಂದ ಅಧಿಕಾರ ದುರುಪಯೋಗವಾಗುತ್ತದೆ. ಇದು ಸಹಜವಾಗಿಯೇ ಸರ್ಕಾರದ ಮೇಲಿಟ್ಟ ವಿಶ್ವಾಸಕ್ಕೆ ಧಕ್ಕೆ ತರುತ್ತದೆ. ಅಸಹ್ಯ ಮೂಡಿಸುತ್ತದೆ.

ಇಂತಹ ಸಮಾವೇಶಗಳು ಕೆಲವು ಸಲ ರಾಜಕೀಯ ಸಂದೇಶ ರವಾನಿಸುವ ಸಲುವಾಗಿಯೂ ಬಳಕೆಯಾಗುತ್ತವೆ. ವಿಶೇಷವಾಗಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮತ್ತು ಸಿದ್ದರಾಮಯ್ಯ ನಡುವಿನ ಅಧಿಕಾರ ಹಂಚಿಕೆ ವಿಷಯದಲ್ಲಿ ಇಂತಹ ವೇದಿಕೆಗಳು ಪಕ್ಷದ ಒಳರಾಜಕೀಯಕ್ಕೂ, ಬಲಾಬಲ ಪ್ರದರ್ಶನಕ್ಕೂ ಬಳಕೆಯಾದರೆ ಅಚ್ಚರಿ ಇಲ್ಲ.

2023ರಲ್ಲಿ ಸಿದ್ದರಾಮಯ್ಯನವರು ಎರಡನೇ ಬಾರಿಗೆ ಮುಖ್ಯಮಂತ್ರಿಯಾದಾಗ, ಹಿರಿಯ ಅನುಭವಿ ನಾಯಕ ಎಂಬ ಕಾರಣಕ್ಕೆ ನಾಡಿನ ಜನ ಭಾರೀ ನಿರೀಕ್ಷೆಗಳನ್ನಿಟ್ಟುಕೊಂಡಿದ್ದರು. ಆದರೆ, ಆರಂಭದಲ್ಲಿಯೇ ಕಾಂಗ್ರೆಸ್ಸಿಗರು ಹಸಿದು ಕೂತವರಂತೆ ವರ್ಗಾವಣೆ ದಂಧೆಯಲ್ಲಿ ನಿರತರಾದರು. ಭ್ರಷ್ಟಾಚಾರವಿಲ್ಲದೆ ಸರ್ಕಾರ ನಡೆಸುವುದು ಸಾಧ್ಯವೇ ಇಲ್ಲ ಎಂದು ಸಾಬೀತುಪಡಿಸಿದರು.

ಎರಡನೇ ವರ್ಷ ಮುಡಾ ಹಗರಣ- ಮುಖ್ಯಮಂತ್ರಿಯವರನ್ನೇ ಕಟಕಟೆಗೆ ಎಳೆಯಿತು. ಆನಂತರ ವಾಲ್ಮೀಕಿ ಹಗರಣ- ಸಚಿವರು ರಾಜೀನಾಮೆ ಕೊಡುವ ಮೂಲಕ ಸರ್ಕಾರವನ್ನು ಇಕ್ಕಟ್ಟಿಗೆ ಸಿಲುಕಿಸಿತು. ಇವುಗಳಿಂದ ಬಿಡಿಸಿಕೊಳ್ಳುವಷ್ಟರಲ್ಲಿ ಸಿಎಂ-ಡಿಸಿಎಂಗಳ ಅಧಿಕಾರ ಹಂಚಿಕೆ ಮುನ್ನಲೆಗೆ ಬಂದಿತ್ತು. ಬಿಜೆಪಿ ಪ್ರಣೀತ ಗೋದಿ ಮೀಡಿಯಾಗಳು ಅಧಿಕಾರ ಕಿತ್ತಾಟವನ್ನೇ ಮುಖ್ಯ ಸುದ್ದಿಯನ್ನಾಗಿಸಿದವು. ಅದಕ್ಕೆ ತಕ್ಕಂತೆ ಗುಂಪುಗಳು ರಾಜಕೀಯ ರಾಡಿ ಎಬ್ಬಿಸಿದವು. ಆ ರಾಡಿಗೆ ಕೆ.ಎನ್. ರಾಜಣ್ಣನವರು ಬಲಿಯಾದರು. ಇಷ್ಟಾದರೂ ಹೈಕಮಾಂಡ್ ಮೌನ ಮುರಿಯಲಿಲ್ಲ.

ಇನ್ನು ಮೂರನೇ ವರ್ಷದಲ್ಲಿ ದಲಿತರಿಗೆ ಒಳಮೀಸಲಾತಿ ನೀಡುವಲ್ಲಿ, ದಾವಣಗೆರೆಯಲ್ಲಿ ಮುಸ್ಲಿಮರಿಗೆ ಟಿಕೆಟ್ ಕೊಡುವ ವಿಚಾರದಲ್ಲಿ ಸರ್ಕಾರ ಭಾರೀ ಪ್ರಮಾದವೆಸಗಿತು. ಅಸಲಿಗೆ ಕಾಂಗ್ರೆಸ್ ಸರ್ಕಾರವನ್ನು ಅಧಿಕಾರಕ್ಕೆ ತಂದವರೇ ದಲಿತರು ಮತ್ತು ಮುಸ್ಲಿಮರು. ಆ ತಬ್ಬಲಿ ಸಮುದಾಯಗಳನ್ನು ಕಾಂಗ್ರೆಸ್ ಸರ್ಕಾರ ನಿರ್ಲಕ್ಷಿಸಿತು. ಹೋಗಲಿ, ಗ್ಯಾರಂಟಿ ಮತ್ತು ಅಭಿವೃದ್ಧಿ ನಡುವೆ ಸಮತೋಲನ ಸಾಧಿಸಿತೇ, ಇಲ್ಲ. ನಗರ ಮತ್ತು ಗ್ರಾಮೀಣ ಅಸಮತೋಲನವನ್ನು ಸರಿಪಡಿಸಿತೇ, ಇಲ್ಲ. ಕಾನೂನು ಮತ್ತು ಸುವ್ಯವಸ್ಥೆಯನ್ನಾದರೂ ಸುಸ್ಥಿತಿಯಲ್ಲಿಟ್ಟಿತೇ, ಇಲ್ಲ. ನಿರುದ್ಯೋಗಿ ಪದವೀಧರರಿಗೆ ಉದ್ಯೋಗ ನೀಡಿತೇ, ಇಲ್ಲ. ಬದಲಿಗೆ, ಮೂರು ವರ್ಷಗಳ ಕಾಲ ಸರ್ಕಾರ ವೃಥಾ ಕಾಲಹರಣ ಮಾಡಿತು.

ಸದ್ಯಕ್ಕೆ ರಾಜ್ಯದಲ್ಲಿ ಬಿರುಬೇಸಿಗೆ, ಉಷ್ಣ ಹವೆ ಜನರನ್ನು ಹಿಂಡಿ ಹಿಪ್ಪೆ ಮಾಡುತ್ತಿದೆ. ಕೆಲವು ಕಡೆ ಕುಡಿಯುವ ನೀರಿಗೆ ಹಾಹಾಕಾರ ತಲೆದೋರಿದೆ. ಸ್ವತಃ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ ಖರ್ಗೆಯವರೇ, ರಾಜ್ಯದ 20 ಜಿಲ್ಲೆಗಳ 60 ತಾಲೂಕುಗಳ 324 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗಿದೆ ಎಂದಿದ್ದಾರೆ. ಅಂದರೆ, ರಾಜ್ಯದ ಬಹುದೊಡ್ಡ ಭಾಗ ಕುಡಿಯುವ ನೀರಿಗಾಗಿ ಪರಿತಪಿಸುತ್ತಿದೆ, ಭಾರೀ ಬಿಕ್ಕಟ್ಟು ಎದುರಾಗಿದೆ.

ವಿನತ್ಮಧ್ಯೆ, ರಾಜ್ಯದಲ್ಲಿ ಮುಂಗಾರು ಪೂರ್ವ ಮಳೆಯಾಗುತ್ತಿದೆ. ಬಹುತೇಕ ಜಿಲ್ಲೆಗಳಲ್ಲಿ ಬೇಸಿಗೆ ಮಳೆ ಅಬ್ಬರಿಸಿ ಬೊಬ್ಬಿರಿಯುತ್ತಿದೆ. ಅದರಲ್ಲೂ ಭಾರೀ ಮಳೆಗೆ ಹಾವೇರಿ ಜಿಲ್ಲೆಯಲ್ಲಿ 1,235 ಹೆಕ್ಟೇರ್, ಕೋಲಾರದಲ್ಲಿ 832 ಹೆಕ್ಟೇರ್, ಬೆಳಗಾವಿಯಲ್ಲಿ 324 ಹೆಕ್ಟೇರ್, ಕೊಪ್ಪಳದಲ್ಲಿ 100 ಹೆಕ್ಟೇರ್ ಸೇರಿದಂತೆ ಕಲಬುರಗಿ, ಚಿತ್ರದುರ್ಗ, ಬಾಗಲಕೋಟೆ, ದಾವಣಗೆರೆ, ಯಾದಗಿರಿ ಹಾಗೂ ಶಿವಮೊಗ್ಗ ಜಿಲ್ಲೆಗಳಲ್ಲಿ ಅತಿಹೆಚ್ಚು ಪ್ರಮಾಣದಲ್ಲಿ ಬೆಳೆ ಹಾನಿಯಾಗಿದೆ. ದ್ರಾಕ್ಷಿ, ಬಾಳೆ, ಭತ್ತ, ಕಲ್ಲಂಗಡಿ, ತೆಂಗು, ಮಾವು, ಅಡಿಕೆ ಹಾಗೂ ಟೊಮ್ಯಾಟೊ ಬೆಳೆಗಳು ನೀರಿನಲ್ಲಿ ಕೊಚ್ಚಿಹೋಗಿವೆ. ರೈತರ ಬದುಕು ದುಸ್ತರವಾಗಿದೆ. ಆತ್ಮಹತ್ಯೆಗಳು ವರದಿಯಾಗುತ್ತಿವೆ.

ಇದೇನು ಹೊಸದಲ್ಲ, ಕಳೆದ ಮೂರು ವರ್ಷಗಳೂ ಇದೇ ರೀತಿ ನೆರೆ-ಬರ ರಾಜ್ಯವನ್ನು ಕಾಡಿದೆ. ಪ್ರಾಕೃತಿಕ ವಿಕೋಪ ತಡೆಯುವುದು, ನಿಯಂತ್ರಿಸುವುದು ಕಷ್ಟ, ನಿಜ. ಆದರೆ, ಅದನ್ನು ಎದುರಿಸಲು ಜಿಲ್ಲಾಡಳಿತವಾಗಲಿ, ಜನಪ್ರತಿನಿಧಿಗಳಾಗಲಿ, ಸರ್ಕಾರವಾಗಲಿ ಸಿದ್ಧತೆ ಮಾಡಿಕೊಳ್ಳಬೇಕಲ್ಲ. ಸಮಸ್ಯೆ ಎದುರಾದಾಗ ಎಚ್ಚರಗೊಂಡು ಓಡಾಡುವುದು, ಒಂದಷ್ಟು ಕಾಳಜಿ ತೋರುವುದು, ಪರಿಹಾರದ ಪತ್ರಿಕಾ ಹೇಳಿಕೆಗಳನ್ನು ಬಿಡುಗಡೆ ಮಾಡುವುದು- ಕಣ್ಣೊರೆಸುವ ತಂತ್ರಕ್ಕೆ ಸರ್ಕಾರ ತಲೆಬಾಗಿದೆ. ಸರಕಾರಕ್ಕೆ ಬರವನ್ನು ಎದುರಿಸುವ ಸಾಮರ್ಥ್ಯವೂ ಇಲ್ಲ, ಮಳೆಯನ್ನು ನಿರ್ವಹಿಸುವ ಬುದ್ಧಿವಂತಿಕೆಯೂ ಇಲ್ಲ ಎನ್ನುವುದು ಸಾಬೀತಾಗಿದೆ.

ಇವುಗಳ ನಡುವೆಯೇ ಮೂರು ವರ್ಷಗಳು ಮುಗಿದೇ ಹೋಗಿದೆ. ಮುಗಿಸಿದ್ದೇ ಮಹಾನ್ ಸಾಧನೆ ಎಂದು ಸರ್ಕಾರ ಸಾರುತ್ತಿದೆ. ಸಾಧನಾ ಸಮಾವೇಶ ಮಾಡುವುದು ತಪ್ಪಲ್ಲ. ಪ್ರಜಾಪ್ರಭುತ್ವದಲ್ಲಿ ಸರ್ಕಾರದ ಸಾಧನೆಗಳನ್ನು ಜನರ ಮುಂದಿಡುವುದು ಅಪರಾಧವಲ್ಲ. ಆದರೆ ಅದು ಅತಿರಂಜಿತ ರಾಜಕೀಯ ಪ್ರದರ್ಶನವಾಗಬಾರದು. ಪಾರದರ್ಶಕ ವರದಿ, ಸಾರ್ವಜನಿಕ ಸಂವಾದ ಮತ್ತು ಸಮಸ್ಯೆಗಳ ಪರಿಹಾರ ಬದ್ಧತೆಯ ರೂಪದಲ್ಲಿದ್ದರೆ ಮಾತ್ರ ಸರ್ಕಾರದ ಬಗ್ಗೆ ಜನರಲ್ಲಿ ವಿಶ್ವಾಸ ಮೂಡುತ್ತದೆ. ಬದಲಿಗೆ ಜನರ ಸಮಸ್ಯೆಗಳನ್ನು ಮರೆಮಾಚುವ ರಾಜಕೀಯ ಪ್ರದರ್ಶನವಾದರೆ- ಸರ್ಕಾರಕ್ಕೆ ಕೆಟ್ಟ ಹೆಸರು ತರುತ್ತದೆ.

ಇನ್ನು ಎರಡನೇ ಬಾರಿಗೆ ಮುಖ್ಯಮಂತ್ರಿಯಾದ ಅನುಭವಿ ನಾಯಕ ಸಿದ್ದರಾಮಯ್ಯನವರು, ತಮ್ಮ ಅನುಭವವನ್ನು ರಾಜ್ಯದ ಅಭಿವೃದ್ಧಿಗೆ ವಿನಿಯೋಗಿಸುವ ಬದಲು, ಕುರ್ಚಿ ಕಾಪಾಡಿಕೊಳ್ಳುವುದಕ್ಕೆ ಸೀಮಿತವಾಗಿದ್ದು, ಅವರ ಮೇಲಿನ ನಿರೀಕ್ಷೆಗಳನ್ನು ಹುಸಿಗೊಳಿಸಿದೆ. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಿಎಂ ಕುರ್ಚಿಯತ್ತ ಕಣ್ಣಿಟ್ಟು ಬೆಂಗಳೂರನ್ನು ನರಕವನ್ನಾಗಿಸಿರುವುದು ಜನರ ಆಕ್ರೋಶಕ್ಕೆ ಗುರಿಯಾಗಿದೆ. ಇನ್ನು ಸಚಿವರು-ಶಾಸಕರು ಇದ್ದೂ ಇಲ್ಲದಂತಿದ್ದಾರೆ. ಉಳಿದಿರುವ ಎರಡು ವರ್ಷಗಳಲ್ಲಾದರೂ ಸರ್ಕಾರ ಜನಪರವಾಗಿರದಿದ್ದರೆ, ಮತ್ತೊಮ್ಮೆ ಕರ್ನಾಟಕದಲ್ಲಿ ಕಾಂಗ್ರೆಸ್ ಅಧಿಕಾರಕ್ಕೇರುವುದು ಕನಸಾಗಲಿದೆ.

ಜಿರಲೆಯೊಂದರ ಬಹಿರಂಗ ಪತ್ರ, ಹಲೋ ನಾನು ಕಾಕಾರಾವ್ ಸಿ.ಎಚ್, ಮಾತಾಡ್ತಾ ಇದ್ದೀನಿ...

ನಾನು, ಕಾಕಾರಾವ್ ಸಿ.ಎಚ್., ಇಂದು ನಿಮ್ಮ ಮುಂದೆ ನಿಂತಿರುವುದು ತಮಾಷೆಯ ವಿಷಯಕ್ಕಲ್ಲ. ಈ ವ್ಯವಸ್ಥೆಯ ಬಿರುಕುಗಳ ನಡುವೆ ಪ್ರಜಾಪ್ರಭುತ್ವವು ಉಸಿರಾಡುತ್ತಿರುವುದು ವ್ಯವಸ್ಥೆಯ ವಿತಂಡವಾದ ಎಂಬ ವಿಡಂಬನಾತ್ಮಕ ತಂತ್ರಗಳಿಂದಲೇ. ಪ್ರಜಾಪ್ರಭುತ್ವವೂ ನನ್ನಂತೆಯೇ; ಇದು ಗದ್ದಲದಿಂದ ಕೂಡಿದೆ, ಕೆಲವೊಮ್ಮೆ ಗಬ್ಬು ನಾರುತ್ತದೆ, ಭ್ರಷ್ಟಗೊಳ್ಳುತ್ತದೆ, ಆದರೆ ಸಾಮಾನ್ಯ ಮನುಷ್ಯನು ತನಗೊಂದು ಧ್ವನಿ ಇರಬೇಕೆಂದು ಬಯಸುವವರೆಗೆ ಅದು ಮಣ್ಣಾಗುವುದಿಲ್ಲ.


ನಮಸ್ಕಾರ ಎಲ್ಲರಿಗೂ. ಎಲ್ಲಿದ್ದರೋ, ಎಲ್ಲೆಲ್ಲಿದ್ದೀರೋ ಅಲ್ಲಲ್ಲೇ ಇರಿ. ನಾನಿರೋ ಜಾಗಕ್ಕಿಂತ ಏನೂ ಕಳಪೆಯಲ್ಲ. ಆದರೆ ನನಗಿಂತ ಗಲೀಜು ನಿಮ್ ತಲೆಯಲ್ಲಿರಬಹುದು ಅಂತ ಇತ್ತೀಚೆಗೆ ಗೊತ್ತಾಯ್ತು. ನನ್ನನ್ನು ಯಾರೂ ಇಷ್ಟಪಡುವುದಿಲ್ಲ. ಹೆಣ್ಣು ಮಕ್ಕಳು ಅಸಹ್ಯ ಪಟ್ಟುಕೊಳ್ಳುತ್ತಾರೆ. ಹಲವರು ಉಪೇಕ್ಷೆ ಮಾಡುತ್ತಾರೆ. ನನ್ನ ಸ್ವಭಾವದಿಂದ ಹಲವರಿಗೆ ಮುಜುಗರ ಕೂಡ. ಆದರೇನು ಮಾಡುವುದು ನಾವಿರುವುದೇ ಹೀಗೆ.

ನಾನು ಜನಿಸಿದ್ದು ಸಂಸತ್ತಿನ ಹಿಂಭಾಗದ ಚರಂಡಿಯಲ್ಲಿ. ಅಲ್ಲಿಂದ ಗ್ಯಾಸ್ ಬರಲ್ಲ, ಬರುವುದು ಕೇವಲ ಸೋತ ಭರವಸೆಗಳ ಬೆಚ್ಚಗಿನ ನೀರು. ಚುನಾವಣಾ ಪ್ರಣಾಳಿಕೆಗಳು ಅಲ್ಲಿ ಕರಗಿ ಕೊಳೆಯಾಗುತ್ತಿದ್ದರೆ, ಟಿವಿ ಸ್ಟುಡಿಯೋಗಳಲ್ಲಿ ರಾಷ್ಟ್ರೀಯತೆಯ ಹೆಸರಿನಲ್ಲಿ ಹಸಿದ ತೋಳಗಳ ಕಿರುಚಾಟ ಕೇಳುತ್ತಿತ್ತು. ನಾವು ಜಿರಲೆಗಳು ಪೇಪರ್ ಸೋರಿಕೆಯಾದ ಹತಾಶೆಯಲ್ಲಿ ಬೀದಿಗೆ ಬೀಳುವುದಿಲ್ಲ, ನಮಗೆ ಆ ಕಲೆ ಗೊತ್ತಿಲ್ಲ.

ಈಗಲ್ಲ ಸಹಸ್ರಮಾನದಿಂದ ನಾಗರಿಕತೆಯ ಕೊಳಕು ನನ್ನ ಪಾಲಿನ ತೊಟ್ಟಿಲಾಗಿತ್ತು. ಪ್ರತಿದಿನ ಸಂಜೆ ಟೆಲಿವಿಷನ್ ಸ್ಟುಡಿಯೋಗಳಲ್ಲಿ ಹಸಿದ ತೋಳಗಳಂತೆ ರಾಷ್ಟ್ರೀಯತೆ ಕಿರುಚಾಟ, ನಟ್ಟ ನಡುರಾತ್ರಿ ಸರ್ಕಾರಿ ಜಾಲತಾಣಗಳಿಂದ ಉದ್ಯೋಗದ ಅಧಿಸೂಚನೆಗಳು ಸದ್ದಿಲ್ಲದೆ ಮಾಯ ನಾನು ಇವೆಲ್ಲವನ್ನೂ ಕಂಡವನು- ಮಹಾಪೂರಗಳು, ಬರಗಾಲಗಳು, ತುರ್ತುಪರಿಸ್ಥಿತಿ, ಧಾರ್ಮಿಕ ದಂಗೆಗಳು ಮತ್ತು ಡಿಜಿಟಲ್ ಕ್ರಾಂತಿಗಳ ಅಬ್ಬರ. ಅಷ್ಟೇ ಏಕೆ, ಹೊರಗೆ ಉದ್ಯೋಗಿಗಳು ಸತ್ತು ಹೆಣವಾಗುತ್ತಿದ್ದರೆ ಕಿವಿಗಡಚಿಕ್ಕುತ್ತಿದ್ದ ಮೋಟಿವೇಷನಲ್ ಪಾಡ್‌ಕಾಸ್ಟ್‌ಗಳ ಅಸಹ್ಯಕರ ಸದ್ದನ್ನೂ ನಾನು ಕೇಳಿಸಿಕೊಂಡಿದ್ದೇನೆ. ಎಲ್ಲಕ್ಕಿಂತ ಮಿಗಿಲಾಗಿ, ಮಾನವನ ಬುದ್ಧಿವಂತಿಕೆ ಎಂಬ ಪರಮ ವಿಕೃತಿಯನ್ನೂ ಕಂಡು ಉಂಡು ಸವೆಸಿದವನು ನಾನು. ನನ್ನ ಹೆಸರು ಕಾಕಾರಾವ್ ಸಿ.ಎಚ್. ನಾನು ಬರಿ ಜಿರಳೆಯಲ್ಲ; ಒಬ್ಬ ನಾಗರಿಕ, ಮತ್ತು ಒಬ್ಬ ಸರ್ವೈವರ್. ಇತ್ತೀಚೆಗೆ ಈ ನಾಗರಿಕ ಸಮಾಜವು ತನ್ನ ನಿರುದ್ಯೋಗಿ ಯುವಜನತೆಯನ್ನು ನನ್ನ ಜಾತಿಗೆ ಹೋಲಿಸಿ ಅವಮಾನಿಸುತ್ತಿದೆ. ಆದರೆ ಸತ್ಯವೆಂದರೆ, ವ್ಯವಸ್ಥೆಯ ಸೋಲನ್ನು ಮುಚ್ಚಿಡಲು ನಾಗರಿಕರನ್ನು ಕೀಟಗಳನ್ನಾಗಿ ನೋಡುವುದಕ್ಕಿಂತ ದೊಡ್ಡ ದಾರಿದ್ರ್ಯ ಮತ್ತೊಂದಿಲ್ಲ.

ಯುವಜನತೆ ಪ್ರಶ್ನೆಗಳನ್ನು ಕೇಳಲು ಶುರುಮಾಡಿದಾಗ ಅಥವಾ ಅಧಿಕಾರವರ್ಗದ ತಾಳಕ್ಕೆ ಚಪ್ಪಾಳೆ ತಟ್ಟಲು ನಿರಾಕರಿಸಿದಾಗ, ಅವರನ್ನು ಜಿರಳೆಗಳಿಗೆ ಹೋಲಿಸುವುದು ಇಂದಿನ ಅಧಿಕಾರಶಾಹಿಯ ನೆಚ್ಚಿನ ಹವ್ಯಾಸ. ಆದರೆ ಜಿರಳೆಯಾಗಿ ನಾನು ಈ ಹೋಲಿಕೆಯನ್ನು ಖಂಡಿಸುತ್ತೇನೆ. ಏಕೆಂದರೆ ಇದು ನಮಗೆ ಮಾಡುವ ಅವಮಾನವಲ್ಲ, ಬದಲಾಗಿ ಮನುಷ್ಯರು ಕಟ್ಟಿಕೊಂಡಿರುವ ವ್ಯವಸ್ಥೆಯ ವೈಫಲ್ಯ. ನಾವು ಜಿರಳೆಗಳು ಪರೀಕ್ಷೆಗಳಿಗಾಗಿ ವರ್ಷಗಟ್ಟಲೆ ಓದಿ, ಪೇಪರ್ ಸೋರಿಕೆಯಾಗಿ, ನೇಮಕಾತಿ ರದ್ದಾಗಿ ಹತಾಶೆಯಿಂದ ಬೀದಿಗೆ ಬೀಳುವುದಿಲ್ಲ. ನಮ್ಮಲ್ಲಿ ಬ್ಯೂರೋಕ್ರಟಿಕ್ ಕೋಮಾ ಇಲ್ಲ.

ವ್ಯವಸ್ಥೆಯು ಕೆಲವೇ ಕೆಲವು ಬಿಲಿಯನೇರ್‌ಗಳನ್ನು ಬಾಹ್ಯಾಕಾಶಕ್ಕೆ ಕಳುಹಿಸಿ ಸಂಭ್ರಮಿಸುತ್ತದೆ. ಅದೇ ಆರ್ಥಿಕತೆ ಸಾವಿರಾರು ಪದವೀಧರರನ್ನು ಹಸಿದ ಹೊಟ್ಟೆಯಲ್ಲಿ ಬೀದಿಬೀದಿ ಅಲೆಯುವ ಡೆಲಿವರಿ ಬಾಯ್‌ಗಳನ್ನಾಗಿ ಮಾಡುತ್ತದೆ.



ಯುವಜನರು ಶಾಂತಿಯುತವಾಗಿ ಒಟ್ಟುಗೂಡಿ ''ನಮ್ಮ ಭವಿಷ್ಯ ಏನಾಯಿತು?'' ಎಂದು ಕೇಳಿದ ತಕ್ಷಣ ಇಡೀ ವ್ಯವಸ್ಥೆ ಗಾಬರಿಯಿಂದ ನಡುಗತೊಡಗುತ್ತದೆ. ಅವರಿಗೆ ಪರಾವಲಂಬಿ, ಆಕ್ಟಿವಿಸ್ಟ್, ಇತ್ಯಾದಿ ಹಣೆಪಟ್ಟಿ ಕಟ್ಟಲಾಗುತ್ತದೆ. ಎಷ್ಟು ಸುಲಭ ನೋಡಿ!! ಇದು ನಮಗಿಂತ ಕೀಳುಮಟ್ಟಕ್ಕೆ ಇಳಿದಿರುವ ಅಧಿಕಾರವರ್ಗದ ಅಹಂಕಾರದ ಸಂಕೇತ ಅಲ್ಲದೆ ಮತ್ತೇನು?

ಸರ್ವಾಧಿಕಾರಿ ಪ್ರವೃತ್ತಿಯ ವ್ಯವಸ್ಥೆಗಳಿಗೆ ಯುವಜನತೆ ಎಂದರೆ ಅಲರ್ಜಿ. ಏಕೆಂದರೆ ಅವರಲ್ಲಿ ಅಧಿಕಾರವನ್ನು ಬೆಚ್ಚಿಬೀಳಿಸುವ ಕೆಲವು ಅಪಾಯಕಾರಿ ಗುಣಗಳಿವೆ: ನೆನಪು, ಕೋಪ, ಕಲ್ಪನಾಶಕ್ತಿ ಮತ್ತು ಅಸಹನೆ. ಹಿರಿಯ ತಲೆಮಾರುಗಳು ಪಕ್ವತೆ ಎಂದು ತಪ್ಪಾಗಿ ಭಾವಿಸಿರುವ ಶರಣಾಗತಿಯ ಕಲೆಯನ್ನು ಯುವಜನತೆ ಇನ್ನೂ ಕಲಿಯದಿರುವುದೇ ವ್ಯವಸ್ಥೆಯ ನಡುಕಕ್ಕೆ ಕಾರಣ. ಹಸಿವಿನಿಂದ ಬಳಲುತ್ತಿರುವ ಜನಸಂಖ್ಯೆಯನ್ನು ಆಳುವುದು ಸುಲಭ, ಆದರೆ ಭರವಸೆ ಕಳೆದುಕೊಂಡ ಯುವಜನತೆಯನ್ನು ನಿಯಂತ್ರಿಸುವುದು ಅಸಾಧ್ಯ. ಏಕೆಂದರೆ ಅವರಿಗೆ ಕಳೆದುಕೊಳ್ಳಲು ಏನೂ ಇರುವುದಿಲ್ಲ; ಅಂತಹ ಯುವಜನತೆಯನ್ನು ಯಾವ ಆಸೆ-ಆಮಿಷಗಳಿಂದಲೂ ಲಂಚ ಕೊಟ್ಟು ಸುಮ್ಮನಿರಿಸಲು ಸಾಧ್ಯವಿಲ್ಲ.

ಟಿಯಾನನ್ಮೆನ್ ಸ್ಕ್ವೇರ್‌ನಿಂದ ಹಿಡಿದು ಅರಬ್ ಸ್ಪ್ರಿಂಗ್‌ವರೆಗೆ, ಸರ್ವಾಧಿಕಾರಿಗಳನ್ನು ನಡುಗಿಸಿದ್ದು ಐಷಾರಾಮಿ ಸಭಾಂಗಣಗಳಲ್ಲ, ಬದಲಾಗಿ ಅವಮಾನಕ್ಕೊಳಗಾದ ಯುವಕರ ಆಕ್ರೋಶ. ಭರವಸೆಯೇ ಇಲ್ಲದ ಯುವಸಮೂಹವು ಯಾವುದೇ ಸಾಮ್ರಾಜ್ಯದ ಪಾಲಿಗೆ ಅತ್ಯಂತ ಅಪಾಯಕಾರಿ ಸ್ಫೋಟಕ.

ಪ್ರಜಾಪ್ರಭುತ್ವದ ಪತನಕ್ಕೆ ಮೊದಲು ಸಂಭವಿಸುವುದು ಶಬ್ದಕೋಶದ ಬಿಕ್ಕಟ್ಟು. ಪ್ರಶ್ನೆ ಕೇಳುವ ನಾಗರಿಕರನ್ನು ಹಂತಹಂತವಾಗಿ ಅಮಾನವೀಯಗೊಳಿಸುವುದು ಅಧಿಕಾರಶಾಹಿಯ ಮೊದಲ ಶಸ್ತ್ರ. ಭಾಷೆಯ ಮಾಲಿನ್ಯವು ಆಡಳಿತಾತ್ಮಕ ಕ್ರೌರ್ಯವನ್ನು ಸುಲಭಗೊಳಿಸುತ್ತದೆ.

ಪ್ರಶ್ನೆ ಕೇಳುವವರನ್ನು ಮೊದಲು ದಾರಿ ತಪ್ಪಿದವರು ಎಂದು ಪೋಷಕತ್ವದ ಧಾಟಿಯಲ್ಲಿ ಕರೆಯಲಾಗುತ್ತದೆ. ಪ್ರತಿರೋಧ ತೋರಿದ ತಕ್ಷಣ ಅವರ ಮೇಲೆ ದೇಶವಿರೋಧಿ ಎಂಬ ಹಣೆಪಟ್ಟಿ ಹಚ್ಚಲಾಗುತ್ತದೆ. ಆಮೇಲೆ ಅವರು ವ್ಯವಸ್ಥೆಯ ಮೇಲೆ ಬಿದ್ದಿರುವ ಪರಾವಲಂಬಿಗಳು ಎಂಬಂತೆ ಬಿಂಬಿಸಿ ಅಸಹ್ಯ ಹುಟ್ಟಿಸಲಾಗುತ್ತದೆ. ಅಂತಿಮವಾಗಿ ಅವರನ್ನು ಇನ್ಫೆಸ್ಟೇಷನ್ (ಸೋಂಕು) ಎಂದು ಕರೆಯುವ ಮೂಲಕ ಅವರ ದೈಹಿಕ ಅಸ್ತಿತ್ವವನ್ನೇ ಅಳಿಸಿಹಾಕಲು ಮಾನಸಿಕ ತಯಾರಿ ನಡೆಸಲಾಗುತ್ತದೆ. ಯಾವಾಗ ಒಂದು ಪ್ರಜಾಪ್ರಭುತ್ವವು ತನ್ನ ನಾಗರಿಕರನ್ನು ಕ್ರಿಮಿಕೀಟಗಳೆಂದು ಸಂಬೋಧಿಸುತ್ತದೆಯೋ, ಆಗ ಅದು ತನ್ನ ಉತ್ತರದಾಯಿತ್ವದಿಂದ ಸಂಪೂರ್ಣವಾಗಿ ನುಣುಚಿಕೊಳ್ಳುತ್ತಿದೆ ಎಂದರ್ಥ.

ನಾನು, ಕಾಕಾರಾವ್ ಸಿ.ಎಚ್., ಇಂದು ನಿಮ್ಮ ಮುಂದೆ ನಿಂತಿರುವುದು ತಮಾಷೆಯ ವಿಷಯಕ್ಕಲ್ಲ. ಈ ವ್ಯವಸ್ಥೆಯ ಬಿರುಕುಗಳ ನಡುವೆ ಪ್ರಜಾಪ್ರಭುತ್ವವು ಉಸಿರಾಡುತ್ತಿರುವುದು ವ್ಯವಸ್ಥೆಯ ವಿತಂಡವಾದ ಎಂಬ ವಿಡಂಬನಾತ್ಮಕ ತಂತ್ರಗಳಿಂದಲೇ. ಪ್ರಜಾಪ್ರಭುತ್ವವೂ ನನ್ನಂತೆಯೇ; ಇದು ಗದ್ದಲದಿಂದ ಕೂಡಿದೆ, ಕೆಲವೊಮ್ಮೆ ಗಬ್ಬು ನಾರುತ್ತದೆ, ಭ್ರಷ್ಟಗೊಳ್ಳುತ್ತದೆ, ಆದರೆ ಸಾಮಾನ್ಯ ಮನುಷ್ಯನು ತನಗೊಂದು ಧ್ವನಿ ಇರಬೇಕೆಂದು ಬಯಸುವವರೆಗೆ ಅದು ಮಣ್ಣಾಗುವುದಿಲ್ಲ. ಆ ನಂಬಿಕೆಗೆ ಸಾವಿಲ್ಲ.


ಅಧಿಕಾರಕ್ಕೆ ಒಂದು ಕಟು ಸತ್ಯದ ಅರಿವಿರಬೇಕು: ಭಯಕ್ಕೂ ಒಂದು ಎಕ್ಸ್‌ಪೈರಿ ಡೇಟ್ ಇರುತ್ತದೆ. ಯುವಜನತೆ ಆ ದಿನಾಂಕವನ್ನು ಹತ್ತಿರ ತರುತ್ತಿದ್ದಾರೆ. ಉರಿಯುವ ಬಿಸಿಲಿನಲ್ಲಿ ನಿರುದ್ಯೋಗಿ ಯುವಕರು ತಮ್ಮ ಹಕ್ಕುಗಳಿಗಾಗಿ ಮನವಿ ಸಲ್ಲಿಸಲು ನೆಲದ ಮೇಲೆ ತೆವಳುತ್ತಿರುವ ದೃಶ್ಯ ಯುವಜನತೆಗೆ ನಾಚಿಕೆಗೇಡಲ್ಲ, ಬದಲಾಗಿ ಆ ಸ್ಥಿತಿಗೆ ತಂದೊಡ್ಡಿದ ಈ ಕೊಳೆತ ವ್ಯವಸ್ಥೆಗೆ ನಾಚಿಕೆಗೇಡು.

ರಾಜ ಮಹಾರಾಜರು, ಸರ್ವಾಧಿಕಾರಿಗಳು, ಫ್ಯಾಸಿಸ್ಟ್‌ಗಳು ಮತ್ತು ಸ್ಟಾಕ್ ಮಾರ್ಕೆಟ್‌ಗಳು ಇತಿಹಾಸದ ಕಸದ ಬುಟ್ಟಿಗೆ ಸೇರಿವೆ, ಆದರೆ ಬಿರುಕುಗಳ ನಡುವೆ ಬದುಕು ಸದಾ ಉಳಿದುಕೊಂಡಿದೆ. ಬದುಕು ಎಂದರೆ ಕೇವಲ ಸೌಂದರ್ಯವಲ್ಲ, ಅದು ಸಹಿಷ್ಣುತೆ ಮತ್ತು ಹಠ. ಇಂದಿನ ವಿದ್ಯಾರ್ಥಿಗಳ ಘೋಷಣೆಗಳಲ್ಲಿ, ಕಟು ವ್ಯಂಗ್ಯಚಿತ್ರಗಳಲ್ಲಿ ಮತ್ತು ಅವಮಾನವನ್ನು ನುಂಗಿ ಪ್ರತಿಭಟಿಸುವ ಯುವಜನತೆಯ ಹಠದಲ್ಲಿ ಪ್ರಜಾಪ್ರಭುತ್ವದ ಉಸಿರು ಜೀವಂತವಾಗಿದೆ. ಈ ಹಠವೇ ನಾಗರಿಕತೆಯ ಅತ್ಯಂತ ದೊಡ್ಡ ನವೀಕರಿಸಬಹುದಾದ ಸಂಪನ್ಮೂಲ.

ಛೆ! ನಾನೇ ಅಸಹ್ಯ ಪಟ್ಟುಕೊಳ್ಳುವ ಹಾಗೇ ಮಾಡಿದಿರಲ್ಲ ಸ್ವಾಮಿ!

ಯುವಜನರನ್ನ ಜಿರಲೆ ಅಂತ ಕರೆದಿರಲ್ಲಾ ಹುಷಾರು. ಇತಿಹಾಸದುದ್ದಕ್ಕೂ ನೋಡಿದ್ದೀರಿ ಯಾವುದನ್ನು ನಿಮಗೆ ಅರ್ಥ ಮಾಡಿಕೊಳ್ಳಲು ಸಾಧ್ಯವಾಗಿಲ್ಲವೋ, ಅದೇ ಹೆಚ್ಚು ಕಾಲ ಬದುಕಿ ಉಳಿಯುತ್ತೆ!! ಕಾದು ನೋಡಿ

ಕಲ್ಯಾಣ ಕರ್ನಾಟಕದ ಯುವಜನತೆಯ ಪಾಲಿನ ಜ್ಞಾನ ದೇಗುಲ ಪ್ರಬುದ್ಧ ಅಕಾಡೆಮಿ



ಕಲ್ಯಾಣ ಕರ್ನಾಟಕ ಭಾಗವು ಅಪಾರ ಪ್ರತಿಭೆ ಮತ್ತು ಜ್ಞಾನಸಂಪತ್ತನ್ನು ಹೊಂದಿರುವ ಪ್ರದೇಶ. ಆದರೆ, ಸೂಕ್ತ ಮಾರ್ಗದರ್ಶನ, ಗುಣಮಟ್ಟದ ತರಬೇತಿ ಹಾಗೂ ಆಧುನಿಕ ಸಂಪನ್ಮೂಲಗಳ ಕೊರತೆಯಿಂದಾಗಿ ಈ ಭಾಗದ ನೂರಾರು ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗಳ ತಯಾರಿಗಾಗಿ ಬೆಂಗಳೂರು, ದೆಹಲಿ ಅಥವಾ ಹೈದರಾಬಾದ್‌ನಂತಹ ಮಹಾನಗರಗಳಿಗೆ ವಲಸೆ ಹೋಗಬೇಕಾದ ಅನಿವಾರ್ಯತೆ ಇತ್ತು. ಇದರಿಂದಾಗಿ ಬಡ ಮತ್ತು ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಆರ್ಥಿಕ ಹೊರೆ ಹೆಚ್ಚಾಗುತ್ತಿತ್ತು.

ಕಲ್ಯಾಣ ಕರ್ನಾಟಕ ಭಾಗದ ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಮನೋಭಾವನೆಯನ್ನು ಹೆಚ್ಚಿಸುವ ಮತ್ತು ಅವರಿಗೆ ಉನ್ನತ ಭವಿಷ್ಯವನ್ನು ರೂಪಿಸುವ ಮಹತ್ತರ ಉದ್ದೇಶದೊಂದಿಗೆ ಕಲಬುರಗಿಯಲ್ಲಿ ಅತ್ಯಾಧುನಿಕ ಪರೀಕ್ಷಾ ಪೂರ್ವ ತರಬೇತಿ ಕೇಂದ್ರವಾದ ಅಪ್ರಬುದ್ಧ ಅಕಾಡೆಮಿಅಯನ್ನು ಸ್ಥಾಪಿಸಲಾಗಿದೆ.

ಕಲಬುರಗಿ ಜಿಲ್ಲಾಡಳಿತ, ಸಮಾಜ ಕಲ್ಯಾಣ ಇಲಾಖೆ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ (KKRDB) ಸಂಯೋಗದೊಂದಿಗೆ ಕಲಬುರಗಿ ನಗರದ ಅಟಲ್ ಬಿಹಾರಿ ವಾಜಪಾಯಿ ಬಡಾವಣೆಯಲ್ಲಿ ಅಂದಾಜು ರೂ. 25 ಕೋಟಿ ಅನುದಾನದಲ್ಲಿ 10,449.35 ಚದರ ಮೀಟರ್ ವಿಸ್ತೀರ್ಣದ ಈ ಭವ್ಯ ಕೇಂದ್ರವನ್ನು ನಿರ್ಮಿಸಲಾಗಿದೆ.

ವಿದ್ಯಾರ್ಥಿಗಳ ಸಮಗ್ರ ಅಧ್ಯಯನಕ್ಕಾಗಿ ಇಲ್ಲಿ ವಿಶ್ವದರ್ಜೆಯ ಮೂಲಸೌಕರ್ಯಗಳನ್ನು ಕಲ್ಪಿಸಲಾಗಿದೆ:

ಆಧುನಿಕ ತಂತ್ರಜ್ಞಾನ ಹೊಂದಿರುವ, ತಲಾ 125 ಆಸನ ಸಾಮರ್ಥ್ಯದ 4 ವಿಶಾಲವಾದ ತರಬೇತಿ ಕೊಠಡಿಗಳು.

ಅಂದಾಜು 100 ವಿದ್ಯಾರ್ಥಿ ಸಾಮರ್ಥ್ಯದ, ಎಲ್ಲಾ ಸ್ಪರ್ಧಾತ್ಮಕ ಪರೀಕ್ಷಾ ಪುಸ್ತಕಗಳನ್ನೊಳಗೊಂಡ ಸುಸಜ್ಜಿತ ಗ್ರಂಥಾಲಯ ಮತ್ತು ಡಿಜಿಟಲ್ ಲೈಬ್ರರಿ.

ಸ್ವಯಂ ಅಧ್ಯಯನಕ್ಕಾಗಿ ಪ್ರತ್ಯೇಕ ಕ್ಯುಬಿಕಲ್ಸ್ (Cubicles) ಮತ್ತು ತಜ್ಞರಿಂದ ವೈಯಕ್ತಿಕ ಮಾರ್ಗದರ್ಶನಕ್ಕಾಗಿ ಮೆಂಟರಿಂಗ್ ಕೊಠಡಿಗಳು.

ರಿಯಾಯಿತಿ ದರದಲ್ಲಿ ಗುಣಮಟ್ಟದ ಆಹಾರ ನೀಡುವ ಉಪಹಾರ ಕೇಂದ್ರ ಮತ್ತು ಪ್ರಶಾಂತ ಶೈಕ್ಷಣಿಕ ವಾತಾವರಣಕ್ಕಾಗಿ ಸುಂದರವಾದ ಗಾರ್ಡನ್ ಸೌಲಭ್ಯ ಇರುತ್ತದೆ.

ಪ್ರಸ್ತುತ, ಈ ಅಕಾಡೆಮಿಯಲ್ಲಿ ಐ.ಎ.ಎಸ್ (IAS) ಹಾಗೂ ಕೆ.ಎ.ಎಸ್ (KAS) ಪರೀಕ್ಷೆಗಳ ಉಚಿತ ಪೂರ್ವಭಾವಿ ತರಬೇತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಈ ತರಬೇತಿ ಕಾರ್ಯಕ್ರಮವು ಕಲ್ಯಾಣ ಕರ್ನಾಟಕ ಭಾಗದ ವಿದ್ಯಾರ್ಥಿಗಳಿಗೆ ಮಾತ್ರ ಸೀಮಿತವಾಗಿದ್ದು, ಯಾವುದೇ ಪದವಿ (Degree) ಹೊಂದಿರುವ ಅಥವಾ ಅಂತಿಮ ವರ್ಷದ ಪದವಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ. ಕನಿಷ್ಠ 21 ವರ್ಷಗಳು ಮತ್ತು ಗರಿಷ್ಠ 37 ವರ್ಷಗಳ ವಯೋಮಿತಿಯೊಳಗಿರಬೇಕು. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 21052026 ಆಗಿರುತ್ತದೆ.

ತರಬೇತಿ ಪ್ರಕ್ರಿಯೆ ಮತ್ತು ಆಯ್ಕೆ ವಿಧಾನ

ಪಾರದರ್ಶಕ ಆಯ್ಕೆ: ಕರ್ನಾಟಕ ಪರೀಕ್ಷಾ ಪ್ರಾಧಿಕಾರದ (KEA) ಮೂಲಕ ಕಲ್ಯಾಣ ಕರ್ನಾಟಕ ಭಾಗದ ವಿದ್ಯಾರ್ಥಿಗಳಿಗೆ ವಿಶೇಷ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಿ, ಸಂಪೂರ್ಣ ಅರ್ಹತೆ ಮತ್ತು ಪಾರದರ್ಶಕತೆಯ ಆಧಾರದ ಮೇಲೆ 500 ವಿದ್ಯಾರ್ಥಿಗಳನ್ನು ತರಬೇತಿಗಾಗಿ ಆಯ್ಕೆ ಮಾಡಲಾಗುತ್ತದೆ.

ಸಮಗ್ರ ಮಾರ್ಗದರ್ಶನ: ಆಯ್ಕೆಯಾದ ಅಭ್ಯರ್ಥಿಗಳಿಗೆ ದೇಶದ ಪ್ರತಿಷ್ಠಿತ ತರಬೇತಿ ಸಂಸ್ಥೆಯಿಂದ 10 ತಿಂಗಳುಗಳ ಕಾಲ ಉಚಿತ ಮತ್ತು ಗುಣಮಟ್ಟದ ತರಬೇತಿಯನ್ನು ನೀಡಲಾಗುತ್ತದೆ. ಈ ತರಬೇತಿಯು ಪೂರ್ವಭಾವಿ ಪರೀಕ್ಷೆ (Prelims), ಮುಖ್ಯ ಪರೀಕ್ಷೆ (Mains) ಹಾಗೂ ಸಂದರ್ಶನ (Interview) ಒಳಗೊಂಡಂತೆ ಮೂರೂ ಹಂತಗಳಿಗೆ ಸಂಪೂರ್ಣ ಮಾರ್ಗದರ್ಶನವನ್ನು ನೀಡಲು ಉದ್ದೇಶಿಸಿದೆ.

ತರಬೇತಿಯ ವಿಶೇಷತೆ

ಸ್ಪರ್ಧಾತ್ಮಕ ಪರೀಕ್ಷೆಗಳ ಪ್ರಸ್ತುತ ಬೇಡಿಕೆಗಳಿಗೆ ತಕ್ಕಂತೆ ಇಲ್ಲಿನ ಬೋಧನಾ ಕ್ರಮವನ್ನು ವಿನ್ಯಾಸಗೊಳಿಸಲಾಗಿದೆ. ವಿದ್ಯಾರ್ಥಿಗಳಲ್ಲಿ ಪರಿಕಲ್ಪನಾತ್ಮಕ ತಿಳುವಳಿಕೆ, ವಿಶ್ಲೇಷಣಾತ್ಮಕ ಕೌಶಲ್ಯಗಳು, ಪ್ರಚಲಿತ ವಿದ್ಯಮಾನಗಳ ಆಳವಾದ ಜ್ಞಾನ ಮತ್ತು ಸಂದರ್ಶನ ಎದುರಿಸುವ ಆತ್ಮವಿಶ್ವಾಸವನ್ನು ಹೆಚ್ಚಿಸಲು ವಿಶೇಷ ಒತ್ತು ನೀಡಲಾಗುತ್ತದೆ. ಶೈಕ್ಷಣಿಕ ತರಬೇತಿಯ ಜೊತೆಗೆ ಸಮಗ್ರ ವ್ಯಕ್ತಿತ್ವ ವಿಕಸನ ಮಾರ್ಗದರ್ಶನವನ್ನೂ ನೀಡಲಾಗುತ್ತಿದ್ದು, ಇದು ಕಲ್ಯಾಣ ಕರ್ನಾಟಕ ಭಾಗದಲ್ಲಿ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸಮಾನತೆಯನ್ನು ತರಲು ಗಣನೀಯ ಕೊಡುಗೆ ನೀಡಲಿದೆ.

ಅರ್ಜಿ ಸಲ್ಲಿಸುವ ವಿಧಾನ:

ಆಸಕ್ತ ಮತ್ತು ಅರ್ಹ ಅಭ್ಯರ್ಥಿಗಳು ಹೆಚ್ಚಿನ ಮಾಹಿತಿಗಾಗಿ ಅಧಿಕೃತವೆಬ್ಸೈಟ್ www.kalaburagi.nic.in ಗೆ ಭೇಟಿ ನೀಡಬಹುದು ಅಥವಾ ಪ್ರಕಟಣೆಯಲ್ಲಿ ನೀಡಿರುವ ಕ್ಯೂಆರ್ ಕೋಡ್ (QR Code) ಅನ್ನುಸ್ಕ್ಯಾನ್ ಮಾಡುವ ಮೂಲಕ ನೇರವಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಭವಿಷ್ಯದ ದೃಷ್ಟಿಕೋನ ಮತ್ತು ಪ್ರಾದೇಶಿಕ ಪ್ರಗತಿ

ಕಲಬುರಗಿಯಲ್ಲಿ ಸ್ಥಾಪಿತವಾಗಿರುವ ಈ ಅಕಾಡೆಮಿಯು ಕೇವಲ ಒಂದು ತರಬೇತಿ ಕೇಂದ್ರವಾಗಿ ಉಳಿಯದೆ, ಇಡೀ ಉತ್ತರ ಕರ್ನಾಟಕ ಭಾಗದ ಶೈಕ್ಷಣಿಕ ಚಿತ್ರಣವನ್ನು ಬದಲಾಯಿಸುವ ಶಕ್ತಿಯನ್ನು ಹೊಂದಿದೆ.

ಸ್ಥಳೀಯ ಯುವಕರು ನಾಗರಿಕ ಸೇವೆಗಳು ಹಾಗೂ ಉನ್ನತ ವೃತ್ತಿಪರ ಕ್ಷೇತ್ರಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಪ್ರೇರೇಪಿಸುವ ಮೂಲಕ, ಈ ಪ್ರದೇಶದಲ್ಲಿ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸಮಾನತೆಯನ್ನು ತರಲು ಇದೊಂದು ಐತಿಹಾಸಿಕ ಹೆಜ್ಜೆಯಾಗಿದೆ. ಮುಂದಿನ ದಿನಗಳಲ್ಲಿ ಈ ಕೇಂದ್ರವು ಪ್ರಮುಖ ವಿಶ್ವವಿದ್ಯಾಲಯಗಳು ಹಾಗೂ ಜಾಗತಿಕ ಮಾರ್ಗದರ್ಶನ ಜಾಲಗಳೊಂದಿಗೆ ಪಾಲುದಾರಿಕೆ ಮಾಡಿಕೊಳ್ಳುವ ಮೂಲಕ ಮತ್ತಷ್ಟು ಎತ್ತರಕ್ಕೆ ಬೆಳೆಯುವ ಸರ್ವ ಸಾಧ್ಯತೆಗಳನ್ನು ಹೊಂದಿದೆ.

ಕಲ್ಯಾಣ ಕರ್ನಾಟಕ ಭಾಗದ ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಮನೋಭಾವನೆಯನ್ನು ಹೆಚ್ಚಿಸುವ ಮತ್ತು ಅವರಿಗೆ ಉನ್ನತ ಭವಿಷ್ಯವನ್ನು ರೂಪಿಸುವ ಮಹತ್ತರ ಉದ್ದೇಶದೊಂದಿಗೆ ಕಲಬುರಗಿಯಲ್ಲಿ ಅಪ್ರಬುದ್ಧ ಅಕಾಡೆಮಿಅಯನ್ನು ಸ್ಥಾಪಿಸಲಾಗಿದೆ.



ಈ ಯೋಜನೆಯು ಕಲ್ಯಾಣ ಕರ್ನಾಟಕ ಭಾಗದ ವಿದ್ಯಾರ್ಥಿಗಳ ಶೈಕ್ಷಣಿಕ ಉನ್ನತಿಗೆ ನೆರವಾಗುವುದರ ಜೊತೆಗೆ, ಈ ಭಾಗದ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸಮಾನತೆಯನ್ನು ಸಾಧಿಸುವ ನಿಟ್ಟಿನಲ್ಲಿ ಒಂದು ಮಹತ್ವದ ಹೆಜ್ಜೆಯಾಗಿದೆ.

ಲೇಖನ: ಜಡಿಯಪ್ಪ, ಗೆದ್ಲಗಟ್ಟಿ ಉಪ ನಿರ್ದೇಶಕರು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕಲಬುರಗಿ

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR